ಸಂಪುಟ: ೦೭/ ಸಂಚಿಕೆ: ೨೦೯/ ಶುಕ್ರವಾರ ದಿನಾಂಕ : ೧೦-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 209/FRIDAY Date : 10-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಮತ್ತೆ ಮುಷ್ಕರಕ್ಕೆ ಮುಂದಾದ ಸಾರಿಗೆ ನೌಕರರು

**ಬೆಂಗಳೂರು:** ರಾಜ್ಯ ಸರ್ಕಾರ ನಿಗದಿತ ಸಮಯದೊಳಗೆ ತಮ ವಿವಿಧ ಬೇಡಿಕೆಗಳನ್ನು ಈಡೇರಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿ ಇದೇ ತಿಂಗಳ 15ರಿಂದ ಐದು ದಿನಗಳ ಕಾಲ ರಾಜ್ಯಾದ್ಯಂತ ಸಾರಿಗೆ ನೌಕರರು ಉಪವಾಸ ಸತ್ಯಾಗ್ರಹ ನಡೆಸುವುದಾಗಿ ಜಂಟಿ ಕ್ರಿಯಾ ಸಮಿತಿ ಘೋಷಿಸಿದೆ. ಬೆಂಗಳೂರು, ಹುಬ್ಬಳ್ಳಿ ಮತ್ತು ಕಲಬುರಗಿಯಲ್ಲಿ ಉಪವಾಸ ಸತ್ಯಾಗ್ರಹ ನಡೆಸಲಾಗುತ್ತಿದ್ದು, 2020 ಜನವರಿ 1ರಿಂದ ಆಗಿರುವ ಶೇ.15ರಷ್ಟು ವೇತನ ಹೆಚ್ಚಳದ ನಂತರದ 38 ತಿಂಗಳ ಬಾಕಿ ಹಣ ಪಾವತಿ, 38 ತಿಂಗಳ ಬಾಕಿ ಇರುವ ಸಂಬಳದ ಪಾವತಿ ಮತ್ತು ಶೇ.25ರಷ್ಟು ವೇತನ ಹೆಚ್ಚಳಕ್ಕಾಗಿ ಈ ಪ್ರತಿಭಟನೆ ನಡೆಸಲಾಗುತ್ತಿದೆ ಎಂದು ಸಮಿತಿ ಹೇಳಿದೆ.

ಇದರಿಂದಾಗಿ ದೀಪಾವಳಿ ಸಂದರ್ಭದಲ್ಲಿ ತಮ ತಮ ಊರುಗಳಿಗೆ ಕುಟುಂಬ ಸಮೇತ ತೆರಳುವ ಪ್ರಯಾಣಿಕರು ಸರ್ಕಾರಿ ಬಸ್ ಗಳನ್ನು ಅವಲಂಬಿಸದೆ, ದುಪ್ಪಟ್ಟು ದರ ನೀಡಿ ಖಾಸಗಿ ಬಸ್‌ಗಳಲ್ಲಿ ಪ್ರಯಾಣಿಸುವುದು ಅನಿವಾರ್ಯವಾಗಿದೆ. ಒಂದು ವೇಳೆ ಅಷ್ಟರೊಳಗೆ ಸರ್ಕಾರ ಸಂಬಂಧಪಟ್ಟವರ ಜೊತೆ ಮಾತುಕತೆ ನಡೆಸಿ ಸಂಧಾನ ಸಫಲವಾದರೆ ಸಮಸ್ಯೆ ಬಗೆಹರಿಯಲಿದೆ. ಇಲ್ಲದಿದ್ದರೆ ಪ್ರಯಾಣಿಕರ ಜೇಬಿಗೆ ಕತ್ತರಿ ಬೀಳಲಿದೆ.

ಈ ಹಿಂದೆ ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ಕೆಕೆಆರ್‌ಟಿಸಿ, ಎನ್‌ಡಬ್ಲ್ಯೂಕೆಆರ್‌ಟಿಸಿ ಸದಸ್ಯರನ್ನೊಳಗೊಂಡ ಜಂಟಿ ಕ್ರಿಯಾ ಸಮಿತಿ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡಿತ್ತು. ಆ ವೇಳೆ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರೇ ಬೇಡಿಕೆ ಈಡೇರಿಸುವುದಾಗಿ ಆಶ್ವಾಸನೆ ನೀಡಿದ್ದರು. ಹೀಗೆ ಕೊಟ್ಟ ಭರವಸೆ ಹಲವಾರು ತಿಂಗಳು ಕಳೆದರೂ ಈಡೇರಿಲ್ಲ. ಹಾಗಾಗಿ ಮುಷ್ಕರ ಶತಸಿದ್ಧ. ಮುಷ್ಕರ ಮಾಡಿಸುವುದು ತಪ್ಪಿಸುವುದು ಸಿಎಂ ಕೈಯಲ್ಲಿದೆ ಎಂದು ನೌಕರರ ಸ್ಪಷ್ಟಪಡಿಸಿದ್ದಾರೆ.

### ಸಂಪುಟ ಸಭೆಯಲ್ಲಿ ಮಹತ್ವದ ತೀರ್ಮಾನ

## ಅನ್ನಭಾಗ್ಯ 5 ಕೆಜಿ ಅಕ್ಕಿ ಬದಲು ಇಂದಿರಾ ಕಿಟ್



**ಬೆಂಗಳೂರು:** ರಾಜ್ಯ ಸರ್ಕಾರ ಅನ್ನಭಾಗ್ಯ ಯೋಜನೆಯಡಿ ಒಟ್ಟು 10 ಕೆಜಿ ಅಕ್ಕಿ ನೀಡುತ್ತಿದ್ದು, ಇನ್ನುಮುಂದೆ ಹೆಚ್ಚುವರಿಯಾಗಿ ನೀಡುತ್ತಿರುವ ಐದು ಕೆಜಿ ಅಕ್ಕಿ ಬದಲು ಇಂದಿರಾ ಆಹಾರ ಕಿಟ್ ವಿತರಣೆ ಮಾಡಲು ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದೆ.

ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಸಚಿವ ಎಚ್. ಕೆ.ಪಾಟೀಲ್ ಅವರು, ಅನ್ನಭಾಗ್ಯ ಅಕ್ಕಿಯ ಅಕ್ರಮ ಸಾಗಾಟ, ಕಳ್ಳತನ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಇಂದಿರಾ ಆಹಾರ ಕಿಟ್ ನೀಡಲು ತೀರ್ಮಾನಿಸಲಾಗಿದೆ ಎಂದರು. ಅನ್ನಭಾಗ್ಯ ಯೋಜನೆಯಡಿ ರಾಜ್ಯದ ಅಂತ್ಯೋದಯ ಮತ್ತು ಬಿಪಿಎಲ್ ಕಾರ್ಡುದಾರರಿಗೆ ಹೆಚ್ಚುವರಿಯಾಗಿ ನೀಡುತ್ತಿರುವ ಐದು ಕೆ.ಜಿ ಅಕ್ಕಿಯ ಬದಲಾಗಿ 61.19 ಕೋಟಿ ರೂ. ವೆಚ್ಚದಲ್ಲಿ ಇಂದಿರಾ ಆಹಾರ ಕಿಟ್ ನೀಡಲು ಸಚಿವ ಸಂಪುಟ ನಿರ್ಧಾರ ಕೈಗೊಂಡಿದೆ ಎಂದರು.

ಅನ್ನಭಾಗ್ಯ ಯೋಜನೆಯಡಿ 5 ಕೆ.ಜಿ ಹೆಚ್ಚುವರಿ ಅಕ್ಕಿ ನೀಡಲು ಆಯವ್ಯಯದಲ್ಲಿ ಹಂಚಿಕೆ ಮಾಡಿರುವ 6,426 ಕೋಟಿ ರೂ. ಅನುದಾನದಲ್ಲಿ 6119.52 ಕೋಟಿ ರೂ. ವೆಚ್ಚದಲ್ಲಿ ಇಂದಿರಾ ಆಹಾರ ಕಿಟ್ (ಪೌಷ್ಠಿಕ ಆಹಾರ ಕಿಟ್) ಒದಗಿಸಲು ಬಜೆಟ್ ಮರುಹಂಚಿಕೆ ಮಾಡಲು ಅನುಮೋದನೆ ನೀಡಲಾಗಿದೆ. ಇಂದಿರಾ ಕಿಟ್‌ನಲ್ಲಿ 1 ಕೆ.ಜಿ ತೊಗರಿ ಬೇಳೆ, 1 ಲೀಟರ್, ಅಡುಗೆ ಎಣ್ಣೆ, 1 ಕೆ.ಜಿ ಸಕ್ಕರೆ ಹಾಗೂ 1 ಕೆ.ಜಿ ಉಪ್ಪು ಇರಲಿದೆ ಎಂದು ಸಚಿವರು ತಿಳಿಸಿದರು. ಇನ್ನು ಈ ಬಗ್ಗೆ ಮಾತನಾಡಿದ ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಅವರು, ಕುಟುಂಬದಲ್ಲಿ ಒಬ್ಬರು, ಇಬ್ಬರು ಮಾತ್ರ ಇದ್ದರೆ ಅರ್ಧರ್ಧ ಕೆ.ಜಿ ಇರುವ ಕಿಟ್ ನೀಡಲಾಗುತ್ತದೆ. ಕುಟುಂಬದಲ್ಲಿ ಮೂರು ನಾಲ್ಕು ಮಂದಿ ಸದಸ್ಯರು ಇದ್ದರೆ ಒಂದೊಂದು ಕೆ.ಜಿಯ ಕಿಟ್ ನೀಡಲಾಗುತ್ತದೆ. ಐದಕ್ಕಿಂತ ಹೆಚ್ಚು ಮಂದಿ ಸದಸ್ಯರು ಇದ್ದರೆ ಒಂದೂವರೆ ಕೆ.ಜಿ ಇರುವ ಕಿಟ್ ವಿತರಣೆ ಮಾಡಲಾಗುತ್ತದೆ. ಇದರಿಂದ 4,48,62,192 ಫಲಾನುಭವಿಗಳಿಗೆ ಅನುಕೂಲ ಆಗಲಿದೆ ಎಂದು ವಿವರಿಸಿದರು. ಮೂಲಸೌಕರ್ಯ ಅಭಿವೃದ್ಧಿಯಲ್ಲಿ, ಮೊದಲ ಹಂತದಲ್ಲಿ 1,000 ಕೋಟಿ ರೂ. ಅಂದಾಜು ವೆಚ್ಚದಲ್ಲಿ 39 ಪ್ರಮುಖ ಸೇತುವೆಗಳ ಪುನರ್ನಿರ್ಮಾಣ ಮತ್ತು ಪುನರ್ವಸತಿಗೆ ಸಂಪುಟ ಅನುಮೋದನೆ ನೀಡಿದೆ.

ರಾಜ್ಯ ಸರ್ಕಾರ ಬಹುಮಹಡಿ ಕಟ್ಟಡಗಳಲ್ಲಿ ವಿಪತ್ತು ಪ್ರತಿಕ್ರಿಯೆ ಸಾಮರ್ಥ್ಯಗಳನ್ನು ಬಲಪಡಿಸಲು ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಗೆ 52–54 ಮೀಟರ್ ತಲುಪುವ ಸಾಮರ್ಥ್ಯವಿರುವ ವೈಮಾನಿಕ ಲ್ಯಾಡರ್ ಪ್ಲಾಟ್‌ಫಾರ್ಮ್ ವಾಹನ ಖರೀದಿಸಲು 16 ಕೋಟಿ ರೂ. ಅಂದಾಜು ವೆಚ್ಚಕ್ಕೆ ಅನುಮೋದನೆ ನೀಡಲಾಯಿತು.

## ಕಫ್ ಸಿರಪ್ ರಫ್ತಿನ ಬಗ್ಗೆ ವರದಿ ಕೇಳಿದ ವಿಶ್ವ ಆರೋಗ್ಯ ಸಂಸ್ಥೆ




**ನವದೆಹಲಿ:** ಭಾರತದಲ್ಲಿ ಹಲವಾರು ಮಕ್ಕಳ ಸಾವಿಗೆ ಕಾರಣವಾಗಿದೆ ಎನ್ನಲಾಗಿರುವ ಕೆಮ್ಮಿನ ಸಿರಪ್ ಅನ್ನು ಇತರ ದೇಶಗಳಿಗೆ ರಫ್ತು ಮಾಡಲಾಗಿದೆಯೇ ಎಂಬುದನ್ನು ತಿಳಿದುಕೊಳ್ಳುವಂತೆ ವಿಶ್ವ ಆರೋಗ್ಯ ಸಂಸ್ಥೆ ಆಗ್ರಹಿಸಿದೆ.

ಇಲ್ಲಿನ ಅಧಿಕಾರಿಗಳಿಂದ ಅಧಿಕೃತ ದೃಢೀಕರಣವನ್ನು ಪಡೆದ ನಂತರ, ಜಾಗತಿಕ ಆರೋಗ್ಯ ಸಂಸ್ಥೆಯು ಕೆಮ್ಮಿನ ಸಿರಪ್, ಕೋಲ್ಡ್ರಿಫ್ ಕುರಿತು ಗ್ಲೋಬಲ್ ಮೆಡಿಕಲ್ ಪ್ರಾಡಕ್ಟ್ ಅಲರ್ಟ್ ನೀಡುವ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ವಿಶ್ವಸಂಸ್ಥೆ ಮೂಲಗಳು ತಿಳಿಸಿವೆ. ಮಧ್ಯಪ್ರದೇಶದ ಐದು ಮಕ್ಕಳು ಗಂಭೀರ ಸ್ಥಿತಿಯಲ್ಲಿದ್ದಾರೆ, ಆದರೆ 20 ಮಕ್ಕಳು ಡೈಥಿಲೀನ್ ಗ್ಲೈಕಾಲ್ ಮತ್ತು ಎಥಿಲೀನ್ ಗ್ಲೈಕಾಲ್ ಹೊಂದಿರುವ ಕಲುಷಿತ ಕೆಮ್ಮಿನ ಸಿರಪ್ ಸೇವನೆಯಿಂದ ಉಂಟಾದ ಮೂತ್ರಪಿಂಡದ ಸೋಂಕಿನಿಂದ ಸಾವನ್ನಪ್ಪಿದ್ದಾರೆ.

ಇದಲ್ಲದೆ, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕೆಮ್ಮಿನ ಸಿರಪ್ ಸೇವಿಸಿದ ನಂತರ ರಾಜಸ್ಥಾನದಲ್ಲಿ ಕನಿಷ್ಠ ಮೂರು ಮಕ್ಕಳು ಸಾವನ್ನಪ್ಪಿದ್ದಾರೆ ಎಂದು ಆರೋಪಿಸಲಾಗಿದೆ. ದೇಶದಲ್ಲಿ ಮಕ್ಕಳ ಸಾವಿಗೆ ಕಾರಣವಾಗುವ ಕೆಮ್ಮಿನ ಸಿರಪ್ ಅನ್ನು ದಿನನಿತ್ಯದ ಪ್ರಕ್ರಿಯೆಯ ಭಾಗವಾಗಿ ಇತರ ದೇಶಗಳಿಗೆ ರಫ್ತು ಮಾಡಲಾಗಿದೆಯೇ ಎಂಬ ಬಗ್ಗೆ ವಿಶ್ವ ಆರೋಗ್ಯ ಸಂಸ್ಥೆ ಸ್ಪಷ್ಟೀಕರಣವನ್ನು ಕೇಳಿದೆ ಎಂದು ಮೂಲಗಳು ತಿಳಿಸಿವೆ. ಮಧ್ಯಪ್ರದೇಶದಲ್ಲಿ ಕಲುಷಿತ ಕೆಮ್ಮಿನ ಸಿರಪ್ ಸೇವನೆಯಿಂದ ಮಕ್ಕಳು ಸಾವನ್ನಪ್ಪಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ, ಮಾರುಕಟ್ಟೆಯಲ್ಲಿ ಬಿಡುಗಡೆ ಮಾಡುವ ಮೊದಲು ಕಚ್ಚಾ ವಸ್ತುಗಳು ಮತ್ತು ಔಷಧ ಉತ್ಪನ್ನಗಳ ಸಿದ್ಧಪಡಿಸಿದ ಸೂತ್ರೀಕರಣಗಳ ಪರೀಕ್ಷೆಯನ್ನು ಖಚಿತಪಡಿಸಿಕೊಳ್ಳುವಂತೆ ಡ್ರಗ್ಸ್ ಕಂಟ್ರೋಲರ್ ಜನರಲ್ ಆಫ್ ಇಂಡಿಯಾ ಎಲ್ಲಾ ರಾಜ್ಯ ಮತ್ತು ಔಷಧ ನಿಯಂತ್ರಕರನ್ನು ಒತ್ತಾಯಿಸಿದೆ.

ತಯಾರಣಾ ಸೌಲಭ್ಯಗಳಲ್ಲಿ ಇತ್ತೀಚೆಗೆ ನಡೆಸಿದ ತಪಾಸಣೆ ಮತ್ತು ಪ್ರಮಾಣಿತ ಗುಣಮಟ್ಟದಲ್ಲಿಲ್ಲದ ಎಂದು ಘೋಷಿಸಲಾದ ಔಷಧಿಗಳ ತನಿಖೆಯಲ್ಲಿ, ಹಲವಾರು ತಯಾರಕರು ಬಳಕೆಗೆ ಮೊದಲು ನಿಗದಿತ ಮಾನದಂಡಗಳ ಅನುಸರಣೆಗಾಗಿ ಪ್ರತಿ ಬ್ಯಾಚ್ ಸಹಾಯಕ ವಸ್ತುಗಳು ಮತ್ತು ಸಕ್ರಿಯ ಪದಾರ್ಥಗಳನ್ನು ಪರೀಕ್ಷಿಸುತ್ತಿಲ್ಲ ಎಂದು ತಿಳಿಸಿದೆ. ಮಧ್ಯಪ್ರದೇಶದ ಚಿಂದ್ವಾರದಲ್ಲಿ ಇತ್ತೀಚೆಗೆ ಮಕ್ಕಳ ಸಾವುಗಳು ವರದಿಯಾಗಿವೆ, ಇವು ಕಲುಷಿತ ಕೆಮ್ಮಿನ ಸಿರಪ್‌ಗಳಿಗೆ ಸಂಬಂಧಿಸಿವೆ ಮತ್ತು ಈ ಕೆಮ್ಮಿನ ಸಿರಪ್‌ಗಳ ಗುಣಮಟ್ಟಕ್ಕೆ ಸಂಬಂಧಿಸಿದ ಕಳವಳಗಳಿವೆ ಎಂದು ಸಲಹಾ ಸಂಸ್ಥೆ ತಿಳಿಸಿದೆ. ತಯಾರಿಕಾ ಸೌಲಭ್ಯಗಳಲ್ಲಿ ನಡೆಸಿದ ತಪಾಸಣೆಗಳಲ್ಲಿ ಮತ್ತು ಪ್ರಮಾಣಿತ ಗುಣಮಟ್ಟವನ್ನು ಹೊಂದಿಲ್ಲ ಎಂದು ಘೋಷಿಸಲಾದ ಔಷಧಿಗಳ ತನಿಖೆಗಳಲ್ಲಿ, ತಯಾರಕರು ಸೂತ್ರೀಕರಣಗಳ ತಯಾರಿಕೆಯಲ್ಲಿ ಮತ್ತು ಸಿದ್ಧಪಡಿಸಿದ ಉತ್ಪನ್ನಗಳಲ್ಲಿ ನಿಗದಿತ ಮಾನದಂಡಗಳ ಅನುಸರಣೆಯ ಪರಿಶೀಲನೆಗಾಗಿ ಪ್ರತಿ ಬ್ಯಾಚ್‌ನ ಸಹಾಯಕ ಪದಾರ್ಥಗಳು ನಿಷ್ಕ್ರಿಯ ಮತ್ತು ಸಕ್ರಿಯ ಔಷಧೀಯ ಪದಾರ್ಥಗಳ ಪರೀಕ್ಷೆಯನ್ನು ನಡೆಸುತ್ತಿಲ್ಲ ಎಂದು ಕಂಡುಬಂದಿದೆ ಎಂದು ಅಕ್ಟೋಬರ್ 7ರ ದಿನಾಂಕದ ಸಲಹಾ ಸಂಸ್ಥೆ ತಿಳಿಸಿದೆ.

### ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಂಸದ ಜಗದೀಶ್ ಶೆಟ್ಟರ್ ಸಭೆ

## ವಿವಿಧ ಅಭಿವೃದ್ಧಿಪರ ಕಾಮಗಾರಿಗಳ ಬಗ್ಗೆ ಚರ್ಚೆ

**ಬೆಳಗಾವಿ:** ಲೋಕಸಭಾ ಸದಸ್ಯರು ಹಾಗೂ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಜಗದೀಶ ಶೆಟ್ಟರ ಇವರು ಗುರುವಾರ ಬೆಳಗಾವಿ ಜಿಲ್ಲಾಧಿಕಾರಿಗಳಾದ ರೋಶನ ಮೊಹಮ್ಮದ, ಇವರ ಉಪಸ್ಥಿಯಲ್ಲಿ ಜಿಲ್ಲಾಧಿಕಾರಿಗಳ ಕಛೇರಿಯ ಸಭಾ ಭವನದಲ್ಲಿ ಬೆಳಗಾವಿ ಲೋಕಸಭಾ ವ್ಯಾಪ್ತಿಯಲ್ಲಿ ಕೇಂದ್ರ ಸರಕಾರದ ಇಲಾಖೆಗಳಾದ ರಾಷ್ಟ್ರೀಯ ಹೆದ್ದಾರಿ, ಅಭಿವೃದ್ಧಿ ಪ್ರಾಧಿಕಾರ, ವಿಮಾನಯಾನ ಇಲಾಖೆ, ಕೆಐಎಡಿಬಿ ಇಲಾಖೆ, ಕೈಕೊಳ್ಳುತ್ತಿರುವ ವಿವಿಧ ಅಭಿವೃದ್ಧಿ ಪರ ಕಾಮಗಾರಿಗಳ ಅನುಷ್ಠಾನ ಬಗ್ಗೆ ಪ್ರಗತಿ ವಿವರವನ್ನು ಪಡೆದುಕೊಂಡರು.

**ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರ:** ಬೆಳಗಾವಿ (ಶೆಗಣಮಟ್ಟಿ)–ಹುನಗುಂದ–ರಾಯಚೂರ ನೂತನ ಹೆದ್ದಾರಿ ನಿರ್ಮಾಣದ ಅಂಗವಾಗಿ ಪ್ಯಾಕೇಜ 1 ಮತ್ತು 2 ರಡಿ ನಡೆಸಬೇಕಾದ ಭೂಸ್ವಾಧೀನ ಪ್ರಕ್ರಿಯೆಯ ಬಗ್ಗೆ ಚರ್ಚಿಸಲಾಗಿ, ಈಗಾಗಲೆ ಶೇ 80 ಭೂಸ್ವಾಧೀನ ನಡೆಸಲಾದ ಬಗ್ಗೆ ತಿಳಿದುಬಂದಿತು. ಈ ಮೊದಲು ಇದ್ದ ಕೆಲವು ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲಾಗಿರುವ ವಿಷಯವನ್ನು ಅಧಿಕಾರಿಗಳು ಸಂಸದರಿಗೆ ತಿಳಿಸಿದರು. ಬೆಳಗಾವಿ ನಗರದ ಸುತ್ತಲೂ ರಿಂಗ್ / ಬೈಪಾಸ್ ರಸ್ತೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಪ್ರಗತಿಯನ್ನು ಅವಲೋಕಿಸಲಾಯಿತು. ಇದರ ಅನುಷ್ಠಾನದಲ್ಲಿ ತಲೆದೋರಿರುವ ಸಮಸ್ಯೆಗಳನ್ನು ನಿವಾರಿಸುವ ಮತ್ತು ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸುವ ಬಗ್ಗೆ ಹಾಜರಿದ್ದ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರ ಯೋಜನಾ ನಿರ್ದೇಶಕರಿಗೆ ಸೂಚಿಸಲಾಯಿತು. ಅದರಂತೆ ಬೆಳಗಾವಿ ತಾಲೂಕಿನ ನಾವಗೆ ಮತ್ತು ಬೆಳಗುಂದಿ ಗ್ರಾಮದ ನಿವಾಸಿಗಳು ನೀಡಿದ



ಜಮೀನಿಗೆ ಪರಿಹಾರಧನ ನಿಕ್ಕಿಲ್ಲವಾಗಿದ್ದು ಅದನ್ನು ಕೂಡಲೆ ವಿತರಿಸುವ ಬಗ್ಗೆ ಮುಂದಿನ ಕ್ರಮವನ್ನು ಕೈಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿಲಾಯಿತು.

**ವಿಮಾನಯಾನ ಇಲಾಖೆ:** ಬೆಳಗಾವಿ ವಿಮಾನ ನಿಲ್ದಾಣದ ಅಭಿವೃದ್ಧಿಯ ಕುರಿತು ಬೆಳಗಾವಿ ವಾಯುಸೇನೆ ಇಲಾಖೆಯು ನೀಡಬೇಕಾದ ಭೂಮಿಯ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಬರುವ ದಿನಗಳಲ್ಲಿ ಈ ಕುರಿತು ಸಹ ಒಂದು ಸೂಕ್ತ ಪರಿಹಾರ ಕಂಡುಕೊಳ್ಳುವ ಬಗ್ಗೆ ವಿಶ್ವಾಸ ವ್ಯಕ್ತ ಪಡಿಸಲಾಯಿತು. ಇಲ್ಲಿಯವರೆಗೆ ಮಳೆಗಾಲವಿದ್ದು ಈಗ ಅಂತ್ಯಗೊಂಡಿದೆ. ಬೈಪಾಸ ರಸ್ತೆ, ರಿಂಗ್ ರಸ್ತೆ ನಿರ್ಮಾಣ, ವಿಮಾನಯಾನ ಅಭಿವೃದ್ಧಿ ಹೀಗೆ ಎಲ್ಲ ಅಂಶಗಳ ಕುರಿತು ಹೆಚ್ಚಿನ ಮಹತ್ವವನ್ನು ಅಧಿಕಾರಿಗಳು ನೀಡಿ ಯಾವುದೇ ಅಡತಡೆ ಇಲ್ಲದೆ ಪ್ರಸ್ತಾಪಿತ ಕಾಮಗಾರಿಗಳನ್ನು ಮುಂಬರುವ ದಿನಗಳಲ್ಲಿ ಪೂರ್ಣಗೊಳಿಸುವ ಬಗ್ಗೆ ಶ್ರಮವಹಿಸಲು ಬೆಳಗಾವಿ ಲೋಕಸಭಾ ಸದಸ್ಯರು ಜಗದೀಶ ಶೆಟ್ಟರ ಇವರು ಸೂಚಿಸಿದರು. ಸಭೆಯಲ್ಲಿ ಜಿಲ್ಲಾಧಿಕಾರಿಗಳಾದ ಮಹಮ್ಮದ ರೋಶನ, ವಿಶೇಷ ಭೂಸ್ವಾಧೀನ ಅಧಿಕಾರಿಗಳಾದ, ಜೈನಾಪೂರ ಮತ್ತು ಚೌಹಾಣ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕರಾದ, ಭೂವನೇಶ ಕುಮಾರ ಹಾಜರಿದ್ದರು

## ಬೆಳೆ ಪರಿಹಾರ ೩೦ ದಿನಗಳಲ್ಲಿ ಜಮಾ

**ಬೆಂಗಳೂರು:** ರಾಜ್ಯದಲ್ಲಿ ಅತಿವೃಷ್ಟಿ ಮತ್ತು ನೆರೆ ಹಾವಳಿಯಿಂದ ಹಾನಿಗೊಳಗಾದ ರೈತರಿಗೆ ಪರಿಹಾರ ನೀಡುವ ಪ್ರಕ್ರಿಯೆ ಆರಂಭವಾಗಿದೆ. ಮುಂದಿನ 30 ದಿನಗಳಲ್ಲಿ ಎಲ್ಲ ಸಂತ್ರಸ್ತ ರೈತರ ಬ್ಯಾಂಕ್ ಖಾತೆಗಳಿಗೆ ಪರಿಹಾರದ ಹಣ ಜಮಾ ಆಗಲಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ



ಮೊದಲ ಸುತ್ತಿನಲ್ಲಿ, ಒಂಬತ್ತು ಜಿಲ್ಲೆಗಳ ಸುಮಾರು 5.29 ಲಕ್ಷ ಹೆಕ್ಟೇರ್‌ಗಳ ನಷ್ಟಕ್ಕೆ ಪರಿಹಾರ ಬಿಡುಗಡೆ ಮಾಡಲಾಗುವುದು. ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ಪಡೆ (ಎನ್‌ಡಿಆರ್‌ಎಫ್) ಮಾನದಂಡಗಳ ಅಡಿಯಲ್ಲಿ, ಒಣ ಭೂಮಿಗೆ ಹೆಕ್ಟೇರ್‌ಗೆ 8,500 ರೂ., ನೀರಾವರಿ ಭೂಮಿಗೆ ಹೆಕ್ಟೇರ್‌ಗೆ 17,000 ರೂ. ಮತ್ತು ದೀರ್ಘಕಾಲಿಕ ಬೆಳೆಗಳಿಗೆ ಹೆಕ್ಟೇರ್‌ಗೆ 22,500 ರೂ. ಪರಿಹಾರವನ್ನು ನೀಡಲಾಗುತ್ತದೆ. ಇದರೊಂದಿಗೆ ಸರ್ಕಾರವು ರೈತರಿಗೆ ಹೆಕ್ಟೇರ್‌ಗೆ 8,500 ರೂ. ಹೆಚ್ಚುವರಿ ಪಾವತಿಯನ್ನು ಸಹ ಪಾವತಿಸುತ್ತಿದೆ. ಪರಿಹಾರ ಹಣ ರೈತರ ಬ್ಯಾಂಕ್ ಖಾತೆಗಳಿಗೆ ನೇರ ನಿಧಿ ವರ್ಗಾವಣೆಯಾಗಲಿದೆ.

ಕರ್ನಾಟಕದ ಪರಿಹಾರ ಬಿಡುಗಡೆ ವಿಧಾನವು ದೇಶದಲ್ಲಿ ಅತ್ಯಂತ ತ್ವರಿತ ಮತ್ತು ಪಾರದರ್ಶಕವಾಗಿದೆ ಎಂದು ಕೃಷ್ಣ ಬೈರೇಗೌಡ ಹೇಳಿದರು. ಇತ್ತೀಚೆಗೆ ಹಾನಿಗೊಳಗಾದ ಸುಮಾರು 7.24 ಲಕ್ಷ ಹೆಕ್ಟೇರ್‌ಗಳಷ್ಟು ಬೆಳೆ ಪಾವತಿ 10 ದಿನಗಳಲ್ಲಿ ಪ್ರಾರಂಭವಾಗಲಿದೆ ಎಂದು ಸಚಿವರು ಹೇಳಿದರು.

ಪ್ರಸ್ತುತ, ಎರಡನೇ ಸುತ್ತಿನ ಪ್ರವಾಹ ಮತ್ತು ಬೆಳೆ ನಷ್ಟದ ಅಂದಾಜು ಮಾಡಲು ಜಂಟಿ ಸಮೀಕ್ಷೆಯನ್ನು ನಡೆಸಲಾಗುತ್ತಿದೆ. ಮುಖ್ಯವಾಗಿ ಕಲಬುರಗಿ, ಯಾದಗಿರಿ, ಬೀದರ್ ಮತ್ತು ವಿಜಯಪುರ ಜಿಲ್ಲೆಗಳ ಸುಮಾರು 7.24 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿನ ನಷ್ಟವನ್ನು ಅಂದಾಜು ಮಾಡಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಇತ್ತೀಚೆಗೆ ಕಲಬುರಗಿ, ಯಾದಗಿರಿ, ಬೀದರ್ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಪ್ರವಾಹ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆಯನ್ನು ನಡೆಸಲಾಗಿತ್ತು. ಸೆಪ್ಟೆಂಬರ್ ಮೊದಲ ವಾರದವರೆಗಿನ ಆರಂಭಿಕ ಸಮೀಕ್ಷೆಯ ಪ್ರಕಾರ, 5.29 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಮತ್ತು ತೋಟಗಾರಿಕೆ ಬೆಳೆಗಳು ಹಾನಿಗೊಳಗಾಗಿವೆ. ಈಗಾಗಲೇ ಜಂಟಿ ಸಮೀಕ್ಷೆ ಪೂರ್ಣಗೊಂಡಿದ್ದು, ಜಿಲ್ಲಾಡಳಿತಗಳು ಪಾವತಿಗೆ ಸಿದ್ಧವಾಗಿದ್ದವು ಆದರೆ ಸೆಪ್ಟೆಂಬರ್ ಎರಡನೇ ವಾರದಲ್ಲಿ ಮತ್ತೆ ಮಳೆಯಾದ ಕಾರಣ ಪ್ಲಾನ್ ತಲೆಕೆಳಗಾಯಿತು.

ಎಐಸಿಸಿ ಅಧ್ಯಕ್ಷ ಮತ್ತು ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಮತ್ತು ಬಿಜೆಪಿ ನಾಯಕರು ಪರಿಹಾರವನ್ನು ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿಯನ್ನು ಒತ್ತಾಯಿಸಿದ್ದರು. ಬಿಜೆಪಿ ನಾಯಕರು ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿದ್ದರು ಮತ್ತು ಅವರು ಸಿಎಂ ಅವರ ವೈಮಾನಿಕ ಸಮೀಕ್ಷೆಯನ್ನು ಫೋಟೋ–ಶೋಆಪ್ ಎಂದು ಕರೆದಿದ್ದರು.

## ಮುಡಾ ಪ್ರಕರಣ: ತನಿಖಾಧಿಕಾರಿ ಬದಲಾವಣೆ ಕೋರಿದ್ದ ಅರ್ಜಿ ವಜಾ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಪ್ರಕರಣದ ತನಿಖಾಧಿಕಾರಿಯನ್ನು ಬದಲಾಯಿಸುವಂತೆ ಕೋರಿ ದೂರುದಾರ ಸ್ನೇಹಮಯಿ ಕೃಷ್ಣ ಅವರು ಸಲ್ಲಿಸಿದ್ದ ಅರ್ಜಿಯನ್ನು ಗುರುವಾರ ಕೋರ್ಟ್ ವಜಾಗೊಳಿಸಿದೆ.

ಮುಡಾ ಪ್ರಕರಣದ ತನಿಖಾಧಿಕಾರಿಯಾಗಿರುವ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಉದೇಶ್ ಅವರನ್ನು ಬದಲಾವಣೆ ಮಾಡಿ, ಬೇರೆ ಅಧಿಕಾರಿ ನೇಮಿಸುವಂತೆ ಲೋಕಾಯುಕ್ತರಿಗೆ ನಿರ್ದೇಶಿಸುವಂತೆ ಕೋರಿ ಸ್ನೇಹಮಯಿ ಕೃಷ್ಣ ಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು.

ಅರ್ಜಿಯ ವಿಚಾರಣೆ ನಡೆಸಿದ ಬೆಂಗಳೂರು ಹೆಚ್ಚುವರಿ ನಗರ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯವು ಸ್ನೇಹಮಯಿ ಕೃಷ್ಣ ವಿನಂತಿಯನ್ನು ತಿರಸ್ಕರಿಸಿತು ಮತ್ತು ಬದಲಾಗಿ ನಡೆಯುತ್ತಿರುವ ತನಿಖೆಯನ್ನು "ಸಾಧ್ಯವಾದಷ್ಟು ಬೇಗ" ಮತ್ತು ಗರಿಷ್ಠ ಎರಡು ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸಲು ಲೋಕಾಯುಕ್ತರಿಗೆ ನಿರ್ದೇಶಿಸಿದೆ. ಸಮಗ್ರ ವರದಿಯನ್ನು ಸಲ್ಲಿಸಲು ಹೆಚ್ಚಿನ ಸಮಯ ವಿಸ್ತರಿಸಲಾಗುವುದಿಲ್ಲ ಎಂದು ಆದೇಶದಲ್ಲಿ ನಿರ್ದಿಷ್ಟವಾಗಿ ಹೇಳಿ, ವಿಚಾರಣೆಯನ್ನು ನವೆಂಬರ್ 15ಕ್ಕೆ ಮುಂದೂಡಿದೆ.

ಇನ್ನು ಲೋಕಾಯುಕ್ತ 'ಬಿ' ರಿಪೋರ್ಟ್ ಪ್ರಶ್ನಿಸಿರುವುದಕ್ಕೆ ಕೋರ್ಟ್ ಯಾವುದೇ ಆದೇಶ ನೀಡಿಲ್ಲ. ತನಿಖೆ ಪೂರ್ಣಗೊಂಡ ಬಳಿಕವೇ ಬಿ ರಿಪೋರ್ಟ್ ಬಗ್ಗೆ ತೀರ್ಮಾನ ಮಾಡುವುದಾಗಿ ಕೋರ್ಟ್ ತಿಳಿಸಿದೆ. ಹೀಗಾಗಿ ಎರಡು ತಿಂಗಳಲ್ಲಿ ತನಿಖೆ ಪೂರ್ಣಗೊಳಿಸಲು ಲೋಕಾಯುಕ್ತ ಪೊಲೀಸರಿಗೆ ಸೂಚನೆ ನೀಡಿದೆ.




### ಚಡಚಣ ಎಸ್‌ಬಿಐ ಬ್ಯಾಂಕ್ ದರೋಡೆ ಪ್ರಕರಣ

## ಹೊರ ರಾಜ್ಯದ ನಾಲ್ವರ ಬಂಧನ

**ವಿಜಯಪುರ:** ಚಡಚಣ ಪಟ್ಟಣದ ಎಸ್‌ಬಿಐ. ಬ್ಯಾಂಕ್ ದರೋಡೆ ಪ್ರಕರಣದಲ್ಲಿ ಭಾಗಿಯಾದ ಮಹಾರಾಷ್ಟ್ರ–ಬಿಹಾರ ಮೂಲದ ನಾಲ್ವರು ಆರೋಪಿಗಳನ್ನು ಬಂಧಿಸುವಲ್ಲಿ ವಿಜಯಪುರ ಪೊಲೀಸರು ಯಶಸ್ವಿಯಾಗಿದ್ದಾರೆ ಎಂದು ಎಡಿಜಿಪಿ (ಕಾ.ಸು) ಆರ್.ಹಿತೇಂದ್ರ ತಿಳಿಸಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಪ್ರಕರಣ ಬೇಧಿಸುವಲ್ಲಿ ವಿಜಯಪುರ ಪೊಲೀಸರು ಉತ್ತಮ ಕಾರ್ಯಾಚರಣೆ ನಡೆಸಿದ್ದಾರೆ. ಬಂಧಿತ ಆರೋಪಿಗಳಾದ ಬಿಹಾರದ ಸಮಸ್ತಿಪುರ ನಿವಾಸಿಗಳಾದ ರಾಕೇಶ ಕುಮಾರ ಶಿವಾಜಿ ಸಹಾನಿ (22), ರಾಜಕುಮಾರ ರಾಮಲಾಲ್ ಪಾಸ್ವಾನ (21) ಹಾಗೂ ರಕ್ಷಕುಮಾರ ಮದನ ಮಾತೋ (21) ಎಂದು ಗುರುತಿಸಲಾಗಿದೆ. ಮಹಾರಾಷ್ಟ್ರ ಮೂಲದ ಆರೋಪಿಯ ಹೆಸರು ಪೊಲೀಸರು ತನಿಖೆಯ ದೃಷ್ಟಿಯಿಂದ ಆತನ ಹೆಸರು ಬಹಿರಂಗೊಳಿಸಲು ಆಗದು ಎಂದರು.ಬ್ಯಾಂಕ್ ದರೋಡೆ ಪ್ರಕರಣದಲ್ಲಿ ಒಟ್ಟಾರೆಯಾಗಿ 9.01 ಕೆಜಿ ಬಂಗಾರ ಹಾಗೂ 86,31,22 ರೂ. ನಗದು ಜಪ್ತಿ ಮಾಡಿಕೊಳ್ಳಲಾಗಿದೆ. ಉಳಿದ ಚಿನ್ನಾಭರಣ, ನಗದು ಹಣವನ್ನು ಅಧಿಕಾರಿಗಳು ಶೀಘ್ರವೇ ಪತ್ತೆ ಹಚ್ಚಲಿದ್ದಾರೆ ಎಂದರು. ಕಳೆದ ಸೆಪ್ಟೆಂಬರ್ 16 ರಂದು ಚಡಚಣ ಎಸ್‌ಬಿಐ ಬ್ಯಾಂಕ್ ದರೋಡೆ ನಡೆದಿತ್ತು. ಪ್ರಕರಣದಲ್ಲಿ 20 ಕೆ.ಜಿ ಚಿನ್ನಾಭರಣ ಹಾಗೂ 1 ಕೋಟಿ ರೂ. ನಗದು ದರೋಡೆ ಮಾಡಿಕೊಂಡು ಪರಾರಿಯಾಗಿದ್ದರು ಎಂದರು.

ಆರೋಪಿತರು ಕೃತ್ಯ ಎಸಗಿ ಪರಾರಿಯಾಗಲು ಬಳಸಿದ್ದ ಮಾರುತಿ ಈಕೋ ಕಾರು, ಮಹಾರಾಷ್ಟ್ರ ರಾಜ್ಯದ ಸೊಲ್ಲಾಪುರ ಜಿಲ್ಲೆಯ ಹುಲಜಂತಿ ಗ್ರಾಮದಲ್ಲಿ ಅಪಘಾತಕ್ಕೀಡಾಗಿತ್ತು. ಅಲ್ಲಿ ಸಾರ್ವಜನಿಕರು ಸೇರಿ ಸುತ್ತುವರೆಯುತ್ತಿದ್ದಂತೆ ಕಾರಿನ ಚಾಲಕನು ಪಿಸ್ತೂಲ್ ತೋರಿಸಿ, ಸಾರ್ವಜನಿಕರನ್ನು ಬೆದರಿಸಿ ಕಾರನ್ನು ಸ್ಥಳದಲ್ಲೇ ಬಿಟ್ಟು ಪರಾರಿಯಾಗಿದ್ದ, ಈ ಸುಳಿವು ಆಧರಿಸಿ ತನಿಖಾ ತಂಡವು ತಕ್ಷಣವೇ ಸ್ಥಳಕ್ಕೆ ಧಾವಿಸಿ, ಕಾರಿನಲ್ಲಿದ್ದ 888.33 ಗ್ರಾಂ ಚಿನ್ನದ ಆಭರಣಗಳಿದ್ದ 21 ಪ್ಯಾಕೇಟ್ ಹಾಗೂ 1,03,160 ರೂ. ನಗದು ಹಣವನ್ನು ಜಪ್ತಿ ಮಾಡಿಕೊಂಡಿದ್ದಾರೆ.

## ನ.1 ರಂದು ಅದ್ದೂರಿ ರಾಜ್ಯೋತ್ಸವ: ಕರಾಳ ದಿನಾಚರಣೆಗೆ ಅವಕಾಶ ಇಲ್ಲ

**ಬೆಳಗಾವಿ:** ಪ್ರತಿವರ್ಷದಂತೆ ಈ ಬಾರಿಯೂ ನ.1 ರಂದು ಕರ್ನಾಟಕ ರಾಜ್ಯೋತ್ಸವ ಆಚರಣೆಯನ್ನು ವಿಜೃಂಭಣೆಯಿಂದ ಹಾಗೂ ಮಾದರಿ ರಾಜ್ಯೋತ್ಸವ ಆಚರಿಸಲು ಸರ್ವ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ತಿಳಿಸಿದರು.

ಬೆಳಗಾವಿ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಗುರುವಾರ (ಅ.9) ಜರುಗಿದ ಕರ್ನಾಟಕ ರಾಜ್ಯೋತ್ಸವ ದಿನಾಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನ.1 ರಂದು ಕರ್ನಾಟಕ ರಾಜ್ಯೋತ್ಸವವನ್ನು ಬೆಳಗಾವಿಯಲ್ಲಿ ಅತೀ ವಿಜೃಂಭಣೆಯಿಂದ ಆಚರಿಸಲಾಗುವುದು. ರಾಜ್ಯೋತ್ಸವದ ಹಿನ್ನೆಲೆಯಲ್ಲಿ ಬೆಳಗಾವಿ ನಗರದಲ್ಲಿ ವಿದ್ಯುತ್ ದೀಪಾಲಂಕಾರಕ್ಕೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ರಾಜ್ಯೋತ್ಸವ ದಿನದಂದು ನಗರದಲ್ಲಿ ಲಕ್ಷಾಂತರ ಜನ ಸೇರುವುದರಿಂದ ಸಾರ್ವಜನಿಕರಿಗೆ ಸಮರ್ಪಕ ಕುಡಿಯುವ ನೀರು ಹಾಗೂ ಸಂಚಾರಿ ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲು ಸೂಚಿಸಿದರು. ರಾಜ್ಯೋತ್ಸವದ ಹಿನ್ನೆಲೆಯಲ್ಲಿ ಕನ್ನಡ ನಾಡು ನುಡಿಗಾಗಿ ಶ್ರಮಿಸಿದ ಕನ್ನಡ ಹೋರಾಟಗಾರರಿಗೆ ಸನ್ಮಾನ ಮಾಡಲಾಗುವದು. ಕನ್ನಡ ಪರ ಹೋರಾಟಗಾರರು ಹಾಗೂ ಸಾಧಕರಿಗೆ ಸನ್ಮಾನಿಸಲು ಪ್ರತ್ಯೇಕ ಸಮಿತಿಗಳನ್ನು ರಚಿಸಲಾಗುವುದು. ಈ ಬಾರಿ ರಾಜ್ಯೋತ್ಸವ ಮೆರವಣಿಗೆಗೆ ಆಗಮಿಸುವ ಸಾರ್ವಜನಿಕರಿಗಾಗಿ ಗ್ಯಾಲರಿ ವ್ಯವಸ್ಥೆ ಮಾಡಲು ತಿಳಿಸಿದರು.

ನ.1 ರಂದು ಜರುಗಲಿರುವ ರಾಜ್ಯೋತ್ಸವದ ಭವ್ಯ ಮೆರವಣಿಗೆ ಮಾರ್ಗದುದ್ದಕ್ಕೂ ಕನ್ನಡ ನಾಡಿನ ಮಹನಿಯರ ಭಾವಚಿತ್ರಗಳನ್ನು ಅಳವಡಿಸುವುದರ ಜೊತೆಗೆ ರೂಪಕಗಳಿಗೆ ಪ್ರಶಸ್ತಿ ನೀಡಲಾಗುವುದು.





ಬೆಳಗಾವಿಯ ರಾಜ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲು 2 ಕೋಟಿ ರೂ.ಗಳ ಅನುದಾನಕ್ಕಾಗಿ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ತಿಳಿಸಿದರು. ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿರುವ ವೇದಿಕೆ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ವೇದಿಕೆ ಸಿದ್ಧತೆ, ಧ್ವಜಾರೋಹಣ, ಆಮಂತ್ರಣ ಪತ್ರಿಕೆ, ಪಥ ಸಂಚಲನ, ಸಾಧಕರಿಗೆ ಸನ್ಮಾನ, ಮೆರವಣಿಗೆ, ರೂಪಕ ವಾಹನಗಳಿಗೆ ಅನುಮತಿ, ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ ಕುರಿತು ಚರ್ಚಿಸಲಾಯಿತು.

ನಗರ ಪೊಲೀಸ್ ಆಯುಕ್ತರಾದ ಭೋರಸೆ ಗುಲಾಬರಾವ್ ಭೂಷಣ ಅವರು ಮಾತನಾಡಿ, ರಾಜ್ಯೋತ್ಸವ ದಿನದಂದು ಕನ್ನಡಪರ ಸಂಘಟನೆಗಳಿಂದ ಹಾಕಲಾಗುವ ವೇದಿಕೆಗಳ ವಿವರಗಳನ್ನು ನಿಡಿದಲ್ಲಿ ಈ ಕುರಿತು ಪರಿಶೀಲಿಸಿ ವೇದಿಕೆ ಸ್ಥಾಪನೆಗೆ ಅನುಕೂಲ ಮಾಡಿ ಕೊಡಲಾಗುವದು. ಮೆರವಣಿಗೆ ಸಂದರ್ಭದಲ್ಲಿ ಅಸಭ್ಯ ವರ್ತನೆ ತೋರಿದವರ ವಿರುದ್ಧ ಮುಲಾಜಿಲ್ಲದೆ ಕ್ರಮ ವಹಿಸಲಾಗುವದು ಎಂದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ ಅವರು ಮಾತನಾಡಿ, ಡಿ.ಜೆ. ಸಂಸ್ಕೃತಿಯನ್ನು ಬಿಟ್ಟು ಕನ್ನಡ ನಾಡಿನ ಸಂಸ್ಕತಿಯ ವಾದ್ಯಮೇಳಗಳನ್ನು ಬಳಸುವ ಮೂಲಕ ರಾಜ್ಯೋತ್ಸವದಲ್ಲಿ ಕನ್ನಡ ನಾಡಿನ ಪಾರಂಪರಿಕ ಸಂಸ್ಕೃತಿಗೆ ನಾಂದಿ ಹಾಡಲು ಹೇಳಿದರು.

ಕನ್ನಡ ಪರ ಹೋರಾಟಗಾರರಾದ ಶ್ರಿನಿವಾಸ ತಾಳೂಕರ ಅವರು ಮಾತನಾಡಿ, ಜಿಲ್ಲಾಡಳಿತವು ರಾಜ್ಯೋತ್ಸವವನ್ನು ಅತೀ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲ ನಾಮಫಲಕಗಳನ್ನು ರಾಜ್ಯೋತ್ಸವಕ್ಕೂ ಮುನ್ನ ಕನ್ನಡದಲ್ಲಿ ಅಳವಡಿಸಬೇಕು. ಸುವರ್ಣ ವಿಧಾನ ಸೌಧದ ಆವರಣದಲ್ಲಿ ತಾಯಿ ಭುವನೇಶ್ವರಿಯ 108 ಅಡಿಯ ಪ್ರತಿಮೆ ಸ್ಥಾಪನೆಗೆ, ಮುಂಜಾನೆಯ ಮೆರವಣಿಗೆಯಲ್ಲಿ ಭಾಗವಹಿಸುವ ಕಲಾ ತಂಡಗಳ ಪ್ರದರ್ಶನವನ್ನು ಸಾಯಂಕಾಲವು ಚನ್ನಮ್ಮ ವೃತ್ತದಲ್ಲಿ ಪ್ರದರ್ಶಿಸಲು ಮನವಿ ಮಾಡಿದರು. ಕನ್ನಡ ಪರ ಹೋರಾಟಗಾರರಾದ ಮಹದೇವ ತಳವಾರ ಅವರು ಮಾತನಾಡಿದರು. ಕನ್ನಡ ಪರ ಹೋರಾಟಗಾರರಾದ ಅನಂತಕುಮಾರ ಬ್ಯಾಕೂಡ ಅವರು ಮಾತನಾಡಿ, ಬೆಳಗಾವಿ ರಾಜ್ಯೋತ್ಸವ ಆಚರಣೆಗಾಗಿ ಸರಕಾರದಿಂದ ಹೆಚ್ಚಿನ ಅನುದಾನ ತರುವ ನಿಟ್ಟಿನಲ್ಲಿ ಸಾಕಷ್ಟು ಬಾರಿ ಮನವಿ ಸಲ್ಲಿಸಲಾಗಿದೆ. ಬೆಳಗಾವಿ ರಾಜ್ಯೋತ್ಸವ ಸಭೆಗೆ ಜಿಲ್ಲೆಯ ಶಾಸಕರು ಜನಪ್ರತಿನಿಧಿಗಳನ್ನು ಆಹ್ವಾನಿಸಬೇಕು. ದಸರಾ ಉದ್ಘಾಟನೆಯಂತೆ ಗಣ್ಯರಿಂದ ಬೆಳಗಾವಿಯ ರಾಜ್ಯೋತ್ಸವ ಉದ್ಘಾಟನೆಗೆ, ರಾಜ್ಯೋತ್ಸವ ದಿನದಂದು ರಕ್ತದಾನ ಶಿಬಿರ, ನೇತ್ರದಾನ ಶಿಬಿರಗಳನ್ನು ಆಯೋಜಿಸಲು ಮನವಿ.

ಮೆರವಣಿಗೆ ಸಂದರ್ಭದಲ್ಲಿ ಚನ್ನಮ್ಮ ವೃತ್ತದಿಂದ ಶನಿವಾರ ಕೂಟದ ವರೆಗೆ ವಿವಿಧ ಸಂಘಟನೆಗಳ ವೇದಿಕೆ ಸ್ಥಾಪನೆಗೆ ಅನುವು ಮಾಡಿಕೊಡಬೇಕು. ಸಾರ್ವಜನಿಕರಿಗೆ ಕುಡಿಯುವ ನೀರಿನ ಹಾಗೂ ಸಂಚಾರಿ ಶೌಚಾಲಯಗಳ ವ್ಯವಸ್ಥೆ ಕಲ್ಪಿಸುವ ಕುರಿತು. ರಾಜ್ಯೋತ್ಸವ ದಿನದಂದು ಮದ್ಯ ಮಾರಾಟ ನಿಷೇಧಿಸಲು, ಜಿಲ್ಲಾಡಳಿತದಿಂದ ಬೆಳವಡಿ ಮಲ್ಲಮಳ ರೂಪಕ ತಯಾರಿಸುವ ಕುರಿತು ವಿವಿಧ ಕನ್ನಡಪರ ಹೋರಾಟಗಾರರು, ಮುಖಂಡರುಗಳು ತಮ್ಮ ಸಲಹೆಗಳನ್ನು ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ವಿದ್ಯಾವತಿ ಭಜಂತ್ರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು, ಮುಖಂಡರುಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

### ಕರಾಳ ದಿನಾಚರಣೆಗೆ ವಿರೋಧ

ಕರಾಳ ದಿನಾಚರಣೆಗೆ ಯಾವುದೇ ಕಾರಣಕ್ಕೂ ಅನುಮತಿ ನೀಡಬಾರದು ಎಂಬ ಕನ್ನಡ ಪರ ಸಂಘಟನೆಗಳ ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು ಈ ಬಾರಿ ಯಾವುದೇ ಕಾರಣಕ್ಕೂ ಕರಾಳ ದಿನಾಚರಣೆಗೆ ಅನುಮತಿ ನೀಡಲಾಗುವುದಿಲ್ಲ ಎಂದು ಸಭೆಗೆ ತಿಳಿಸಿದರು.

190ನೆಯ ಮಾಸಿಕ ಶಿವಾನುಭವ ಗೋಷ್ಠಿಯಲ್ಲಿ ಪ್ರವಚನಕಾರ್ತಿ ಕೀರ್ತನಾ ಏಣಿಗಿಮಠ ಅಭಿಪ್ರಾಯ

# ವಿದ್ಯೆ, ಕಲೆ ನಮ್ಮ ಜೀವನದ ಶಾಶ್ವತ ಮಿತ್ರರು

**ಗೋಕಾಕ:** ಜಗತ್ತಿನಲ್ಲಿರುವ ಸಮಸ್ತ ಜೀವ ರಾಶಿಗಳಲ್ಲಿ ಮಾನವನ ಜೀವನ ಅತ್ಯಂತ ವಿಶಿಷ್ಟವಾದದ್ದಾಗಿದೆ. ಅದಕ್ಕಾಗಿ ನಾವು ಜೀವನದಲ್ಲಿ ಉತ್ತಮ ಗುಣಾದರ್ಶಗಳನ್ನು ಅಳವಡಿಸಿಕೊಳ್ಳುವ ಮೂಲಕ ಜೀವನ ಸಾರ್ಥಕ ಪಡಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ವಿದ್ಯೆ ಮತ್ತು ಕಲೆ ನಮ್ಮ ಜೀವನದ ಶಾಶ್ವತ ಮಿತ್ರರಾಗಿದ್ದಾರೆ ಎಂದು ಪ್ರವಚನಕಾರ್ತಿ ಹಾಗೂ ಚಿಂತಕರಾಗಿರುವ ಕೀರ್ತನಾ ಕಾರ್ತಿಕ್ ಏಣಿಗಿಮಠ ಅಭಿಪ್ರಾಯಪಟ್ಟರು.

ಅವರು, ಮಂಗಳವಾರದಂದು ನಗರದ ಶ್ರೀ ಶೂನ್ಯ ಸಂಪಾದನ ಮಠದಲ್ಲಿ ಬಸವೇಶ್ವರ ಧರ್ಮ ಪ್ರಚಾರಕ ಸಂಸ್ಥೆ, ವಚನ ಸಾಹಿತ್ಯ ಚಿಂತನ ಮಂಥನ ವೇದಿಕೆ, ಲಿಂಗಾಯತ ಮಹಿಳಾ ವೇದಿಕೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ 190ನೆಯ ಮಾಸಿಕ ಶಿವಾನುಭವ



ಗೋಷ್ಠಿಯಲ್ಲಿ ಚಿಂತನಕಾರರಾಗಿ ಭಾಗವಹಿಸಿ ಮಾತನಾಡುತ್ತಿದ್ದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ "ಪರಿಸರ ಮತ್ತು ಪರಿಸರ ಸಂರಕ್ಷಣೆ" ಎಂಬ ವಿಷಯದ ಕುರಿತು ಚಿತ್ರಕಲಾ ಸ್ಪರ್ಧೆ ಏರ್ಪಡಿಸಲಾಗಿತ್ತು. ಈ ಸ್ಪರ್ಧೆಯ ಪ್ರಾಥಮಿಕ ವಿಭಾಗದಲ್ಲಿ ಕುಮಾರಿ ಸಾನ್ವಿ ಸಿಂಗಾಳಪೂರ, ಕುಮಾರಿ ಪೂರ್ವಿ ಅತ್ತಿಮರದ ಹಾಗೂ ಕುಮಾರಿ ರಕ್ಷಿತಾ ಪಡತಾರೆ ಕ್ರಮವಾಗಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದರೆ, ಪ್ರೌಢ ವಿಭಾಗದಲ್ಲಿ ಕುಮಾರ್ ಭರತ್ ಸುತಾರ್, ಕುಮಾರಿ ಚೈತ್ರ ಚೌಹಾನ್ ಹಾಗೂ ಕುಮಾರಿ ರಿಜಾ ಕಾಗಜಿ ಕ್ರಮವಾಗಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದುಕೊಂಡರು. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶೂನ್ಯ ಸಂಪಾದನ ಮಠದ ಪೀಠಾಧಿಪತಿ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಜಿಯವರು ವಹಿಸಿದ್ದರು.

ವೇದಿಕೆಯ ಮೇಲೆ ಶ್ರೀ ಮಠದ ಉತ್ತರಾಧಿಕಾರಿ ಪೂಜ್ಯ ಬಸವಪ್ರಭು ದೇವರು ಹಾಗೂ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡಿದ್ದ ಬಸನಗೌಡ ಪಾಟೀಲ್, ಶ್ರೀಮತಿ ಭಾರತಿ ಮರೆನ್ನವರ ಹಾಗೂ ದಾಸೋಹಿಗಳಾದ ಮಲ್ಲಿಕಾರ್ಜುನ ಯಕ್ಸಂಬಿ ಹಾಗೂ ಶ್ರೀಮತಿ ಅನಸೂಯಾ ಪಾಟೀಲ್ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಶ್ರೀಮತಿ ವಿಜಯಲಕ್ಷ್ಮಿ ಹಿರೇಮಠ ಸಂಗೀತ ಸೇವೆ ನಡೆಸಿಕೊಟ್ಟರು. ಶಿಕ್ಷಕ ಆರ್. ಎಲ್. ಮಿರ್ಜಿ ಕಾರ್ಯಕ್ರಮ ನಿರೂಪಿಸಿದರೆ ಕೊನೆಯಲ್ಲಿ ಎಸ್. ಕೆ. ಮಠದ ವಂದಿಸಿದರು.

# ವಾಲ್ಮೀಕಿಯವರಿಂದ ಜಗತ್ತಿಗೆ ವಿಶಿಷ್ಟ ಕೊಡುಗೆ



**ತಾಳಿಕೋಟೆ:** ಬುಡಕಟ್ಟು ಸಮುದಾಯದಲ್ಲಿ ಜನಿಸಿದ ಶ್ರೀ ಮಹರ್ಷಿ ವಾಲ್ಮೀಕಿಯವರು ರಾಮಾಯಣ ಮಹಾಕಾವ್ಯ ರಚಿಸುವ ಮೂಲಕ ಜಗತ್ತಿಗೆ ವಿಶಿಷ್ಟ ಕೊಡುಗೆ ನೀಡಿದರು ಇಂತಹ ಮಹನೀಯರನ್ನು ಒಂದು ಸಮುದಾಯಕ್ಕೆ ಸೀಮಿತಗೊಳಿಸದೆ ರಾಷ್ಟ್ರೀಯ ನಾಯಕರನ್ನಾಗಿ ನೋಡಬೇಕು ಎಂದು ಪ್ರಾಚಾರ್ಯರು ಆರ್ ಎಂ ಬಂಟನೂರ್ ಹೇಳಿದರು.

ಸ್ಥಳೀಯ ಶ್ರೀ ಖಾಸ್ಗತೇಶ್ವರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಅವರ ಜಯಂತಿಯನ್ನು ಭಾವಚಿತ್ರಕ್ಕೆ ಪುಷ್ಪನಮನ ಹಾಗೂ ಗೌರವ ಸಮರ್ಪಣೆ ಸಲ್ಲಿಸಿ ಮಾತನಾಡುತ್ತಿದ್ದ ಅವರು ಮಹರ್ಷಿ ವಾಲ್ಮೀಕಿ ಅವರು ರಾಮಾಯಣ ರಚಿಸಿದಂತಹ ಮಹಾನ್ ವ್ಯಕ್ತಿಯಾಗಿದ್ದು, ಅವರ ಜಯಂತಿಗಳು ಕೇವಲ ಆಚರಣೆಗೆ ಸೀಮಿತವಾಗದೇ ಮಹನೀಯರ ಆಚಾರ ವಿಚಾರಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಸರ್ವ ಸಿಬ್ಬಂದಿ ವರ್ಗ ಹಾಗೂ ಎರಡು ಮತ್ತು ನಾಲ್ಕನೇ ಸೆಮಿಸ್ಟರನ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಪಾರ್ವತಿ ಪ್ರಾರ್ಥಿಸಿದರು. ಭಾರತಿ ಗೌಡರ್ ಸ್ವಾಗತಿಸಿದ್ದರು. ಸಂಗೀತ ಯರಗಲ್ ನಿರೂಪಿಸಿದರು.



## ಬಾಲಚಂದ್ರ ಜಾರಕಿಹೊಳಿ, ಅಣ್ಣಾಸಾಹೇಬ ಜೊಲ್ಲೆಗೆ ಸನ್ಮಾನ

**ಬೆಳಗಾವಿ:** ಎಂ.ಕೆ.ಹುಬ್ಬಳ್ಳಿಯ ಪ್ರತಿಷ್ಠಿತ ಶ್ರೀ ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿಯ ನೂತನ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಆಡಳಿಯ ಮಂಡಳಿಯ ಸರ್ವ ಸದಸ್ಯರೊಂದಿಗೆ ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ ಹಾಗೂ ಮಾಜಿ ಸಂಸದ ಅಣ್ಣಾಸಾಹೇಬ್ ಜೊಲ್ಲೆ ಅವರನ್ನು ಭೇಟಿಯಾಗಿ ಸನ್ಮಾನಿಸಿದರು. ಬೆಳಗಾವಿಯ ಐಟಿಸಿ ವೆಲ್ ಕಂ ಹೊಟೆಲ್ ಗೆ ತೆರಳಿ ಇಬ್ಬರನ್ನೂ ಸನ್ಮಾನಿಸಲಾಯಿತು.

# ಹೈನುಗಾರಿಕೆ ಅವಲಂಬಿಸಿದರೆ ಆರ್ಥಿಕವಾಗಿ ಸಧೃಢ: ಶಾಸಕ ವೈದ್ಯ

**ಯರಗಟ್ಟಿ:** ರೈತರು ಕೃಷಿಯೊಂದಿಗೆ ಹೈನುಗಾರಿಕೆ ಅವಲಂಬಿಸಿದರೆ ಆರ್ಥಿಕವಾಗಿ ಸಧೃಢರಾಗಬಹುದು. ದನಕರುಗಳಿಗೆ ಸರಿಯಾದ ಪೌಷ್ಠಿಕ ಆಹಾರವನ್ನು ಸಮಯಕ್ಕೆ ಸರಿಯಾಗಿ ನೀಡುವದರಿಂದ ಹಾಲು ಉತ್ಪಾದನೆ ಅಧಿಕವಾಗುತ್ತದೆ ಎಂದು ಶಾಸಕ ವಿಶ್ವಾಸ ವೈದ್ಯ ಹೇಳಿದರು.

ಸಮೀಪದ ಜೀವಾಪೂರ ಗ್ರಾಮದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ನೂತನ ಹಾಲು ಉತ್ಪಾದಕರ ಸಹಕಾರಿ ಸಂಘ ಉದ್ಘಾಟಿಸಿ ಮಾತನಾಡಿದ ಅವರು, ಬೆಳಗಾವಿ ಕೆಎಂಎಫ್ ಹಾಲು ಒಕ್ಕೂಟದಿಂದ ಮೊದಲು 40 ದಿನಕ್ಕೆ ಒಮ್ಮೆ ರೈತರಿಗೆ ಹಣ ನೀಡುತ್ತಿದ್ದರು. ಶಾಸಕ ಬಾಲಚಂದ್ರ ಜಾರಕಿಹೊಳಿ ಅಧ್ಯಕ್ಷರಾದ ಮೇಲೆ ಪ್ರತಿ 10 ದಿನಕ್ಕೆ ರೈತರಿಗೆ ಹಣ ಪಾವತಿಸಿ ಅವರನ್ನು ಆರ್ಥಿಕ ಸಬಲ ಮಾಡಿದ್ದಾರೆ. ಪ್ರಸಕ್ತ ಸಾಲಿನಲ್ಲಿ ಒಕ್ಕೂಟವು ಸುಮಾರು 13 ಕೋಟಿ ಲಾಭ ಗಳಸಿದ್ದು ಅದರಲ್ಲಿ ಸುಮಾರು ರೈತರಿಗೆ ಶೇ.50 ಸಬ್ಸಿಡಿ ರೂಪದಲ್ಲಿ ಮೇವು ಕತ್ತರಿಸಲು ಯಂತ್ರ, ಮ್ಯಾಟ ವಿತರಿಸಿದ್ದಾರೆ ಎಂದು ಹೇಳಿದರು.

ಜಿಲ್ಲಾ ಬೇಮುಲ ನಿರ್ದೇಶಕ ಶಂಕರ ಇಟ್ನಾಳ ಮಾತನಾಡಿ, ತಾಲೂಕಿನಲ್ಲಿ ಒಟ್ಟು 52 ಸಂಘ ಕಾರ್ಯನಿರ್ವಹಿಸುತ್ತಿದ್ದು. ಅವುಗಳ ಪ್ರಗತಿಗೆ ಪ್ರಯತ್ನಿಸುತ್ತೇನೆ. ಕೋಲಾರದಲ್ಲಿರುವ ಮೇಘಾ ಡೈರಿ ರೀತಿಯಲ್ಲಿಯೇ ನಮ್ಮ ಜಿಲ್ಲೆಯಲ್ಲಿಯು



ಜೀವಾಪೂರ ಗ್ರಾಮದಲ್ಲಿ ನೂತನ ಹಾಲು ಉತ್ಪಾದಕರ ಸಹಕಾರಿ ಸಂಘವನ್ನು ಶಾಸಕ ವಿಶ್ವಾಸ ವೈದ್ಯ ಉದ್ಘಾಟಿಸಿದರು.

ಸಹಿತ ಮಾಡಲು ಪ್ರಯತ್ನಿಸುತ್ತೇವೆ ಎಂದು ಹೇಳಿದರು.

ಮುನವಳ್ಳಿ ಸೋಮಶೇಖರಮಠದ ಮುರಘೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿ, ರೈತರು ಹೈನುಗಾರಿಕೆಯಿಂದ ಆದಾಯ ದ್ವಿಗುಣ ಮಾಡಿಕೊಂಡು ತಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಬೇಕು ಎಂದರು. ಕಾಂಗ್ರೆಸ ಮುಖಂಡ ವೆಂಕಣ್ಣ ಯರಡ್ಡಿ ಅಧ್ಯಕ್ಷತೆ ವಹಿಸಿದ್ದರು, ಮಾಜಿ ಗ್ರಾಪಂ ಅಧ್ಯಕ್ಷ ಮುತ್ತನಗೌಡ ನಾಯ್ಕರ, ನೂತನ ಸಂಘದ ಅಧ್ಯಕ್ಷ ಹನುಮಂತ ಹೊಸಟ್ಟಿ, ಉಪಾಧ್ಯಕ್ಷ ಹನುಮಂತ ಅರಳಿಕಟ್ಟಿ, ಮುಖಂಡ ಕಲ್ಮೇಶ ಬಾಲರಡ್ಡಿ, ಗೌಡಪ್ಪ ನಾಯ್ಕರ, ಪುಟ್ಟು ಅರಳಿಕಟ್ಟಿ, ಕೃಷ್ಣ ಚೌರಡ್ಡಿ, ರಮೇಶ ಕಮಕೇರಿ, ಬಸಪ್ಪ ತಳವಾರ, ಮಹಾಂತೇಶ ಉಪ್ಪಿನ, ರಮೇಶ ನರಿ, ಬಸವರಾಜ ನರಿ, ಗಿರೀಶ ಯರಡ್ಡಿ, ಪಂಚಾಕ್ಷರಿ ಪಟ್ಟಣಶಟ್ಟಿ, ರಮೇಶ ಅರಳಿಕಟ್ಟಿ, ಬಡೆಸಾಬ್ ನದಾಫ್, ಶಂಕರ ಕುರಿ, ಬಸಪ್ಪ ತಳವಾರ, ಗ್ರಾಪಂ ಸದಸ್ಯ ಶಟೆಪ್ಪ ಮಾದರ, ಚೆನ್ನಯ್ಯ ಪೂಜೇರ, ಸುರೇಶ ಕಂಬಾರ, ಸವದತ್ತಿ ಹಾಲು ಒಕ್ಕೂಟದ ಉಪ ವ್ಯವಸ್ಥಾಪಕ ಡಾ.ರಾಜೇಂದ್ರ ಮೆಳವಂಕಿ, ಯರಗಟ್ಟಿ ತಾಲೂಕ ವಿಸ್ತೀರ್ಣಾಧಿಕಾರಿ ರವಿ ತಳವಾರ, ಬಸವರಾಜ ಕುಳ್ಳುರ ಇತರರಿದ್ದರು.

## ಇಂದು ಪುರುಷ ಕಬಡ್ಡಿ ಪಂದ್ಯಾವಳಿ

**ಯರಗಟ್ಟಿ:** ಸಮೀಪದ ರೈನಾಪೂರ ಗ್ರಾಮದಲ್ಲಿ ಭಗತ್ ಸಿಂಗ್ ಫೌಂಡೇಶನ್ ಇವರ ಆಶ್ರಯದಲ್ಲಿ ತೃತೀಯ ಭಾರಿಗೆ 55–58 ಕೆಜಿ ಪುರುಷ ಕಬಡ್ಡಿ ಪಂದ್ಯಾವಳಿಗಳನ್ನು ಅ. 10. ಶುಕ್ರವಾರ ಸಂಜೆ 07–00 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮ ಸಾನ್ನಿಧ್ಯವನ್ನು ಯರಗಟ್ಟಿ ರಾಜರಾಜೇಶ್ವರಿ ಆಶ್ರಯದ ಗಣಪತಿ ಮಹಾರಾಜರು, ಅಧ್ಯಕ್ಷತೆಯನ್ನು ಪಿಕೆಪಿಎಸ್ ಅಧ್ಯಕ್ಷ ವಿಠ್ಠಲ ಬಂಟನೂರ, ಉದ್ಘಾಟಕರಾಗಿ ಬಿಜೆಪಿ ಮಂಡಳ ಅಧ್ಯಕ್ಷ ವಿರೂಪಾಕ್ಷ ಮಾಮನಿ, ಮುಖ್ಯ ಅತಿಥಿಗಳಾಗಿ ಆನಂದ ಬಾಗೋಡಿ, ವೆಂಕಣ್ಣಾ ಕಳ್ಳಿಗುದ್ದಿ, ಚಂದ್ರಪ್ಪ ರವಿ, ರೈನಾಪೂರ ಗ್ರಾ. ಪ. ಸದಸ್ಯ ಸುರೇಶ ಬಂಟನೂರ, ಮಾಡಮಗೇರಿ ಗ್ರಾ. ಪಂ. ಅಧ್ಯಕ್ಷ ಲಕ್ಕಪ್ಪ ಸನ್ನಿಂಗವನ್ನರ, ಮಂಜುನಾಥ ದಳವಾಯಿ ಸೇರಿದಂತೆ ಅನೇಕರು ಆಗಮಿಸಲಿದ್ದಾರೆ ಎಂದು ಕಮಿಟಿ ಅಧ್ಯಕ್ಷ ರವಿ ಆಚಮಟ್ಟಿ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಕೊಪ್ಪಳ:** ಕೊಪ್ಪಳ ಜಿಲ್ಲೆಯ ಕುಕನೂರಿನ ಜವಾಹರ ನವೋದಯ ವಿದ್ಯಾಲಯದಲ್ಲಿ 2026–27ನೇ ಸಾಲಿಗೆ 9 ಹಾಗೂ 11ನೇ ತರಗತಿಯಲ್ಲಿ ಖಾಲಿ ಇರುವ ಸ್ಥಾನಗಳ ಪ್ರವೇಶಕ್ಕೆ ಅರ್ಜಿ ಸಲ್ಲಿಕೆ ಅವಧಿಯನ್ನು ಅಕ್ಟೋಬರ್ 21 ರವರೆಗೆ ವಿಸ್ತರಿಸಲಾಗಿದೆ. 2025–26ನೇ ಸಾಲಿನಲ್ಲಿ 8 ಹಾಗೂ 10 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಜಿಲ್ಲೆಯ ಎಲ್ಲ ಸರ್ಕಾರಿ ಹಾಗೂ ಮಾನ್ಯತೆ ಪಡೆದ ಶಾಲೆಗಳ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿಗಳನ್ನು 9ನೇ ತರಗತಿಗಾಗಿ https://cbseitms.nic.in/2024/nvsix ನಲ್ಲಿ ಹಾಗೂ 11ನೇ ತರಗತಿಗಾಗಿ https://cbseitms.nic.in/2024/nvsxi-11 ಮುಖಾಂತರ ಅ.21 ರೊಳಗೆ ಸಲ್ಲಿಸಬೇಕು. 2026 ರ ಫೆಬ್ರವರಿ 7 ರಂದು ಪ್ರವೇಶ ಪರೀಕ್ಷೆಗಳು ನಡೆಯಲಿವೆ ಎಂದು ಕುಕನೂರ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚನ್ನರಾಜ ಹಟ್ಟಿಹೊಳಿ ಅಧಿಕಾರ ಸ್ವೀಕಾರ

**ಎಂ.ಕೆ.ಹುಬ್ಬಳ್ಳಿ:** ಎಂ.ಕೆ.ಹುಬ್ಬಳ್ಳಿಯ ಪ್ರತಿಷ್ಠಿತ ಶ್ರೀ ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿಯ ನೂತನ ಅಧ್ಯಕ್ಷರಾಗಿ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಉಪಾಧ್ಯಕ್ಷರಾಗಿ ಶಿವನಗೌಡ ಪಾಟೀಲ ಆಯ್ಕೆಯಾಗಿದ್ದು, ಇಬ್ಬರೂ ಗುರುವಾರ ಅಧಿಕಾರ ಸ್ವೀಕರಿಸಿದರು. ಇದಕ್ಕೂ ಮುನ್ನ ಈ ಭಾಗದ ಶಕ್ತಿ ದೇವತೆ ಶ್ರೀ ಬಂಡೆಮ್ಮ ದೇವಿಯ ಹಾಗೂ ವಿಘ್ನ ವಿನಾಶಕ ಮಹಾಗಣಪತಿಗೆ ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದು ಜವಾಬ್ದಾರಿ ವಹಿಸಿಕೊಂಡರು. ರೈತರ ಪುನಶ್ಚೇತನ ಪ್ಯಾನಲ್ ನ ಸದಸ್ಯರು, ಸುತ್ತಮುತ್ತಲಿನ ಗ್ರಾಮಗಳ ರೈತರು, ಕಾರ್ಖಾನೆಯ ಕಾರ್ಮಿಕರ ಸಮ್ಮುಖದಲ್ಲಿ ನಡೆದ ಈ ಅಧಿಕಾರ ಸ್ವೀಕಾರ ಸಮಾರಂಭದಲ್ಲಿ, ಕಾರ್ಖಾನೆಯ ಸರ್ವತೋಮುಖ ಅಭಿವೃದ್ಧಿ ಮತ್ತು ಕಾರ್ಮಿಕರ ಕಲ್ಯಾಣಕ್ಕಾಗಿ ಕೆಲಸ ಮಾಡುವ ಸಂಕಲ್ಪ ಮಾಡಿದರು.

## ತಾಲೂಕಿನಲ್ಲಿ ನಾಳೆ ವಿದ್ಯುತ್ ವ್ಯತ್ಯಯ

**ಜಮಖಂಡಿ:** ಕಾರ್ಯನಿರ್ವಾಹಕ ಇಂಜಿನಿಯರರು ಯೋಜನೆಗಳ ವಿಭಾಗ ಬಾಗಲಕೋಟೆಯ ಹೊಸ 110ಕೆವಿ ವಿದ್ಯುತ್ ವಿತರಣಾ ಕೇಂದ್ರ ಶೂರಪಾಲಿಗೆ 110ಕೆವಿ ವಿವಿ ಕೇಂದ್ರ ಯಲ್ಲಮ್ಮವಾಡಿಯಿಂದ 110ಕೆವಿ ವಿವಿ ಕೇಂದ್ರ ಆಲಬಾಳ ವರೆಗಿನ 110ಕೆವಿ ಮಾರ್ಗ ಮಧ್ಯದಲ್ಲಿ ಬರತಕ್ಕ 110ಕೆವಿ ಎಲ್.ಐ.ಎಲ್.ಓ. ಟಾವರ್ ಮತ್ತು ಇಂಟರಮಿಡಿಯಟ್ ಟಾವರ್ ನಿರ್ಮಿಸುವ ಕಾಮಗಾರಿ ನಿಮಿತ್ತ ಅಕ್ಟೋಬರ 11 ರಂದು ಬೆಳೆಗ್ಗೆ 8 ರಿಂದ ಸಾಯಂಕಾಲ 6 ಗಂಟೆಯವರೆಗೆ, 110ಕೆವಿ ಆಲಗೂರ ವಿವಿ ಕೇಂದ್ರ ಮತ್ತು 110ಕೆವಿ ಆಲಬಾಳ ವಿವಿ ಕೇಂದ್ರದಿಂದ ಹೊರಡುವ ಎಲ್ಲ 11ಕೆವಿ ಇಐಪಿ ಮತ್ತು ಎನ್.ಜೆ.ವೈ. ಹಾಗೂ ಸಾಯಿಪ್ರಿಯಾ ಶುರ್ಗದಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಆಲಬಾಳ 110ಕೆವಿ ವಿ.ವಿ ಕೇಂದ್ರದಿಂದ ಸಾಗುವ 11ಕೆವ್ಹಿ ಕಡಕೋಳ–ಕಂಕಣವಾಡಿ ಎನ್.ಜೆ.ವೈ. ಮುತ್ತೂರ–ಆಲಬಾಳ ಎನ್.ಜೆ.ವೈ., ಮೈಗೂರ ಎನ್.ಜೆ.ವೈ. ನಿರಂತರ ಜ್ಯೋತಿ ಪೀಡರಗಳು, 11ಕೆವ್ಹಿ ಕಡಕೋಳ ಬ್ರಿಡ್ಜ್, ಕಡಕೋಳ ಐಪಿ, ಮುತ್ತೂರ ಐಪಿ, ಆಲಬಾಳ ಐಪಿ, ಕಂಕಣವಾಡಿ ಗಡ್ಡಿ, ಕಂಕಣವಾಡಿ ವತ್ತ, ಮೈಗೂರ ಐಪಿ, ಹಳೆಪೂರ ಮಠ ಐಪಿ, ಶಿರಗುಪ್ಪಿ ಐಪಿ ಮತ್ತು ಪೀಡರಗಳು, ಆಲಗೂರ 110ಕೆವಿ ವಿ.ವಿ ಕೇಂದ್ರದಿಂದ ಸಾಗುವ 11 ಕೆವ್ಹಿ ಆಲಗೂರ ಎನ್‌ಜೆ.ವೈ, ಕುಂಬಾರಹಳ್ಳ ಎನ್.ಜೆ.ವೈ. ನಿರಂತರ ಜ್ಯೋತಿ ಪೀಡರಗಳು, 11 ಕೆವ್ಹಿ ಆಲಗೂರ ನಡುಗಡ್ಡೆ, ಆಲಗೂರ ಬ್ರಿಡ್ಜ್, ಕರಕಲಗಡ್ಡಿ, ಕುಂಚನೂರ ಐಪಿ, ಮಾದ್ದನ ಐಪಿ, ಮಾಮಡ್ಡಿ ತೋಟ, ಕುಂಬಾರಹಳ್ಳ ಐಪಿ, ಸನಾಳ ಐಪಿ ಮತ್ತು ಪೀಡರಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಉಪವಿಭಾಗ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದುರ್ವಾಸನೆಯಿಂದ ಕೂಡಿದ ಆರೋಗ್ಯ ಕೇಂದ್ರ




**ಜಮಖಂಡಿ:** ತಾಲ್ಲೂಕಿನ ಪ್ರಮುಖ ಆರೋಗ್ಯ ಕೇಂದ್ರವಾಗಿರುವ ಉಪವಿಭಾಗ ಆಸ್ಪತ್ರೆ ಇದೀಗ ಅಸಹ್ಯಕರ ದುರ್ವಾಸನೆ ಹಾಗೂ ಕಸದ ರಾಶಿಯಿಂದ ನರಕದಂತಾಗಿದೆ ಎಂದು ಸಾರ್ವಜನಿಕರ ಆಕ್ರೋಶ ವ್ಯಕ್ತವಾಗಿದೆ.

ವಯೋವೃದ್ದರು ಹಾಗೂ ವಯಸ್ಕರು ವಿವಿಧ ರೋಗಗಳಿಂದ ಬಳಲುತ್ತಾ ಚಿಕಿತ್ಸೆಗಾಗಿ ಆಸ್ಪತ್ರೆಗೆ ಬರುವ ಸಂದರ್ಭದಲ್ಲಿ ಆಸ್ಪತ್ರೆಯ ಒಳಗಿನ ದುರ್ವಾಸನೆ, ಕಸದ ರಾಶಿ, ಅಸಹ್ಯಕರ ವಾತಾವರಣದಿಂದ ಮತ್ತಷ್ಟು ಅನಾರೋಗ್ಯಕ್ಕೆ ಒಳಗಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಪ್ಲಾಸ್ಟಿಕ್ ಪ್ಯಾಕೆಟ್‌ಗಳಲ್ಲಿ ತುಂಬಿದ ತಿಂಡಿತಿನ್ನಸುಗಳು, ಬಳಕೆಯಾದ ವೈದ್ಯಕೀಯ ವಸ್ತುಗಳು, ಗಾಳಿಯಲ್ಲಿ ಹಬ್ಬುತ್ತಿರುವ ದುರ್ವಾಸನೆ ಇವೆಲ್ಲವೂ ಆರೋಗ್ಯದ ಸ್ಥಳವನ್ನು ರೋಗದ ಅಡಗಾಗರದಂತಾಗಿಸಿದೆ ಎಂದು ಜನರು ಕಿಡಿಕಾರಿದ್ದಾರೆ. ಆಸ್ಪತ್ರೆಗೆ ಕಾಲಿಟ್ಟ ಕೂಡಲೇ ಮೂಗು–ಬಾಯಿ ಮುಚ್ಚಿಕೊಂಡು ಹೋಗಬೇಕಾದ ಪರಿಸ್ಥಿತಿ ಇದೆ. ಇಂತಹ ಪರಿಸ್ಥಿತಿಯಲ್ಲಿ ರೋಗಿಗಳು ಹೇಗೆ ಚೇತರಿಸಿಕೊಳ್ಳುತ್ತಾರೆ

ಸರ್ಜರಿ ವಿಭಾಗ, ವಾರ್ಡುಗಳು ಹಾಗೂ ಹೊರರೋಗಿಗಳ ವಿಭಾಗಗಳ ಸುತ್ತಮುತ್ತ ಕಸ, ತ್ಯಾಜ್ಯ ವಸ್ತುಗಳ ತೆರವುಗಾರಿಕೆಯ ಕೊರತೆಯಿಂದ ಸ್ಥಿತಿ ದಿನದಿಂದ ದಿನಕ್ಕೆ ಹದಗೆಟ್ಟಿದೆ. ಇದರ ಹಿನ್ನೆಲೆಯಲ್ಲಿ ಜನರು "ಈ ಆಸ್ಪತ್ರೆಯ ಸ್ಥಿತಿಗೆ ಶಸ್ತ್ರಚಿಕಿತ್ಸೆ ಮಾಡಲು ಆರೋಗ್ಯ ಸಚಿವರೇ ಬಂದು ಶುದ್ಧೀಕರಣ ಕಾರ್ಯ ಮಾಡಬೇಕಾದ ಪರಿಸ್ಥಿತಿ ಬಂದಿದೆ ಎಂದು ವ್ಯಂಗ್ಯವಾಡುತ್ತಾ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದರು.

# ಸಕ್ಕರೆ ಕಾರ್ಖಾನೆ ಅಧ್ಯಕ್ಷರಾಗಿ ಚನ್ನರಾಜ ಹಟ್ಟಿಹೊಳಿ ಅವಿರೋಧ ಆಯ್ಕೆ

**ಬೆಳಗಾವಿ:** ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆ ಅಧ್ಯಕ್ಷರಾಗಿ ಎಂಎಲ್ಸಿ ಚನ್ನರಾಜ ಹಟ್ಟಿಹೊಳಿ, ಉಪಾಧ್ಯಕ್ಷರಾಗಿ ಶಿವನಗೌಡ ಪಾಟೀಲ ಅವಿರೋಧವಾಗಿ ಆಯ್ಕೆಯಾದರು.

ಗುರುವಾರ ಕಾರ್ಖಾನೆ ಕಾರ್ಯಾಲಯದಲ್ಲಿ ನಡೆದ ಅಧ್ಯಕ್ಷ–ಉಪಾಧ್ಯಕ್ಷ ಸ್ಥಾನಗಳ ಚುನಾವಣೆಯಲ್ಲಿ ಎರಡೂ ಸ್ಥಾನಕ್ಕೆ ಒಂದೊಂದು ನಾಮಪತ್ರಗಳು ಮಾತ್ರ ಸಲ್ಲಿಕೆಯಾಗಿದ್ದರಿಂದ, ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಚುನಾವಣಾಧಿಕಾರಿಗಳಾಗಿ ಪ್ರಭಾವತಿ ಫಕ್ಕೀರಪುರ ಕಾರ್ಯನಿರ್ವಹಿಸಿದರು. ಕಳೆದ ಸೆ.28ರಂದು ಕಾರ್ಖಾನೆ ಆಡಳಿತ ಮಂಡಳಿ ನಿರ್ದೇಶಕರ 15 ಸ್ಥಾನಗಳಿಗೆ ಚುನಾವಣೆ ನಡೆದಿತ್ತು. ಎಂಎಲ್ಸಿ ಚನ್ನರಾಜ ಹಟ್ಟಿಹೊಳಿ ನೇತೃತ್ವದ ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆ ರೈತರ ಪುನಶ್ಚೇತನ ಪೆನಲ್ ಎಲ್ಲ 15 ಜನ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದರು.

ಅಧ್ಯಕ್ಷ–ಉಪಾಧ್ಯಕ್ಷ ಚುನಾವಣೆ ನಂತರ ನಡೆದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಕಾರ್ಖಾನೆ ನೂತನ ಅಧ್ಯಕ್ಷ ಎಂಎಲ್ಸಿ ಚನ್ನರಾಜ ಹಟ್ಟಿಹೊಳಿ, ನಷ್ಟದಲ್ಲಿರುವ ಕಾರ್ಖಾನೆ ಪುನಶ್ಚೇತನ ಮಾಡುವುದೊಂದೆ ನಮ್ಮ ಗುರಿ. ಪ್ರಸಕ್ತ ಸಾಲಿನ ಹಂಗಾಮಿನಲ್ಲಿ 4ಲಕ್ಷ ಮೆಟ್ರಿಕ್ ಟನ್ ಕಬ್ಬು ನುರಿಸಿ, ಕಾರ್ಖಾನೆ ಅಭಿವೃದ್ಧಿಗೆ ಶ್ರಮಿಸುತ್ತೇವೆ. ಈಗಾಗಲೇ 250 ಕಬ್ಬು ಕಟಾವು ತಂಡಗಳನ್ನು ಕಾಯ್ದಿರಿಸಿದ್ದೇವೆ. ರೈತರು ಪೂರೈಸುವ ಕಬ್ಬಿಗೆ ಸಮಯಕ್ಕೆ ಸರಿಯಾಗಿ ಯೋಗ್ಯದರ



ನೀಡುತ್ತೇವೆಂದು ಭರವಸೆ ನೀಡಿದರು. ನಮ್ಮ ಮೇಲೆ ಸವಾಲುಗಳ ಗುಡ್ಡವೇ ಇದೆ. ಎಲ್ಲ 15 ಜನ ನಿರ್ದೇಶಕರು ಸಮಾನರಾಗಿ ಶ್ರಮಿಸುತ್ತೇವೆ. ದೀಪಾವಳಿಗೆ ಕಾರ್ಖಾನೆ ಹಂಗಾಮು ಆರಂಭಿಸುತ್ತೇವೆ. ಕಾರ್ಖಾನೆ ಸಿದ್ಧಗೊಳಿಸಲು ಕಾರ್ಮಿಕರೆಲ್ಲ ಶ್ರಮಿಸುತ್ತಿದ್ದಾರೆಂದರು. ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಶಾಸಕರಾದ ಬಾಬಾಸಾಹೇಬ ಪಾಟೀಲ, ವಿಠ್ಠಲ ಹಲಗೇಕರ್ ಮಾರ್ಗದರ್ಶನದಲ್ಲಿ ಕಾರ್ಖಾನೆಯನ್ನು ಯಶಸ್ವಿಯಾಗಿ ಮುನ್ನಡೆಸುತ್ತೇವೆಂದರು.

ಶಾಸಕ ಬಾಬಾಸಾಹೇಬ ಪಾಟೀಲ ಮಾತನಾಡಿ, ಕಾರ್ಖಾನೆ ಉಳಿಸಿ–ಬೆಳೆಸುತ್ತಾರೆಂಬ ನಂಬಿಕೆಯಿಂದ ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆ ರೈತರ ಪುನಶ್ಚೇತನ ಪೆನಲ್‌ಗೆ ರೈತರು ಬೆಂಬಲಿಸಿ, ಎಲ್ಲ 15 ಜನರನ್ನು ಆರಿಸಿ ತಂದಿದ್ದಾರೆ. ರೈತರು ಇಟ್ಟ ನಂಬಿಕೆಗೆ ದ್ರೋಹ ಆಗದಂತೆ ಕಾರ್ಖಾನೆ ಅಭಿವೃದ್ಧಿ ಪಡಿಸುವ ಜವಾಬ್ದಾರಿ ಎಲ್ಲ 15 ಜನ ನಿರ್ದೇಶಕರ ಮೇಲಿದೆ. ಕಾರ್ಖಾನೆ ಅಭಿವೃದ್ಧಿ ಕನಸು ಹೊತ್ತು ಬಂದವರು ಇವರು. ಪಾರದರ್ಶಕ ಆಡಳಿತದ ಮೂಲಕ ನೂತನ ದಿಗ್ದರ್ಶಕ ಮಂಡಳಿ ಕಾರ್ಖಾನೆಗೆ ಮೊದಲಿನ ಗತವೈಭವ ಮರಳಿಸಲಿದೆ ಎಂದರು.

ಕಾರ್ಖಾನೆ ಉಪಾಧ್ಯಕ್ಷ ಶಿವನಗೌಡ ಪಾಟೀಲ, ಕಾರ್ಖಾನೆ ವ್ಯವಸ್ಥಾಪಕ ನಿರ್ದೇಶಕ ಮೋಹನ ಹಿರೇಮಠ ಮಾತನಾಡಿದರು. ನಿರ್ದೇಶಕರಾದ ಫಕ್ಕೀರಪ್ಪ ಸಕ್ರೆಣ್ಣವರ, ಶಂಕರೆಪ್ಪ ಹೊಳಿ, ಶ್ರೀಕಾಂತ ಇಟಗಿ, ಶಂಕರ ಕಿಲ್ಲೇದಾರ, ಶ್ರೀಶೈಲ ತುರಮರಿ, ರಾಮನಗೌಡ ಪಾಟೀಲ, ರಘು ಪಾಟೀಲ, ಶಿವಪುತ್ರಪ್ಪ ಮರಡಿ, ಸುರೇಶ ಹುಲಿಕಟ್ಟಿ, ಲಲಿತಾ ಪಾಟೀಲ, ಸುನೀತಾ ಲಂಗೋಟಿ, ಬಳಪ್ಪ ಪೂಜಾರ, ಭರಮಪ್ಪ ಶಿಗೆಹಳ್ಳಿ ಹಾಗೂ ರೈತರು, ಕಾರ್ಮಿಕರು, ಅಭಿಮಾನಿಗಳು ಇದ್ದರು.

# ಎಕರೆಗೆ 30ಸಾವಿರ ಪರಿಹಾರ ಘೋಷಣೆಗೆ ಆಗ್ರಹ

## ಪಂಚಾಯಿತಿವಾರು ರೈತರೊಂದಿಗೆ ಭೇಟಿ, ಪರಿಶೀಲನೆ: ಡ್ರಾಮಾ ಕೈಬಿಟ್ಟು ವಾಸ್ತವ ಸಮಿಕ್ಷೆ ನಡೆಸಿ: ಮಾಜಿ ಶಾಸಕ ನಡಹಳ್ಳಿ

**ಮುದ್ದೇಬಿಹಾಳ:** ಅತೀವೃಷ್ಟಿಯಿಂದ ಹಾನಿಯಾದ ಬೆಳೆಗೆ ನ್ಯಾಯಯುತವಾಗಿ ದೊರೆಯಬೇಕಾದ ಪರಿಹಾರವನ್ನು ರೈತರಿಗೆ ಕೊಡುವುದನ್ನು ಬಿಟ್ಟು ಬೆಳೆ ಹಾನಿ ಅಂದಾಜು ಜಂಟಿ ಸಮೀಕ್ಷೆ ಹೆಸರಿನಲ್ಲಿ ನಡೆಸಿರುವ 'ಡ್ರಾಮಾ' ಕೈಬಿಟ್ಟು ವಾಸ್ತವ ಸಮೀಕ್ಷೆ ನಡೆಸಿ ಪ್ರತಿ ಎಕರೆಗೆ 30 ಸಾವಿರ ರೂ.ಪರಿಹಾರ ರೈತರಿಗೆ ಒದಗಿಸಬೇಕು ಎಂದು ಬಿಜೆಪಿ ರೈತಮೋರ್ಚಾ ರಾಜ್ಯಾಧ್ಯಕ್ಷ ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ ಆಗ್ರಹಿಸಿದರು.

ತಾಲ್ಲೂಕಿನ ಇಂಗಳಗೇರಿ, ಮಡಿಕೇಶ್ವರ, ಢವಳಗಿ, ರೂಢಗಿ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಬೆಳೆ ಹಾನಿಯಾಗಿರುವ ಕುರಿತು ಸರ್ಕಾರದ ಅಧಿಕಾರಿಗಳು ಜಂಟಿ ಸಮೀಕ್ಷೆಯ ವರದಿಯನ್ನು ವೀಕ್ಷಿಸಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಬೆಳೆ ಹಾನಿ ಸಂಭವಿಸಿದ ರೈತರ ಜಮೀನುಗಳಲ್ಲಿ ಹಾನಿ ಉಂಟಾದ ಪ್ರಮಾಣವನ್ನು ಜಂಟಿ ಸಮೀಕ್ಷೆಯ ಹೆಸರಿನಲ್ಲಿ ಸರ್ಕಾರ ರೈತರ ಬದುಕಿನ ಜೊತೆಗೆ ಚೆಲ್ಲಾಟವಾಡುತ್ತಿದೆ.ಪಂಚಾಯಿತಿ ವಾರು ಸಮೀಕ್ಷೆ ವರದಿಯನ್ನು ಅವಲೋಕಿಸಿದರೆ ಕೆಲವೇ ರೈತರಿಗೆ ಪರಿಹಾರವನ್ನು ಕೊಡುವ ಕಾರ್ಯ ಸರ್ಕಾರದಿಂದ ಮಾಡಲಾಗುತ್ತಿದೆ.



### ಅಧಿಕಾರಿಯಿಂದ ಸಿಗದ ಸಮರ್ಪಕ ಉತ್ತರ

ಢವಳಗಿ ರೈತ ಸಂಪರ್ಕ ಕೇಂದ್ರದ ಅಧಿಕಾರಿ ಗೋವಿಂದರೆಡ್ಡಿ ಮೆದಕಿನಾಳ ಅವರನ್ನು ಕರೆಯಿಸಿ ರೈತರ ಸಮಸ್ಯೆಯನ್ನು ಅವರ ಸಮಕ್ಷಮದಲ್ಲಿ ನಡಹಳ್ಳಿ ಅವರು ಬಹಿರಂಗಪಡಿಸಿದರು. ಕೆಲವು ರೈತರು ನಾವು ಬೆಳೆ ವಿಮೆ ತುಂಬಿದ್ದರೂ ನಮ್ಮ ಜಮೀನು ಹಾನಿಯಾದ ರೈತರ ಪಟ್ಟಿಯಲ್ಲಿ ಬಂದಿಲ್ಲ ಎಂದು ದೂರಿದರು.ಇದಕ್ಕೆ ಉತ್ತರಿಸಿದ ಗೋವಿಂದರೆಡ್ಡಿ ಮೆದಿಕಿನಾಳ ಹಿಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯ ಆರಂಭಿಸಿದ್ದೇವೆ.ನಾಲ್ಕು ದಿನ ಬೆಳೆ ಹಾನಿ ಸಮೀಕ್ಷೆಗೆ ಹೋಗಿದ್ದೇವು.ಕೆಲವು ರೈತರ ಜಮೀನುಗಳಿಗೆ ಭೇಟಿ ನೀಡಿ ವರದಿ ತಂದಿದ್ದೇವೆ.ನಮ್ಮಲ್ಲಿ ಸಿಬ್ಬಂದಿ ಕೊರತೆ ಇದೆ.ನಾನು ಹೋದರೆ ಇಲ್ಲಿ ಬೀಜ ವಿತರಣೆಗೆ ಸಿಬ್ಬಂದಿ ಇಲ್ಲ ಎಂದು ಅಸಹಾಯಕತೆ ವ್ಯಕ್ತಪಡಿಸಿದರು.ಆದರೆ ಹಾನಿ ಅಂದಾಜನ್ನು ಹೇಗೆ ಗಣನೆ ತೆಗೆದುಕೊಳ್ಳಲಾಗಿದೆ ಎಂಬ ಮಾಹಿತಿಯನ್ನು ಅವರು ಬಹಿರಂಗಪಡಿಸಲಿಲ್ಲ.ಅಲ್ಲದೇ ಎರಡು ಎಕರೆಗಿಂತ ಕಡಿಮೆ ಪ್ರಮಾಣದಲ್ಲಿಯೇ ಹಾನಿ ತೋರಿಸಿರುವುದಕ್ಕೆ ಕಾರಣ ಏನು ಎಂಬ ಪ್ರಶ್ನೆಗೂ ಅವರಿಂದ ಉತ್ತರ ದೊರೆಯಲಿಲ್ಲ.

ಇಂಗಳಗೇರಿ ಪಂಚಾಯಿತಿಯಲ್ಲಿ 188, ಮಡಿಕೇಶ್ವರ ಗ್ರಾಪಂನಲ್ಲಿ 128, ಢವಳಗಿ ಗ್ರಾಪಂನಲ್ಲಿ 68 ರೈತರ ಹೆಸರು ಬೆಳೆಹಾನಿ ಪಟ್ಟಿಯಲ್ಲಿ ಗುರುತಿಸಲಾಗಿದೆ. ಈ ಭಾಗದಲ್ಲಿ ತೊಗರಿ, ಹತ್ತಿ, ಈರುಳ್ಳಿ, ಬಾಳೆ ಮೊದಲಾದ ಬೆಳೆಗಳು ಶೇ75ರಷ್ಟು ಹಾನಿ ಉಂಟಾಗಿದೆ. ಆದರೆ ಆಯ್ದ ರೈತರಿಗೆ ಅದರಲ್ಲೂ ಎರಡು ಎಕರೆ ಮೀರದಂತೆ ಹಾನಿ ಸಂಭವಿಸಿರುವುದಾಗಿ ಪಟ್ಟಿಯಲ್ಲಿ ಅಧಿಕಾರಿಗಳು ತೋರಿಸಿದ್ದಾರೆ. ಕೆಲವು ರೈತರ ಜಮೀನುಗಳಲ್ಲಿ ಭಾಗಶಃ ಹಾನಿ ಸಂಭವಿಸಿದ್ದರೂ ಅದಕ್ಕೆ 2 ಎಕರೆ ಒಳಗಡೆ ಮಿತಿ ವಿಧಿಸಿರುವುದು ಅವೈಜ್ಞಾನಿಕವಾಗಿದೆ. ಅಧಿಕಾರಿಗಳು ಎಲ್ಲೋ ಕೂತು ತಮಗೆ ಬೇಕಾದ ರೈತರ ಹೆಸರುಗಳನ್ನು ಆಯ್ಕೆ ಮಾಡಿ ಪಟ್ಟಿ ಲಗತ್ತಿಸಿ ಆಕ್ಷೇಪಣೆ ಆಹ್ವಾನಿಸಿದ್ದಾರೆ. ಕೆಲವು ರೈತರಿಗೆ ಪಂಚಾಯಿತಿಯಲ್ಲಿ ಪಟ್ಟಿ ಅಂಟಿಸಿದ್ದಾರೆ ಎಂಬುದೇ ಗೊತ್ತಿಲ್ಲ ಎಂದು ಹೇಳಿದರು.

ಮಡಿಕೇಶ್ವರ ಗ್ರಾಮದಲ್ಲಿ ರೈತ ತುಂಬಗಿ ಮಾತನಾಡಿ, ನಮ್ಮದು 5 ಎಕರೆ ಜಮೀನಿನಲ್ಲಿ ಹತ್ತಿ ಬಿತ್ತಿದ್ದೇವು.ಅತೀವೃಷ್ಟಿಯಿಂದ ಬೆಳೆಗೆ ತಾಮ್ರ ರೋಗ ಬಂದಿದೆ.ಬೆಳೆ ಸಂಪೂರ್ಣ ಹಾನಿಯಾಗಿದ್ದು ಅದಕ್ಕಾಗಿ ಎಕರೆಗೆ 30–40 ಸಾವಿರ ರೂ.ಖರ್ಚು ಮಾಡಿದ್ದೇವೆ.ಈಗ ಪಂಚಾಯಿತಿಯಲ್ಲಿ ಹಚ್ಚಿರುವ ಲೀಸ್ಟ್ ನಲ್ಲಿ ನಮ್ಮ ಹೆಸರಿಲ್ಲ ಎಂದು ಹೇಳಿದರು.

ಬಳವಾಟ ಭಾಗದ ರೈತ ಕಾರ್ತಿಕ ಯಾಳವಾರ ಮಾತನಾಡಿದರು. ಮಂಡಲ ಅಧ್ಯಕ್ಷ ಜಗದೀಶ ಪಂಪಣ್ಣವರ, ಮಲ್ಲಯ್ಯ ಬಿರಾದಾರ, ಮಧುಸ್ವಾಮಿ ಹಿರೇಮಠ, ಅನೀಲ ರಾಠೋಡ, ಲಕ್ಷ್ಮಣ ಬಿಜ್ಜೂರ, ಸಂಗಣ್ಣ ಹತ್ತಿ, ನಾಗೇಶ ಕವಡಿಮಟ್ಟಿ, ಪ್ರವೀಣ ಚಿನಿವಾರ ಮೊದಲಾದವರು ಇದ್ದರು.

# ದುಶ್ಚಟಗಳ ವಿರುದ್ಧ ಜಾಗ್ರತಿ ಕಾರ್ಯಕ್ರಮ

**ಗೋಕಾಕ:** ದುಶ್ಚಟ ಎನ್ನುವುದು ದೇಶದ ಅಭಿವೃದ್ಧಿಗೆ ಮಾರಕವನ್ನುಂಟು ಮಾಡುತ್ತದೆ. ದುಶ್ಚಟಕ್ಕೆ ದಾಸನಾದ ವ್ಯಕ್ತಿ ಮನೆಗೂ ಭಾರವಾಗಿ ಹೊರೆಯಾಗುತ್ತಿದ್ದಾನೆ ದುಶ್ಚಟ ಮುಕ್ತ ಸಮಾಜಕ್ಕಾಗಿ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆಯ ಸಂಘಟನೆಯವರು ಮಾಡುತ್ತಿರುವ ಕೆಲಸ ಶ್ಲಾಘನೀಯವಾಗಿದೆ ಎಂದು ಗೋಕಾಕ ತಾಲೂಕಿನ ದಂಡಾಧಿಕಾರಿ ಡಾ॥ ಮೋಹನ ಭಸ್ಮೆ ಹೇಳಿದರು.

ಅವರು, ಬುಧವಾರದಂದು ನಗರದ ಹೇಮರೆಡ್ಡಿ ಮಲ್ಲಮ್ಮ ಸಭಾಭವನದಲ್ಲಿ ನಡೆದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಅಖಿಲ ಕರ್ನಾಟಕ ಜನಜಾಗ್ರತಿ ವೇದಿಕೆ ವತಿಯಿಂದ ಗಾಂಧಿ ಜಯಂತಿ ಅಂಗವಾಗಿ ಗಾಂಧಿ ಸ್ಮರಣೆ ಹಾಗೂ ದುಶ್ಚಟಗಳ ವಿರುದ್ಧ ಜಾಗ್ರತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ರಾಜ್ಯದಲ್ಲಿ ತುಂಬಾ ಅಭಿವೃದ್ಧಿ ಕೆಲಸ ನಡೆಯುತ್ತಿದೆ. ಮುಖ್ಯವಾಗಿ ಗ್ರಾಮೀಣ ಭಾಗದಲ್ಲಿ ಮಹಿಳೆಯರು ಸ್ವಾಲಂಭಿಯಾಗಿ ಬದುಕಲು ಅನುಕೂಲ ಮಾಡಿಕೊಟ್ಟು ಸರಕಾರದ ಗಮನ ಸೆಳೆಯುತ್ತಿದೆ ಅವರು ಮಾಡುತ್ತಿರುವ ಪ್ರತಿಯೊಂದು ಕೆಲಸ ಮಾದರಿಯಾಗಿದೆ. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಗೆ ಪ್ರತಿಯೊಬ್ಬರು ಗೌರವ ಕೊಟ್ಟು ಸಹಕರಿಸುತ್ತಿದ್ದಾರೆ ಇದಕ್ಕೆ ಕಾರಣ ಧರ್ಮಸ್ಥಳ ಮೇಲೆ ಜನರಿಗೆ ಇರುವ ನಂಬಿಕೆ, ಪ್ರೀತಿ, ಗೌರವ ಕಾರಣ ನಿಜವಾಗಿಯೂ ಧರ್ಮಸ್ಥಳ ಧರ್ಮವನ್ನು ಎತ್ತಿ ಹಿಡಿಯುತ್ತಿರುವ ಪುಣ್ಯ ಕ್ಷೇತ್ರವಾಗಿದೆ ಎಂದು ಹೇಳಿದರು. ಜಿಲ್ಲಾ ಜನಜಾಗ್ರತಿ ವೇದಿಕೆಯ ಸ್ಥಾಪಕ ಅಧ್ಯಕ್ಷ ಸೋಮಶೇಖರ ಮಗದುಮ್ಮ, ಜಿಲ್ಲಾ ನಿರ್ದೇಶಕರಾದ ಎಚ್.ಆರ್.ಲವಕುಮಾರ



ಮಾತನಾಡಿದರು. ಇದೇ ಸಂದರ್ಭದಲ್ಲಿ ರಾಜ್ಯದಲ್ಲಿ ಮದ್ಯಪಾನ ನಿಷೇಧ ಮಾಡಬೇಕು ಹಾಗೂ ಮದ್ಯ ಮಾರಾಟಕ್ಕೆ ಇರುವ ಟಾರ್ಗೆಟ್ ಪದ್ಧತಿ ಹಾಗೂ ಇನ್ನಿತರ ಅಬಕಾರಿ ಕಾಯ್ದೆಗಳನ್ನು ತಿದ್ದುಪಡಿ ಮಾಡಿ ಜನಜಾಗ್ರತಿ ವೇದಿಕೆ ನಡೆಸುವ ಕಾರ್ಯಚಟುವಟಿಕೆಗಳಲ್ಲಿ ಸಂಪೂರ್ಣ ಸಹಕರವನ್ನು ಅಬಕಾರಿ ಇಲಾಖೆ ಹಾಗೂ ಪೊಲೀಸ್ ಇಲಾಖೆ ನೀಡಬೇಕು ಎಂದು ತಾಲೂಕಾ ದಂಡಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ವೇದಿಕೆಯಲ್ಲಿ ನಗರಸಭೆ ಅಧ್ಯಕ್ಷ ಪ್ರಕಾಶ ಮುರಾರಿ, ಸಿಡಿಪಿಓ ಡಿ.ಎಸ್.ಕೂಡುವಕ್ಕಲಿಗ, ಸಿಪಿಐ ಸುರೇಶ ಬಾಬು ಹಾಗೂ ಜಿಲ್ಲಾ ಜನಜಾಗ್ರತಿ ವೇದಿಕೆಯ ಅಧ್ಯಕ್ಷ ನಾಗಲಿಂಗ ಪೋತದಾರ, ಸುಭಾಷ ಹನಸಿ, ಸುರೇಶ ಹಟ್ಟಿ, ಮಹಾಂತೇಶ ಬೆಣ್ಣಿ ಹಾಗೂ ಜನಜಾಗ್ರತಿ ಸದಸ್ಯರು ಹಾಜರಿದ್ದರು.

## ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ವಿಜಯಪುರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2025–26ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪದವಿ ಹಾಗೂ ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಅಕ್ಟೋಬರ್ 14ರವರೆಗೆ ಇಲಾಖೆ ವೆಬ್‌ಸೈಟ್ https://bcwd.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8050770004 ಹಾಗೂ 8050770005 ಸಂಪರ್ಕಿಸಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಉಚಿತ ವೈದ್ಯಕೀಯ ಶಿಬಿರ

**ಬೆಳಗಾವಿ:** ಜಿಲ್ಲೆಯ ಗ್ರಾಮೀಣ ವಲಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 1 ರಿಂದ 12 ನೇ ತರಗತಿಯ ವಿಶೇಷ ಅಗತ್ಯವುಳ್ಳ (ವಿಕಲಚೇತನ) ವಿದ್ಯಾರ್ಥಿಗಳು ಅಕ್ಟೋಬರ. 10. 2025 ರಂದು ಎಮ್.ಎಚ್.ಪಿ.ಎಸ್ ಕಂಗ್ರಾಳಿ ಕೆ.ಎಚ್ ಇಲ್ಲಿ ಉಚಿತ ವೈದ್ಯಕೀಯ ಮೌಲ್ಯಾಂಕನ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಕಾರಣ ಸಂಬಂಧಿಸಿದ ಪಾಲಕರು ಹಾಗೂ ವಿಶೇಷ ಅಗತ್ಯವುಳ್ಳ (ವಿಕಲಚೇತನ) ವಿದ್ಯಾರ್ಥಿಗಳು ಆಧಾರ ಕಾರ್ಡ, ಎರಡು ಭಾವಚಿತ್ರ (ಫೋಟೊ), ವಿಕಲತೆಯ ಪ್ರಮಾಣ ಪತ್ರ (ಯು.ಡಿ.ಆಯ್.ಡಿ ಕಾರ್ಡ), ಆದಾಯ ಪ್ರಮಾಣ ಪತ್ರ, ರೇಷನ ಕಾರ್ಡ ಹಾಗೂ ಪೋಷಕರ ಆಧಾರ ಕಾರ್ಡ ದಾಖಲೆಗಳೊಂದಿಗೆ ಎಮ್.ಎಚ್.ಪಿ.ಎಸ್ ಕಂಗ್ರಾಳಿ ಕೆ.ಎಚ್ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾರ್ಗ ಬದಲಾವಣೆ: ಆಕ್ಷೇಪಣೆ ಆಹ್ವಾನ

**ವಿಜಯಪುರ:** ಮುದ್ದೇಬಿಹಾಳ ತಾಲೂಕಿನ ನಾಗಬೇನಾಳ ಗ್ರಾಮದ ರಿ.ಸನಂ: 84ರ ಜಮೀನನ್ನು ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತದಿಂದ ಬೂದಿಹಾಳ ಪೀರಾಪೂರ ಏತ ನೀರಾವರಿ ಯೋಜನೆಯ ವಿದ್ಯುತ್ ಪ್ರಸರಣ ಸ್ವಿಚ್ಚಿಂಗ್ ಸ್ಟೇಷನ್‌ಗಾಗಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಕ್ಕೆ ಮಂಜೂರಾದ ಜಮೀನನ್ನು ಕಾಲುದಾರಿಯ ಮಾರ್ಗ ಬದಲಾವಣೆ ಮಾಡಲು ಉದ್ದೇಶಿಸಲಾಗಿದ್ದು, ಈ ಕುರಿತಾದ ಆಕ್ಷೇಪಣೆಗಳಿದ್ದಲ್ಲಿ ಈ ಅಧಿಸೂಚನೆಯ 30 ದಿನಗಳೊಳಗಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಆಕ್ಷೇಪಣೆ ಸಲ್ಲಿಸಬಹುದು ಎಂದು ತಿಳಿಸಿದ್ದಾರೆ.

### ಗಜೇಂದ್ರಗಡ ತಾಲೂಕಿನ 13 ಗ್ರಾ.ಪಂ.ಗಳ ನರೇಗಾ ಕೂಲಿಕಾರರಿಗೆ ಇ-ಕೆವೈಸಿ ಮಾಡಿಕೊಳ್ಳಲು ಕರೆ

# ನರೇಗಾ ಕೂಲಿಕಾರರಿಗೆ ಇ-ಕೆವೈಸಿ ಕಡ್ಡಾಯ

**ಗಜೇಂದ್ರಗಡ:** ನರೇಗಾ ಕಾಮಗಾರಿಗಳ ಕೂಲಿಕಾರರ ಹಾಜರಾತಿಯಲ್ಲಿ ಪಾರದರ್ಶಕತೆ ತರಲು ಮುಂದಾಗಿರುವ ಕೇಂದ್ರ ಸರ್ಕಾರ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ) ಅಡಿಯಲ್ಲಿ ಕೆಲಸ ಮಾಡುತ್ತಿರುವ ಗಜೇಂದ್ರಗಡ ತಾಲೂಕಿನ ಕೂಲಿಕಾರರಿಗೆ ಇ–ಕೆವೈಸಿ (ಜಎಜಅ) ಪ್ರಕ್ರಿಯೆ ಕಡ್ಡಾಯಗೊಳಿಸಲಾಗಿದೆ.

ತಾಲೂಕಿನ ಎಲ್ಲ 13 ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಜಾಬ್ ಕಾರ್ಡ್ ಹೊಂದಿರುವ ನರೇಗಾ ಕೂಲಿಕಾರರು ತಮ್ಮ ಇ–ಕೆವೈಸಿ ಪ್ರಕ್ರಿಯೆಯನ್ನು ತಕ್ಷಣ ಪೂರ್ಣಗೊಳಿಸಬೇಕೆಂದು ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ಕರೆ ನೀಡಿದ್ದಾರೆ.

ತಾಲೂಕಿನ 13 ಗ್ರಾಮ ಪಂಚಾಯತಿಗಳ ಗ್ರಾಮ ಕಾಯಕ ಮಿತ್ರ, ಗಣಕಯಂತ್ರ ನಿರ್ವಾಹಕ, ಬಿಎಫ್ ಟಿ ಮತ್ತು ನೀರುಗಂಟ್ಟಿ ಅವರಿಗೆ ಗೂಗಲ್ ಸಭೆ ಕೈಗೊಳ್ಳುವುದರ ಮೂಲಕ ಕಡ್ಡಾಯವಾಗಿ ಇ–ಕೆವೈಸಿ ಜಾರಿ ಕುರಿತಾದ ಸಭೆಯಲ್ಲಿ ಇಒ ಚಂದ್ರಶೇಖರ್ ಕಂದಕೂರ ಅವರು ಕೆಳ ಹಂತದ ಅಧಿಕಾರಿಗಳಿಗೆ ಸೂಚಿಸಿದರು.

ನರೇಗಾ ಕಾಮಗಾರಿಗಳ ಕೂಲಿಕೆಲಸದಲ್ಲಿ ಕೂಲಿಕಾರರ ಹಾಜರಾತಿ ಕುರಿತು ಅನೇಕ ಸಮಸ್ಯೆಗಳು ಮತ್ತು ದೂರುಗಳು ಕೇಳಿ ಬಂದಿದ್ದವು. ಹೀಗಾಗಿ ಕೂಲಿಕಾರರ ಹಾಜರಾತಿಯಲ್ಲಿ ಪಾರದರ್ಶಕತೆ ತರುವಲ್ಲಿ ಕೇಂದ್ರ ಸರ್ಕಾರ ನರೇಗಾ ಕೂಲಿಕಾರರ ಹಾಜರಾತಿಯಲ್ಲಿ ಕಡ್ಡಾಯವಾಗಿ ಇ–ಕೆವೈಸಿ ಜಾರಿಗೊಳಿಸಿದೆ. ಕೇಂದ್ರ ಸರ್ಕಾರದ ಆದೇಶದನ್ವಯ ಗಜೇಂದ್ರಗಡ ತಾಲೂಕಿನ ನರೇಗಾ ಎಲ್ಲ ಕೂಲಿಕಾರರಿಗೆ 13 ಗ್ರಾಮ ಪಂಚಾಯತಿಗಳ ಗ್ರಾಮ ಕಾಯಕ ಮಿತ್ರ, ಗಣಕಯಂತ್ರ ನಿರ್ವಾಹಕ, ಬಿಎಫ್ ಟಿ ಮತ್ತು ನೀರುಗಂಟ್ಟಿ ಅವರು ಇ–ಕೆವೈಸಿ ಮಾಡಿಸಬೇಕೆಂದು ತಾಕೀತು ಮಾಡಿದರು.



ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಿಂದ ಬಂದ ಸೂಚನೆಯಂತೆ, ಸೆಪ್ಟೆಂಬರ್ 30, 2025ರೊಳಗೆ ಎನ್‌ಎಂಎಂಎಸ್ (ನ್ಯಾಷನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಮ್) ಇ–ಕೆವೈಸಿ ಪ್ರಕ್ರಿಯೆ ಕಡ್ಡಾಯವಾಗಿದೆ. ಆದರೆ, ಗಜೇಂದ್ರಗಡ ತಾಲೂಕಿನಲ್ಲಿ ಇನ್ನೂ ಹೆಚ್ಚಿನ ಕೂಲಿಕಾರರು ಈ ಪ್ರಕ್ರಿಯೆ ಪೂರ್ಣಗೊಳಿಸದಿರುವುದರಿಂದ, ತಾಲೂಕ ಪಂಚಾಯತಿಯ ಐಇಸಿ ಚಟುವಟಿಕೆಗಳ ಮೂಲಕ ವ್ಯಾಪಕ ಜಾಗೃತಿ ಕಾರ್ಯಕ್ರಮಗಳ ಕುರಿತು ವಿಡಿಯೋ ಮತ್ತು ಆಡಿಯೋ ಧ್ವನಿ ಪ್ರಚಾರಕ್ಕೆ ಪರಿಕರಗಳನ್ನು ಸಿದ್ಧಪಡಿಸಿಲಾಗಿದೆ. ಇವುಗಳನ್ನು ಬಳಸಿಕೊಂಡು ನರೇಗಾ ಕೂಲಿಕಾರರಲ್ಲಿ ಇ–ಕೆವೈಸಿ ಕಡ್ಡಾಯ ಬಗ್ಗೆ ಜಾಗೃತಿ ಮೂಡಿಸಿ ಕ್ರಮವಹಿಸುವಂತೆ ತಿಳಿಸಿದರು.

ಸಭೆಯಲ್ಲಿದ್ದ ತಾಲೂಕು ಪಂಚಾಯತ ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕರಾದ ಬಸವರಾಜ ಬಡಿಗೇರ್ ಅವರು ಮಾತನಾಡಿ, ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಿದರೆ ಕೂಲಿ ಪಾವತಿಯಲ್ಲಿ ವೇಗ ಮತ್ತು ಪಾರದರ್ಶಕತೆ ಹೆಚ್ಚುತ್ತದೆ. ಜೊತೆಗೆ, ಕಾರ್ಮಿಕರ ಹಾಜರಾತಿಯನ್ನು ಮುಖ ಆಧಾರಿತ (Face Authentication) ತಂತ್ರದ ಮೂಲಕ ಎನ್‌ಎಂಎಂಎಸ್ ಅಪ್ಲಿಕೇಶನ್ನಲ್ಲಿ ನಿಖರವಾಗಿ ದಾಖಲಿಸಬಹುದು. ಇದು ನರೇಗಾ ಯೋಜನೆಯ ವಿಶ್ವಾಸಾರ್ಹತೆ ಮತ್ತು ಪರಿಣಾಮಕಾರತೆಯನ್ನು ಹೆಚ್ಚಿಸುತ್ತದೆ. ಸದ್ಯದಲ್ಲೇ ಎನ್‌ಎಂಎಂಎಸ್ ಅಪ್ಲಿಕೇಶನ್ನಲ್ಲಿ ಕಾರ್ಮಿಕರ ಫೋಟೋ ಸೆರೆಹಿಡಿದು, ಆಧಾರ್ ಸಂಖ್ಯೆಯೊಂದಿಗೆ ಮುಖ ಹೊಂದಾಣಿಕೆ ಮೂಲಕ ಹಾಜರಾತಿ ದೃಢಪಡಿಸಲಾಗುತ್ತಿದೆ. ಇ–ಕೆವೈಸಿ ಪೂರ್ಣಗೊಳಿಸದ ಕಾರ್ಮಿಕರ ಹಾಜರಾತಿಯನ್ನು ಮುಂದಿನ ದಿನಗಳಲ್ಲಿ ಪರಿಗಣಿಸಲಾಗುವುದಿಲ್ಲ ಎಂದರು.

ಗಜೇಂದ್ರಗಡ ತಾಲೂಕಿನ ಒಟ್ಟು 13 ಗ್ರಾಮ ಪಂಚಾಯತಿಗಳಲ್ಲಿ 17969 ಕುಟುಂಬಗಳಿದ್ದು 48543 ನೊಂದಣಿ ಆದ ಕೂಲಿಕಾರರು ಇದ್ದು, ಅದರಲ್ಲಿ 37306 ಸಕ್ರಿಯ ಕೂಲಿಕಾರರು ಇರುತ್ತಾರೆ. ಸಕ್ರೀಯ 37306 ನರೇಗಾ ಕೂಲಿಕಾರರ ಇ–ಕೆವೈಸಿ ಮಾಡಿಕೊಳ್ಳುವುದು ಕಡ್ಡಾಯ. ಸರ್ಕಾರದ ಈ ಮಹತ್ವಾಕಾಂಕ್ಷಿ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ಎಲ್ಲ ಕಾರ್ಮಿಕರು ತಕ್ಷಣ ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಬೇಕೆಂದು ಗೂಗಲ್ ಸಭೆಯಲ್ಲಿ ತಾಲೂಕ ಪಂಚಾಯತ್ನ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಚಂದಚ್ರಶೇಖರ್,ಬಿ ಕಂದಕೂರ ಮತ್ತು ಸಹಾಯಕ ನಿರ್ದೇಶಕರು ಗ್ರಾಮೀಣ ಉದ್ಯೋಗ ಬಸವರಾಜ ಬಡಿಗೇರ ಅವರು ಜಂಟಿಯಾಗಿ ಮನವಿ ಮಾಡಿದರು.

ಸಭೆಯಲ್ಲಿ ತಾಲೂಕು ಮಟ್ಟದ ನರೇಗಾ ಸಿಬ್ಬಂದಿಗಳಾದ, ಐಇಸಿ ಸಂಯೋಜಕರು, ತಾಂತ್ರಿಕ ಸಂಯೋಜಕರು, ಎಂಐಎಸ್ ಸಂಯೋಜಕರು ಹಾಜರಿದ್ದರು. ಜಿಲ್ಲಾ ಪಂಚಾಯತ ನರೇಗಾ ವಿಭಾಗದ ಎಡಿಪಿಸಿ ಕಿರಣಕುಮಾರ್ ಅವರು ಸಭೆಯಲ್ಲಿ ಭಾಗವಹಿಸಿ ಇ–ಕೆವೈಸಿ ಕಡ್ಡಾಯ ಕುರಿತು ಹೆಚ್ಚಿನ ಮಾಹಿತಿ ನೀಡಿದರು.

## ರಾಯನಗೌಡರ ಕೊಡುಗೆ ಅನನ್ಯ




**ಯರಗಟ್ಟಿ:** ಸ್ವಾತಂತ್ರ್ಯ ಹೋರಾಟಗಾರ ತಲ್ಲೂರು ರಾಯನಗೌಡರ ಕೊಡುಗೆ ಅನನ್ಯವಾದುದು ಎಂದು ಪಟ್ಟಣದ ಬಾಲಕಿಯರ ವಸತಿ ನಿಲಯದ ಅಧಕ್ಷಕರಾದ ಆಶಾ ಪರೀಟ ಅವರು ಹೇಳಿದರು.

ಪಟ್ಟಣದ ಸಿ.ಎಂ. ಮಾಮನಿ ಕಾಲೇಜು ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ತಲ್ಲೂರು ರಾಯನಗೌಡರ ಪುಣ್ಯಸ್ಮರಣೆ ಪ್ರಯುಕ್ತ ಆಯೋಜಿಸಿದ ವಿಚಾರ ಸಂಕಿರಣದ ಸಂಪನ್ಮೂಲ ವ್ಯಕ್ತಿಯಾಗಿ ಉಪನ್ಯಾಸ ನೀಡಿದ ಅವರು, ಕಾನೂನು ವ್ಯಾಸಂಗವನ್ನು ಮೊಟಕುಗೊಳಿಸಿ ಬ್ರಿಟಿಷರ ವಿರುದ್ಧದ ಹೋರಾಟಕ್ಕೆ ಧುಮುಕಿದ ತಲ್ಲೂರು ರಾಯನಗೌಡರು ಕೇವಲ ಸ್ವಾತಂತ್ರ್ಯ ಹೋರಾಟಗಾರ ಮಾತ್ರವಾಗಿರದೆ, ಕರ್ನಾಟಕದ ಏಕೀಕರಣ ಚಳವಳಿಯಲ್ಲಿಯೂ ಸಕ್ರಿಯವಾಗಿ ತೊಡಗಿದ್ದರು. ಸ್ವಾತಂತ್ರ್ಯ ನಂತರ ಸಮಾಜ ಸುಧಾರಣೆಯ ಹಲವು ಉಪಯುಕ್ತ ಯೋಜನೆಗಳ ಜಾರಿಯೊಂದಿಗೆ ಕಿತ್ತೂರು ಸಂಸ್ಥಾನದ ಇತಿಹಾಸದ ದಾಖಲೆಗಳನ್ನು ಸಂಗ್ರಹಿಸಲು ಇಂಗ್ಲೆಂಡಿಗೆ ಹೋಗಿ ಬಂದರು ಎಂದು ಹೇಳಿದರು.

ಯರಗಟ್ಟಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ತಮ್ಮಣ್ಣ ಕಾಮಣ್ಣವರ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಪ್ರಾಂಶುಪಾಲರಾದ ಪ್ರೊ. ರಾಯನಗೌಡ ಮರಿಗೌಡರ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು. ತಲ್ಲೂರು ರಾಯನಗೌಡರ ವಂಶಸ್ಥರಾದ ಶಂಕರಗೌಡ ಪಾಟೀಲ, ತಲ್ಲೂರು ಗ್ರಾಮದ ಹಿರಿಯರಾದ ಈರಣ್ಣ ಹುದ್ದಾರ, ರವಿಕುಮಾರ ಅಣ್ಣಿಗೇರಿ ಸೇರಿದಂತೆ ಮಹಾವಿದ್ಯಾಲಯದ ಅಧ್ಯಾಪಕರಾದ ಡಾ. ಸುನಂದಾ ಮಾದರ, ಡಾ. ರಾಜಶೇಖರ ಬಿರಾದಾರ ಶಂಕರ ಲಗಳಿ, ರಮೇಶ ಯರಗಟ್ಟಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿದ್ಯಾರ್ಥಿನಿಯರಾದ ಅನ್ನಪೂರ್ಣ ಸವದತ್ತಿ ನಿರೂಪಿಸಿದರು. ನಿಂಗವ್ವ ಪಾಟೀಲ ಪ್ರಾರ್ಥನೆಗೈದರು. ಜ್ಯೋತಿ ಪಟ್ಟಣಶೆಟ್ಟಿ ಸ್ವಾಗತ ಕೋರಿದರು. ತೇಜಸ್ವಿನಿ ಮದ್ದಾನಿ ವಂದಿಸಿದರು.

# ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆ ಕಾಪಾಡಿ



**ವಿಜಯಪುರ:** ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಜಯಪುರ ವಿಭಾಗ ಜಿಲ್ಲಾಡಳಿತ ಹಾಗೂ ವಿಜಯಪುರ ರೋಟರಿ ಕ್ಲಬ್‌ನ ಇವರ ಸಹಯೋಗದಲ್ಲಿ ಪ್ರಯಾಣಿಕರಲ್ಲಿ ಸ್ವಚ್ಛತೆಯ ಅರಿವು ಮೂಡಿಸುವ ಉದ್ದೇಶದಿಂದ ಇತ್ತೀಚೆಗೆ ಒಂದು ದಿನದ ಸ್ವಚ್ಛತಾ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರಬರ ಅವರು ಮಾತನಾಡಿ, ವಿಭಾಗದ ಬಸ್ ನಿಲ್ದಾಣಗಳ ಸ್ವಚ್ಛತೆ ಹಾಗೂ ನಿಲ್ದಾಣದಲ್ಲಿ ಕುಡಿಯುವ ನೀರು, ಶೌಚಾಲಯಗಳ ಸಮರ್ಪಕ ನಿರ್ವಹಣೆಗೆ ಕ್ರಮ ತೆಗೆದುಕೊಳ್ಳಲಾಗಿದೆ. ಜಿಲ್ಲೆಯ ಎಲ್ಲ ಬಸ್‌ನಿಲ್ದಾಣಗಳ ಸ್ವಚ್ಛತೆ ಹಾಗೂ ಪ್ರಯಾಣಿಕ ಸ್ನೇಹಿ ಶೌಚಾಲಯ ನಿರ್ವಹಣೆಗಾಗಿ ಕಾರ್ಮಿಕ ಇಲಾಖೆಯಡಿ ನೋಂದಾಯಿತ ಗುತ್ತಿಗೆದಾರರಿಗೆ ಇ–ಟೆಂಡರ್ ಮೂಲಕ ಆಯ್ಕೆ ಮಾಡಿ ಪರವಾನಗಿ ನೀಡಲಾಗಿದೆ. ಪರವಾನಿಗೆದಾರರು ಪ್ರತಿನಿತ್ಯ ಬಸ್ ನಿಲ್ದಾಣ ಸ್ವಚ್ಛಗೊಳಿಸಿರುವುದನ್ನು ಪರಿಶೀಲಿಸಲು ಬಸ್ ನಿಲ್ದಾಣಗಳ ಸ್ವಚ್ಛತೆ ವಿಜಯಪುರ ವಿಭಾಗ ಎಂಬ ವಾಟ್ಸ್–ಅಪ್ ಗ್ರೂಪ್ ರಚಿಸಿಕೊಂಡು ಅಲ್ಲಿ ಪ್ರತಿ ದಿನ ಮೂರು ಬಾರಿ ಬಸ್ ನಿಲ್ದಾಣ ಸ್ವಚ್ಛಗೊಳಿಸಿರುವ ಕುರಿತಾಗಿ ಜಿಪಿಎಸ್ ಫೋಟೊ ಅಪ್‌ಲೋಡ್ ಮಾಡಲು ಸಿಬ್ಬಂದಿಗೆ ಸೂಚಿಸಲಾಗಿದೆ. ಸಂಸ್ಥೆಯ ಸಿಬ್ಬಂದಿಗಳು ಹಾಗೂ ಸ್ವಚ್ಛತಾ ಕಾರ್ಮಿಕರು ಪ್ರತಿದಿನ ಅಪಲೋಡ್ ಮಾಡಿದ ಫೋಟೊಗಳನ್ನು ಪರಿಶೀಲಿಸಿ ಬಸ್ ನಿಲ್ದಾಣಗಳನ್ನು ಸ್ವಚ್ಛವಾಗಿಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು. ಬಸ್ ನಿಲ್ದಾಣದ ಪರಿವೀಕ್ಷಣಾ ಸಮಯದಲ್ಲಿ ಸ್ವಚ್ಛತೆಯ ಬಗ್ಗೆ ನ್ಯೂನ್ಯತೆಗಳನ್ನು ಕಂಡು ಬಂದಲ್ಲಿ ಸಂಬಂಧಪಟ್ಟ ಸ್ವಚ್ಛತಾ ಪರವಾನಿಗೆದಾರರಿಗೆ ನೋಟೀಸ್ ಜಾರಿ ಮಾಡುವುದಲ್ಲದೇ ದಂಡವನ್ನು ಸಹ ವಿಧಿಸಲು ಕ್ರಮವಹಿಸಲಾಗುವುದು. ಕೆಲವು ಬಸ್ ನಿಲ್ದಾಣಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ. ಇಂಡಸ್ಟ್ರೀಯಲ್ ಫ್ಯಾನ್, ಘನ ತ್ಯಾಜ್ಯ ವಿಲೇವಾರಿಗಾಗಿ ಡಸ್ಟ್ ಬಿನ್‌ಗಳನ್ನು, ಮೊಬೈಲ್ ಚಾರ್ಜರ್ ಪಾಯಿಂಟ್ ಅಳವಡಿಸಲಾಗಿದ್ದು, ಮಹಿಳಾ ವಿಶ್ರಾಂತಿ ಕೊಠಡಿ ಹಾಗೂ ಹಾಲುಣಿಸುವ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಹೇಳಿದ ಅವರು ಸ್ವಚ್ಛತೆಗೆ ಆದ್ಯತೆ ನೀಡುವಂತೆ ಸಾರ್ವಜನಿಕರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಜಯಪುರ ವಿಭಾಗದ ಅಧಿಕಾರಿ, ಸಿಬ್ಬಂದಿ, ಉಪಸ್ಥಿತರಿದ್ದರು.

## ಅರ್ಹ ವಯಸ್ಸಿನ ಖಾತ್ರಿ ನಂತರವೇ ವಿವಾಹಕ್ಕೆ ಅವಕಾಶ: ಡಿಸಿ ಇಟ್ನಾಳ

**ಕೊಪ್ಪಳ:** ದೇವಾಲಯಗಳಲ್ಲಿ, ಮಸೀದಿಗಳಲ್ಲಿ ಹಾಗೂ ಚರ್ಚ್‌ಗಳಲ್ಲಿ ನಡೆಯುವ ಎಲ್ಲ ವಿವಾಹಗಳಲ್ಲಿ ವಧು–ವರರ ಅರ್ಹ ವಯಸ್ಸಿನ ದೃಢೀಕರಣದ ನಂತರವೇ ಅರ್ಚಕರು, ಮೌಲ್ವಿಗಳು ಹಾಗೂ ಪಾದ್ರಿಗಳು ವಿವಾಹಕ್ಕೆ ಅವಕಾಶ ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ.ಇಟ್ನಾಳ ಅವರು ಸೂಚಿಸಿದ್ದಾರೆ. ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಜಿಲ್ಲಾಡಳಿತವು ಹಲವಾರು ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸುತ್ತಿದ್ದಾಗ್ಯೂ ಜಿಲ್ಲೆಯಲ್ಲಿ ಅಪ್ರಾಪ್ತ ಮಕ್ಕಳಿಗೆ ವಿವಾಹವನ್ನು ಮಾಡಲು ಪ್ರಯತ್ನಿಸುತ್ತಿರುವುದು ಕಂಡುಬರುತ್ತಿದೆ. ಬಾಲ್ಯವಿವಾಹ ನಿಷೇಧ ಕಾಯ್ದೆ–2006 ಕರ್ನಾಟಕ ತಿದ್ದುಪಡಿ–2016 ರಂತೆ 18 ವರ್ಷದೊಳಗಿನ ಹೆಣ್ಣು ಮಗು ಹಾಗೂ 21 ವರ್ಷದೊಳಗಿನ ಗಂಡು ಮಕ್ಕಳ ವಿವಾಹವನ್ನು ನಿಷೇಧಿಸಿದೆ. ಬಾಲ್ಯವಿವಾಹವು ಶಿಕ್ಷಾರ್ಹ ಅಪರಾಧವಾಗಿದ್ದು, ಕಾಯ್ದೆಯ ಕಲಂ 10 ಮತ್ತು 11 ರನ್ವಯ ಬಾಲ್ಯವಿವಾಹದಲ್ಲಿ ಭಾಗವಹಿಸಿದವರು, ಪ್ರೋತ್ಸಾಹಿಸಿದವರು, ಸಹಕರಿಸಿದವರು ಹಾಗೂ ನಡೆಸಿದವರಿಗೆ ಕನಿಷ್ಠ 1 ರಿಂದ 2 ವರ್ಷಗಳ ಜೈಲು ಶಿಕ್ಷೆ ಮತ್ತು ರೂ.1 ಲಕ್ಷದವರೆಗೆ ದಂಡವನ್ನು ವಿಧಿಸಬಹುದಾಗಿದೆ.

ಸರ್ವೋಚ್ಚ ನ್ಯಾಯಾಲಯವು ಬಾಲ್ಯವಿವಾಹದಿಂದ ಮಕ್ಕಳ ಬೆಳವಣಿಗೆಯ ಮೇಲೆ ದುಷ್ಪರಿಣಾಮ ಬೀರುವುದಲ್ಲದೆ ಮಕ್ಕಳ ಮೇಲೆ ಲೈಂಗಿಕ ಅಪರಾಧಗಳನ್ನು ಎಸಗಲು ಅವಕಾಶಗಳನ್ನು ನೀಡಿದಂತಾಗುತ್ತದೆ. ಆದ್ದರಿಂದ ಬಾಲ್ಯವಿವಾಹಗಳನ್ನು ಕಡ್ಡಾಯವಾಗಿ ತಡೆಗಟ್ಟಿ ಮತ್ತು ಸಮುದಾಯಗಳಲ್ಲಿ ಜಾಗೃತಿಯನ್ನು ಮೂಡಿಸಲು ಅವಶ್ಯಕ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ದೇಶಿಸಿದೆ. ಆದ್ದರಿಂದ ತಾವುಗಳು ನೆರವೇರಿಸುವ ವಿವಾಹಗಳಲ್ಲಿ ವಧುವಿನ ವಯಸ್ಸು 18 ವರ್ಷ ಹಾಗೂ ವರನ ವಯಸ್ಸು 21 ವರ್ಷ ಪೂರ್ಣವಾಗಿರುವ ಬಗ್ಗೆ ಖಾತ್ರಿ ಪಡಿಸಿಕೊಂಡ ನಂತರವೇ(ಜನನ ಪ್ರಮಾಣ ಪತ್ರ ಅಥವಾ ಶಾಲಾ ದಾಖಲಾತಿ ಪ್ರಮಾಣ ಪತ್ರ ಅಥವಾ ಎರಡೂ ದಾಖಲಾತಿ ಇಲ್ಲದ ಸಂದರ್ಭದಲ್ಲಿ ಮಾತ್ರ ಜಿಲ್ಲಾ ಶಸ್ತ್ರ ಚಿಕಿತ್ಸಕರು ನೀಡಿದ ವೈದ್ಯಕೀಯ ಪ್ರಮಾಣ ಪತ್ರಗಳು ಮಾತ್ರ ಮಾನ್ಯವಾಗಿದ್ದು, ಇನ್ಯಾವುದೇ ದಾಖಲಾತಿಗಳು ಮಾನ್ಯವಲ್ಲ) ಅಂತಹ ವಿವಾಹಗಳಿಗೆ ಅವಕಾಶ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಲೋಕಾಪೂರ-ಧಾರವಾಡ ಹೊಸ ರೇಲ್ವೆ ಮಾರ್ಗ

# ಜನಪ್ರತಿನಿಧಿಗಳ ಇಚ್ಛಾಸಕ್ತಿ ಕೊರತೆ

**ರಾಮದುರ್ಗ:** ಸ್ವಾತಂತ್ರ್ಯ ಬಂದು 7 ದಶಕ ಗತಿಸಿದರೂ ಸಾಕಷ್ಟು ಐತಿಹಾಸಿಕ ಪುಣ್ಯಕ್ಷೇತ್ರಗಳಿರುವ ಮಾರ್ಗದಲ್ಲಿ ರೇಲ್ವೆ ಮಾರ್ಗ ಇಲ್ಲವೆಂದರೆ ಒಂದು ದುರಂತ. ಲೋಕಾಪೂರ–ಧಾರವಾಡ ಹೊಸ ರೇಲ್ವೆ ಮಾರ್ಗ ಮಾಡುವಲ್ಲಿ ಜನಪ್ರತಿನಿಧಿಗಳ ಇಚ್ಛಾಸಕ್ತಿ ಕೊರತೆ ಇದಕ್ಕೆ ಕಾರಣ. ಅವರು ಮನಸ್ಸು ಮಾಡಿದ್ದರೆ ಎಂದೋ ಈ ಭಾಗಕ್ಕೆ ರೇಲ್ವೆ ಮಾರ್ಗವಾಗುತ್ತಿತ್ತು ಎಂದು ರೇಲ್ವೆ ಹೋರಾಟ ಕ್ರೀಯಾ ಸಮಿತಿಯ ರಾಜ್ಯಾಧ್ಯಕ್ಷ ಕುತುಬುದ್ದೀನ್ ಖಾಜಿ ಬೇಸರ ವ್ಯಕ್ತಪಡಿಸಿದರು.

ಸ್ಥಳೀಯ ಪ್ರೆಸ್‌ಕ್ಲಬ್‌ನಲ್ಲಿ ಬುಧವಾರ ಪತ್ರಿಕಾಗೋಷ್ಠಿ ನಡೆಸಿದ ಅವರು, ಲೋಕಾಪೂರ–ಧಾರವಾಡ ಹೊಸ ರೇಲ್ವೆ ಮಾರ್ಗಕ್ಕಾಗಿ ಕಳೆದ ವರ್ಷ ಬೃಹತ್ ಪ್ರತಿಭಟನೆ ಮಾಡಿದ್ದರೂ ರೇಲ್ವೆ ಇಲಾಖೆಯ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಕಿಂಚಿತ್ತು ಗಮನ ಹರಿಸುತ್ತಿಲ್ಲ. ಕಾಟಾಚಾರ ಸರ್ವೆ ಮಾಡಿಸಿ ಕೈಚೆಲ್ಲಿ ಕುಳಿತಿದ್ದಾರೆ. ಇನ್ನೇನಿದ್ದರೂ ಉಗ್ರ ಹೋರಾಟದ ಮೂಲಕವೇ ಪಡೆದುಕೊಳ್ಳುವುದು ಅನಿವಾರ್ಯವಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಳೆದ ವರ್ಷ ಮಾಡಿರುವ ಹೋರಾಟ ಫಲವಾಗಿ ಸರಕಾರ ಸರ್ವೆ ಮಾಡಲು ಅಧಿಕಾರಿಗಳಿಗೆ ನಿರ್ದೇಶನ ನೀಡಿತು. ಅಧಿಕಾರಿಗಳು ತಪ್ಪು ಸರ್ವೆ ಮಾಡಿ ಸರಕಾರಕ್ಕೆ ತಪ್ಪು ವರದಿ ಸಲ್ಲಿಕೆ ಮಾಡಿದ್ದರಿಂದ ಈ ಯೋಜನೆ ಹಳ್ಳ ಹಿಡಿಯುವಂತಾಗಿದೆ ಎಂದರು.

ಲೋಕಾಪೂರ–ಧಾರವಾಡ ಮಾರ್ಗದ ಮಧ್ಯದಲ್ಲಿ ಹಲವು ಪುಣ್ಯಕ್ಷೇತ್ರಗಳು, 11ಕ್ಕೂ ಅಧಿಕ ಸಕ್ಕರೆ ಕಾರ್ಖಾನೆಗಳು, 7ಕ್ಕೂ ಅಧಿಕ ಸಿಮೆಂಟ್ ಕಾರ್ಖಾನೆಗಳಿವೆ. ಸರಕಾರ ನಿರೀಕ್ಷೆಗಿಂತ ಹೆಚ್ಚು



ಆದಾಯ ಸಾಧ್ಯತೆಗಳಿದ್ದರೂ ಹೊಸ ರೇಲ್ವೆ ಮಾರ್ಗ ಮಂಜೂರು ಮಾಡಲು ಏಕೆ ಆಗುತ್ತಿಲ್ಲ ಎಂದು ಪ್ರಶ್ನಿಸಿದ ಅವರು, ಈ ಕುರಿತು ಬೆಳಗಾವಿ, ಧಾರವಾಡ ಸಂಸದರಿಗೆ, ರಾಜ್ಯ ಹಾಗೂ ಕೇಂದ್ರ ರೇಲ್ವೆ ಮಂತ್ರಿಗಳಿಗೆ ಹಾಗೂ ರೇಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಮನವರಿಕೆ ಮಾಡಿಕೊಡಲಾಗಿದೆ. ಬರುವ ರಾಜ್ಯ ಹಾಗೂ ಕೇಂದ್ರ ಬಜಟ್‌ನಲ್ಲಿ ಈ ಯೋಜನೆಗೆ ಅನುದಾನ ಮೀಸಲಿರಿಸಿ ಅನುಷ್ಠಾಣಕ್ಕೆ ಕ್ರಮ ವಹಿಸಬೇಕೆಂದು ಅವರು ಮನವಿ ಮಾಡಿದರು. ಹೋರಾಟಗಾರರ ತಾಳ್ಮೆ ಪರೀಕ್ಷೆ ಮಾಡಬೇಡಿ. ಇನ್ನೂ 15 ದಿನಗಳ ವರೆಗೆ ಕಾಯುತ್ತೇವೆ. ಸಕಾರಾತ್ಮಕವಾಗಿ ಸ್ಪಂದಿಸಿದರೆ ಸರಿ, ಇಲ್ಲದಿದ್ದರೆ ಲೋಕಾಪೂರ–ಧಾರವಾಡ ರೇಲ್ವೆ ಯೋಜನೆ ಅನುಷ್ಠಾಣ ಮಾಡುವ ವರೆಗೂ ಬೃಹತ್ ಜನಾಂದೋಲನ ಮಾಡಬೇಕಾಗುತ್ತದೆ ಎಂದು ಜನಪ್ರತಿನಿಧಿಗಳಿಗೆ ಮತ್ತು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ರೇಲ್ವೆ ಹೋರಾಟ ಕ್ರೀಯಾ ಸಮಿತಿಯ ಸದಸ್ಯರಾದ ಗೈಬು ಜೈನೆಖಾನ್. ಪ್ರೊ. ಎಸ್.ಜಿ. ಚಿಕ್ಕನರಗುಂದ, ಮಹ್ಮದಶೆಫಿ ಬೆಣ್ಣಿ, ಚಂದ್ರು ಮಾಳದಕರ, ಡಾ. ಎಂ.ಕೆ. ಯಾದವಾಡ ಉಪಸ್ಥಿತರಿದ್ದರು.

## ಶಿಶಿಕ್ಷು ತರಬೇತಿಗೆ ನೇರ ಸಂದರ್ಶನ

**ಕಾರವಾರ:** ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಕೇಂದ್ರ ಕಛೇರಿ ಹುಬ್ಬಳ್ಳಿಯಲ್ಲಿ ITI COPA (Computer Operator and Programing Assistant) ವಿದ್ಯಾರ್ಹತೆ ಹೊಂದಿದ ಶಿಶಿಕ್ಷುದಾರರನ್ನು ತರಬೇತಿಗೆ ನಿಯೋಜಿಸಿಕೊಳ್ಳಲಾಗುತ್ತಿದ್ದು, ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ವಾ.ಕ.ರ.ಸಾ.ಸಂಸ್ಥೆ, ಕೇಂದ್ರ ಕಚೇರಿ, ಹುಬ್ಬಳ್ಳಿಯಲ್ಲಿ ಅ.17 ರಂದು ಬೆಳಗ್ಗೆ 11 ಗಂಟೆಗೆ ಕಚೇರಿಯ ವೇಳೆಯಲ್ಲಿ ನೇರ ಸಂದರ್ಶನಕ್ಕೆ (Walk in interview) ಆಸಕ್ತ ಅಭ್ಯರ್ಥಿಗಳು ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ವೆಬ್‌ಸೈಟ್ ವಿಳಾಸ www.nwkrtc.karnataka.gov.in ನ್ನು ಸಂಪರ್ಕಿಸುವಂತೆ ಸಂಸ್ಥೆಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

**ಕಾರವಾರ:** ಕಾರವಾರ ಉಪವಿಭಾಗದ ವ್ಯಾಪ್ತಿಯಲ್ಲಿ ವಿದ್ಯುತ್ ಪರಿವರ್ತಕ ಅಳವಡಿಸುವ ಕಾಮಗಾರಿ ಕೆಲಸ ಇರುವುದರಿಂದ ಸದಾಶಿವಗಡ ಫೀಡರಿನ ದೇವವಾಡ, ಮಾಲ್ದಾರವಾಡಾ, ಟೋಲನಾಕಾ, ಸಿಬರ್ಡ ಕಾಲೋನಿ, ದೇವಭಾಗ ಪ್ರದೇಶಗಳಲ್ಲಿ ಅ.10 ರಂದು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 3.30 ಗಂಟೆಯವರೆಗೆ ಕಾರವಾರ ತಾಲೂಕಿನಾದ್ಯಂತ ವಿದ್ಯುತ್ ವ್ಯತ್ಯಯವಾಗಲಿದೆ ಗ್ರಾಹಕರು ಸಹಕರಿಸುವಂತೆ ವಿದ್ಯುತ್ ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ೩೦ ದಿನಗಳ ಉಚಿತ ತರಬೇತಿಗೆ ಅರ್ಜಿ ಆಹ್ವಾನ

**ಕಾರವಾರ:** ಕೆನರಾ ಬ್ಯಾಂಕ್ ಮತ್ತು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಬ್ಯೂಟಿ ಪಾರ್ಲರ್ ಕುರಿತ 30 ದಿನಗಳ ಉಚಿತ ತರಬೇತಿಯು ನವೆಂಬರ್ 4 ರಿಂದ ಪ್ರಾರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್‌ನ್ನು ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9481506564, 9113880324, 08027728166 ನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆತ್ಮಹತ್ಯೆ ಮಾಡಿಕೊಂಡ ರೈತನ ಮನೆಗೆ ನಡಹಳ್ಳಿ ಭೇಟಿ

## ಶಾಸಕ, ಅಧಿಕಾರಿಗಳ ನಿರ್ಲಕ್ಷಕ್ಕೆ ಕಿಡಿ: ರೈತನ ಮಗಳ ಮದುವೆಗೆ ನೆರವಾಗುವ ವಾಗ್ದಾನ

**ಮುದ್ದೇಬಿಹಾಳ:** ಸಾಲಬಾಧೆಯಿಂದ ಕಂಗೆಟ್ಟು ಮರದ ಟೊಂಗೆಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಕುಂಟೋಜಿ ಗ್ರಾಮದ ರೈತ ಸಂಗಣ್ಣ ಗೌಡರ (ಬೊಮ್ಮಣಗಿ) ಅವರ ಮನೆಗೆ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ, ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿಯವರು ಮಂಗಳವಾರ ಭೇಟಿ ನೀಡಿ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಸಂಗಣ್ಣನ ಕುಟುಂಬದ ಸಂಕಷ್ಟ ಕೇಳಿ ತಿಳಿದುಕೊಂಡ ಅವರು ಹೆಣ್ಣುಮಕ್ಕಳು ಮದುವೆ ವಯಸ್ಸಿಗೆ ಬಂದಿದ್ದನ್ನು ಅರಿತು ಮತ್ತು ಈಗಾಗಲೇ ಒಬ್ಬ ಮಗಳಿಗೆ ಎಂಗೇಜಮೆಂಟ್ ಆಗಿದೆ ಎನ್ನುವುದನ್ನು ತಿಳಿದು ಮದುವೆಯ ಸಂದರ್ಭ ನೆರವು ನೀಡುವ ವಾಗ್ದಾನ ಮಾಡಿದರಲ್ಲದೆ ಸರ್ಕಾರದ ಮೇಲೆ, ಅಧಿಕಾರಿಗಳ ಮೇಲೆ ಒತ್ತಡ ಹಾಕಿ ಸೂಕ್ತ ಪರಿಹಾರ ದೊರಕಿಸಿಕೊಡುವ ಭರವಸೆ ನೀಡಿದರು.

ಮೃತ ರೈತನಿಗೆ ವಾಸಕ್ಕೆ ಸ್ವಂತ ಮನೆ ಇಲ್ಲ. ಬಾಡಿಗೆ ಮನೆಯಲ್ಲಿ ಕುಟುಂಬ ಸಮೇತ ವಾಸಿಸುತ್ತಿದ್ದ. 4 ಎಕರೆ ಜಮೀನಿದ್ದು ತೊಗರಿ, ಈರುಳ್ಳಿ ಮಳೆಯಿಂದ ಹಾಳಾಗಿದೆ. 6.5 ಲಕ್ಷ ರೂ ಸಾಲ ಮಾಡಿಕೊಂಡಿದ್ದಾನೆ. ಬೆಳೆ ಹಾನಿ, ಸಾಲಬಾಧೆ ತಾಳದೆ ನೊಂದು ನೇಣಿಗೆ ಶರಣಾಗಿರುವ ಕುರಿತು ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಮದುವೆ ವಯಸ್ಸಿಗೆ ಬಂದಿರುವ ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಇದ್ದಾರೆ ಎನ್ನುವುದನ್ನು ಕೇಳಿ ತಿಳಿದುಕೊಂಡ ಅವರು, ಸರ್ಕಾರದ ನಿಯಮದ ಪ್ರಕಾರ ಇಂಥ ಪ್ರಕರಣಗಳಲ್ಲಿ



ರೈತನ ಕುಟುಂಬಕ್ಕೆ 5 ಲಕ್ಷ ಪರಿಹಾರ, ಅವನ ಮಕ್ಕಳ ಉಚಿತ ಶಿಕ್ಷಣದ ಸಂಪೂರ್ಣ ಹೊಣೆ ಸರ್ಕಾರದ್ದಾಗಿರುತ್ತದೆ ಎಂದರು.

ಅಧಿಕಾರಿಗಳು ಮೃತನ ಮನೆಗೆ ಭೇಟಿ ನೀಡದಿರುವುದನ್ನು ಅರಿತು ಸ್ಥಳದಿಂದಲೇ ಜಿಲ್ಲಾಧಿಕಾರಿಗೆ ಕರೆ ಮಾಡಿದರು. ಆದರೆ ಅವರು ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿದ್ದ ಕಾರಣ ಅವರ ಪಿಎ ಕರೆ ಸ್ವೀಕರಿಸಿದರು. ರೈತನ ಮನೆಗೆ ಅಧಿಕಾರಿಗಳು ಭೇಟಿ ನೀಡಲು ನಿರ್ದೇಶನ ನೀಡುವಂತೆ ಜಿಲ್ಲಾಧಿಕಾರಿಗೆ ತಿಳಿಸಲು ನಡಹಳ್ಳಿಯವರು ಪಿಎಗೆ ಸೂಚಿಸಿದರು.

ಕಮಿಟಿ ಸದಸ್ಯ ಕಾರ್ಯದರ್ಶಿಯಾಗಿರುವ ಸಹಾಯಕ ಕೃಷಿ ನಿರ್ದೇಶಕ ಸುರೇಶ ಭಾವಿಕಟ್ಟಿ ಅವರಿಗೆ ಕರೆ ಮಾಡಿ ರೈತನ ಮನೆಗೆ ಬಂದು ಸಮಸ್ಯೆ ಆಲಿಸಲು ನಿರ್ಲಕ್ಷ್ಯ ತೋರಿದ್ದಕ್ಕೆ ಬೇಸರ ವ್ಯಕ್ತಪಡಿಸಿ ಈಗಲಾದರೂ ರೈತನ ಮನೆಗೆ ಬಂದು ಸರಿಯಾದ ವರದಿಯನ್ನು ಮೇಲಧಿಕಾರಿಗಳಿಗೆ ಸಲ್ಲಿಸುವಂತೆ ಸಲಹೆ ನೀಡಿದರು. ರೈತ ಸಂಗಣ್ಣನ ಎಲ್ಲ ಸಹೋದರರು ಸೇರಿಕೊಂಡು ಮೃತ ರೈತನ ಮಕ್ಕಳ ಶಿಕ್ಷಣಕ್ಕೆ, ಅವರು ಮದುವೆಗೆ ಒಟ್ಟಾಗಿ ಸೇರಿ ಅವರ ಕುಟುಂಬ ನಿರ್ವಹಿಸಬೇಕು ಎಂದು ಕಿವಿಮಾತು ಹೇಳಿದರು.

ಈ ಸಂದರ್ಭ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಘಟನೆ ಬೆಳಕಿಗೆ ಬಂದು 30 ಘಂಟೆ ಕಳೆದರೂ ಇಲ್ಲೇ ಇರುವ ಶಾಸಕ ಸಿ.ಎಸ್.ನಾಡಗೌಡರು ನೊಂದ ಕುಟುಂಬಕ್ಕೆ ಸಾಂತ್ವನ ಹೇಳಲು ಬಂದಿಲ್ಲ. ತಹಶೀಲ್ದಾರ್ ಸೇರಿ ಯಾವೊಬ್ಬ ಅಧಿಕಾರಿಯೂ ಇವರ ಸಂಕಷ್ಟ ಆಲಿಸಿಲ್ಲ. ಗ್ರಾಮ ಆಡಳಿತಾಧಿಕಾರಿ ಹೊರತುಪಡಿಸಿ ಯಾರೊಬ್ಬರೂ ಇವರ ಬಳಿ ಬಂದಿಲ್ಲ. ರೈತನ ಆತ್ಮಹತ್ಯೆಯ ಪ್ರಕರಣ ನಿಭಾಯಿಸಲು, ಸೂಕ್ತ ಪರಿಹಾರ ಸಕಾಲಕ್ಕೆ ಒದಗಿಸಲು ಜಿಲ್ಲಾ ಮಟ್ಟದಲ್ಲಿ ಕಮೀಟಿ ಇದ್ದು ಉಪವಿಭಾಗಾಧಿಕಾರಿ ಕಮಿಟಿ ಅಧ್ಯಕ್ಷರು, ತಹಶೀಲ್ದಾರ್, ಪೊಲೀಸ್ ಅಧಿಕಾರಿ ಸದಸ್ಯರಾಗಿರುತ್ತಾರೆ. ಸಹಾಯಕ ಕೃಷಿ ನಿರ್ದೇಶಕ ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ. ಇವರು ಕೂಡಲೇ ಕ್ರಿಯಾಶೀಲರಾಗಿ ನೊಂದ ಕುಟುಂಬದ ನೆರವಿಗೆ ಧಾವಿಸಬೇಕು. ನಿರ್ಲಕ್ಷ್ಯ ತೋರಿದರೆ ಕುಟುಂಬದ ಪರವಾಗಿ ಹೋರಾಟ ನಡೆಸಲೂ ಹಿಂಜರಿಯುವುದಿಲ್ಲ ಎಂದರು.

ಬಿಜೆಪಿ ಮುದ್ದೇಬಿಹಾಳ ಮಂಡಲ ಅಧ್ಯಕ್ಷ ಜಗದೀಶ ಪಂಪಣ್ಣವರ್, ಯುವ ಮೋರ್ಚಾ ಅಧ್ಯಕ್ಷ ಗಿರೀಶಗೌಡ ಪಾಟೀಲ ಹಿರೇಮುರಾಳ, ರೈತನ ತಾಯಿ ಯಲ್ಲವ್ವ, ಪತ್ನಿ ಬೋರಮ್ಮ, ಮಕ್ಕಳು, ಸಹೋದರರು, ಶ್ರೀ ಬಸವೇಶ್ವರ ದೇವಸ್ಥಾನ ಕಮಿಟಿ ಅಧ್ಯಕ್ಷ ಗುರುಲಿಂಗಪ್ಪ ಸುಳ್ಳಳ್ಳಿ, ಮಾಜಿ ಸೈನಿಕ ನಾಗಲಿಂಗಯ್ಯ ಮಠ, ಮಲ್ಲಿಕಾರ್ಜುನ ನಾಟೀಕಾರ, ಮಲ್ಲಿಕಾರ್ಜುನ ಕನ್ನೂರ, ಗ್ರಾಮಸ್ಥರು ಇದ್ದರು.

> ಶಾಸಕ ನಾಡಗೌಡರೇ ಮನೆ ಬಿಟ್ಟು ಹೊರಗೆ ಬನ್ನಿ. ನಿಮಗೆ ಮತ ಹಾಕಿ ಗೆಲ್ಲಿಸಿದವರ ಸಂಕಷ್ಟ ಆಲಿಸಿ ಪರಿಹಾರ ಕಲ್ಪಿಸಲು ಮುಂದಾಗಿ. ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ನಿಮ್ಮದೇ ಸಮುದಾಯದ ರೈತನೊಬ್ಬ ಸಾಲಕ್ಕೆ ನೊಂದು ಆತ್ಮಹತ್ಯೆ ಮಾಡಿಕೊಂಡಿದ್ದು ನಿಮ್ಮ ಅಧಿಕಾರಿಗಳ ಮೂಲಕ ಆ ಕುಟುಂಬಕ್ಕೆ ನ್ಯಾಯ ಕೊಡಿಸಿ.
>
> **ಎ.ಎಸ್.ಪಾಟೀಲ ನಡಹಳ್ಳಿ, ರಾಜ್ಯಾಧ್ಯಕ್ಷರು, ಬಿಜೆಪಿ ರೈತ ಮೋರ್ಚಾ**

### ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪಥ ಸಂಚಲನ ಕಾರ್ಯಕ್ರಮ

# ಆರ್‌ಎಸ್‌ಎಸ್ ತನ್ನ ಗುರಿಯುತ್ತ ಹೆಜ್ಜೆ ಹಾಕುತ್ತಿದೆ




**ಗೋಕಾಕ:** ರಾಷ್ಟ್ರೀಯ ಸ್ವಯಂ ಸೇವಕ ಸಂಘವು ನೂರು ವರ್ಷದ ಯಾತ್ರೆಯಲ್ಲಿ ಅನೇಕ ಕಷ್ಟ ಕಾರ್ಪಣ್ಯ, ದಬ್ಬಾಳಿಕೆ, ಟೀಕೆಗಳನ್ನು ಎದುರಿಸಿ ತನ್ನ ಗುರಿಯತ್ತ ಹೆಜ್ಜೆ ಹಾಕುತ್ತಿದೆ ಎಂದು ಧಾರವಾಡದ ಪ್ರಾಂತ ಕಾರ್ಯಕಾರಿಣಿ ಸದಸ್ಯ ಶ್ರೀಧರ ನಾಡಿಗೇರ ಹೇಳಿದರು.

ಮಂಗಳವಾರದಂದು ನಗರದಲ್ಲಿ ವಿಜಯ ದಶಮಿ ಹಬ್ಬದ ನಿಮಿತ್ಯ ರಾಷ್ಟ್ರೀಯ ಸ್ವಯಂ ಸೇವಕ ಸಂಘ ಹಮ್ಮಿಕೊಂಡಿದ್ದ ಪಥ ಸಂಚಲನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ಹಿಂದುಗಳು ವಿಜಯದ ಆರಾಧಕರಾಗಿದ್ದಾರೆ. ಇದನ್ನು ನೆನಪಿಸುವದೆ ವಿಜಯದಶಮಿ. ನಾವು ನಿರಂತರ ಹೋರಾಡಿ ವಿಜಯ ಸಂಭ್ರಮಿಸುವ ಜನಾಂಗವಾಗಿದ್ದು ಜಗತ್ತೆ ಇಂದು ನಮ್ಮನ್ನು ಗೌರವಿಸುತ್ತಿದೆ. ನಮ್ಮ ಗುರಿಯನ್ನು ತಲುಪಲು ಇನ್ನು ಕೆಲಸ ಮಾಡಬೇಕಿದೆ. ದೇಶ ಭಕ್ತಿ, ಏಕತೆ ನಿರ್ಮಾಣ ಮಾಡಬೇಕು. ಅಸ್ಪೃಶ್ಯತೆ ವಿರುದ್ಧ ಹೋರಾಡಿ ಎಲ್ಲ ಹಿಂದುಗಳನ್ನು ಸಂಘಟಿಸುವ ಶ್ರೇಷ್ಠ ಕಾರ್ಯವನ್ನು ಸಂಘ ಮಾಡುತ್ತಿದೆ. ದೇಶದ ಅಪಾಯ ಸಂದರ್ಭಗಳಲ್ಲಿ ಸ್ವಯಂ ಸೇವಕರು ಜನರ ಮಾನ, ಪ್ರಾಣ ಕಾಪಾಡಿದ್ದಾರೆ. ಪ್ರಚಂಡ ಸಾಮಾಜಿಕ ಶಕ್ತಿಯಾಗಿ ಹೊರಹೊಮ್ಮಿ ಜಗತ್ತಿನಲ್ಲಿಯೇ ಗುರುವಿನ ಸ್ಥಾನಕ್ಕಾಗಿ ನಾವು ಪ್ರಯತ್ನಶೀಲರಾಗಬೇಕಿದೆ ಎಂದರು. ವೇದಿಕೆಯ ಮೇಲೆ ಸಚೀನ ಜಾಧವ, ಎಮ್ ವೈ ಹಾರೂಗೇರಿ ಇದ್ದರು.

ಇದಕ್ಕೂ ಮುಂಚೆ ನಗರದ ಪ್ರಮುಖ ಬೀದಿಗಳಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘ ಸಾವಿರಾರು ಕಾರ್ಯಕರ್ತರಿಂದ ಪಥಸಂಚಲನ ಜರುಗಿತು.

ಶಾಸಕ ರಮೇಶ ಜಾರಕಿಹೊಳಿ, ಕೆಎಲ್‌ಇ ನಿರ್ದೇಶಕ ಜಯಾನಂದ ಮುನವಳ್ಳಿ, ಆರ್‌ಎಸ್‌ಎಸ್ ಮುಖಂಡರಾದ ಎಮ್ ಡಿ ಚುನಮರಿ, ಗೋಪಾಲ ಖಮಲಾಪೂರೆ, ಮಹಾಂತೇಶ ತಾಂವಶಿ, ಪರಮೇಶ ಗುಲ್ಲ ಸೇರಿದಂತೆ ಅನೇಕರು ಇದ್ದರು.

## ಕಟ್ಟಡ ಕಾರ್ಮಿಕರಿಂದ ಅರ್ಜಿ ಆಹ್ವಾನ

**ಧಾರವಾಡ:** ಕಾರ್ಮಿಕ ಇಲಾಖೆಯು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಧಾರವಾಡ ಜಿಲ್ಲೆಗೆ ಸಂಬಂದಿಸಿದಂತೆ, ಗೌಂಡಿ ಕಿಟ್–3264, ಎಲೆಕ್ಟ್ರೀಷನ್–812, ವೆಲ್ಡರ್–200, ಕಾರ್ಪೇಂಟರ್–634, ಪೆಂಟರ್–802, ಪ್ಲಂಬರ್–260, ಕಿಟ್‌ಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಕಿಟ್ ಪಡೆಯಬೇಕಾದ ಅರ್ಹ ನೋಂದಾಯಿತ ಕಟ್ಟಡ ಕಾರ್ಮಿಕರ ಗುರುತಿನ ಚೀಟಿ(ನವೀಕರಣಗೊಂಡಿರಬೇಕು), ಆಧಾರ ಕಾರ್ಡ, ಈ ಹಿಂದೆ ಕಿಟ್‌ಗಳನ್ನು ಪಡೆದಿರುವ ಬಗ್ಗೆ ಸ್ವಯಂ ಘೋಷಣಾ ಪತ್ರ ಮತ್ತು ಮೋಬೈಲ್ ಸಂಖ್ಯೆ ಸಲ್ಲಿಸಬೇಕು. ಆಯಾ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರ ಕಛೇರಿಗಳಲ್ಲಿ ಮತ್ತು ಹಿರಿಯ ಕಾರ್ಮಿಕ ನಿರೀಕ್ಷಕು 1,2,3 ಮತ್ತು 4ನೇ ವೃತ್ತ ಹುಬ್ಬಳ್ಳಿ ಹಾಗೂ ಧಾರವಾಡ ವೃತ್ತದ ಕಛೇರಿಗಳು, ಕಾರ್ಮಿಕ ಅಧಿಕಾರಿಯವರ ಕಛೇರಿ, ಉಪ ವಿಭಾಗ–1 ಮತ್ತು 2, ಹುಬ್ಬಳ್ಳಿ ಹಾಗೂ ಸಹಾಯಕ ಕಾರ್ಮಿಕ ಆಯುಕ್ತರ ಕಛೇರಿ ಹುಬ್ಬಳ್ಳಿ ಕಚೇರಿಗಳಿಗೆ ನವೆಂಬರ 5, 2025 ರೊಳಗೆ ಅರ್ಜಿ ಸಲ್ಲಿಸಬೇಕು. ನಂತರ ಬಂದ ಅರ್ಜಿಗಳನ್ನು ಪುರಸ್ಕರಿಸಲಾಗುವುದಿಲ್ಲ. ಹಾಗೂ ಬಂದಂತಹ ಅರ್ಜಿಗಳನ್ನು ನಿಯಮಾನುಸಾರ ಮತ್ತು ಜೇಷ್ಠತೆ ಅನುಸಾರ ಆಯ್ಕೆ ಮಾಡಿ ಹಂಚಿಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ನಿರೀಕ್ಷಕರು, ಹಿರಿಯ ಕಾರ್ಮಿಕ ನಿರೀಕ್ಷಕರು ಮತ್ತು ಕಾರ್ಮಿಕ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಹುಬ್ಬಳ್ಳಿ ಉಪವಿಭಾಗದ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೂಲ ದಾಖಲೆಗಳ ಪರಿಶೀಲನೆ

**ಗದಗ:** 2025–26 ನೇ ಸಾಲಿನ ಎರಡು ವರ್ಷದ ಬಿ.ಇಡಿ ಕೋರ್ಸಿನ ದಾಖಲಾತಿ ಪರಿಶೀಲನೆಯ ನಡೆಯುತ್ತಿದ್ದು ಮೂಲ ದಾಖಲೆಗಳ ಪರಿಶೀಲನೆಗೆ ನವೆಂಬರ್ 3 ಕೊನೆಯ ದಿನವಾಗಿದೆ. ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಕಳಸಾಪುರ ರೋಡ, ಗದಗ ಇಲ್ಲಿ ಮೂಲ ದಾಖಲೆಗಳೊಂದಿಗೆ ಮತ್ತು ಒಂದು ಸೆಟ್ ಝರಾಕ್ಸ್ ಪ್ರತಿಯೊಂದಿಗೆ ಹಾಜರಾಗಿ ದಾಖಲೆಗಳ ಪರಿಶೀಲನೆ ಮಾಡಿಸಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ www.schooleducation.kar.nic.in ಜಾಲತಾಣವನ್ನು ಸಂಪರ್ಕಿಸ ಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಬಿ.ಎಫ್. ಅರವಟಗಿ ನೋಡಲ್ ಅಧಿಕಾರಿಗಳು, ಡಯಟ್ ಗದಗ ಮೊಬೈಲ್ ಸಮಖ್ಯೆ 948217932 ಸಂಪರ್ಕಿಸಬಹುದಾಗಿದೆ.

## ಶಿಶಿಕ್ಷು ತರಬೇತಿಗೆ ನೇರ ಸಂದರ್ಶನ

**ಕಾರವಾರ:** ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಕೇಂದ್ರ ಕಛೇರಿ ಹುಬ್ಬಳ್ಳಿಯಲ್ಲಿ ITI COPA (Computer Operator and Programing Assistant) ವಿದ್ಯಾರ್ಹತೆ ಹೊಂದಿದ ಶಿಶಿಕ್ಷುದಾರರನ್ನು ತರಬೇತಿಗೆ ನಿಯೋಜಿಸಿಕೊಳ್ಳಲಾಗುತ್ತಿದ್ದು, ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ವಾ.ಕ.ರ.ಸಾ.ಸಂಸ್ಥೆ, ಕೇಂದ್ರ ಕಚೇರಿ, ಹುಬ್ಬಳ್ಳಿಯಲ್ಲಿ ಅ.17 ರಂದು ಬೆಳಗ್ಗೆ 11 ಗಂಟೆಗೆ ಕಚೇರಿಯ ವೇಳೆಯಲ್ಲಿ ನೇರ ಸಂದರ್ಶನಕ್ಕೆ (Walk in interview) ಆಸಕ್ತ ಅಭ್ಯರ್ಥಿಗಳು ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ವೆಬ್‌ಸೈಟ್ ವಿಳಾಸ www.nwkrtc.karnataka.gov.in ನ್ನು ಸಂಪರ್ಕಿಸುವಂತೆ ಸಂಸ್ಥೆಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರವಾರ: ವಿದ್ಯುತ್ ವ್ಯತ್ಯಯ

**ಕಾರವಾರ:** ಕಾರವಾರ ಉಪವಿಭಾಗದ ವ್ಯಾಪ್ತಿಯಲ್ಲಿ ವಿದ್ಯುತ್ ಪರಿವರ್ತಕ ಅಳವಡಿಸುವ ಕಾಮಗಾರಿ ಕೆಲಸ ಇರುವುದರಿಂದ ಸದಾಶಿವಗಡ ಫೀಡರಿನ ದೇವವಾಡ, ಮಾಲ್ದಾರವಾಡಾ, ಟೋಲನಾಕಾ, ಸಿಬರ್ಡ ಕಾಲೋನಿ, ದೇವಭಾಗ ಪ್ರದೇಶಗಳಲ್ಲಿ ಅ.10 ರಂದು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 3.30 ಗಂಟೆಯವರೆಗೆ ಕಾರವಾರ ತಾಲೂಕಿನಾದ್ಯಂತ ವಿದ್ಯುತ್ ವ್ಯತ್ಯಯವಾಗಲಿದೆ ಗ್ರಾಹಕರು ಸಹಕರಿಸುವಂತೆ ವಿದ್ಯುತ್ ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಕಿತ್ತೂರು ಕರ್ನಾಟಕದ ವಿಭಾಗದ ಅಭಿವೃದ್ಧಿ ಯೋಜನೆಗಳ ಕರಡು ಪ್ರತಿ ತಯಾರಿಕೆ ಪ್ರಗತಿ ಪರಿಶೀಲನೆ ಸಭೆ**

# ವಿಕೇಂದ್ರೀಕರಣ ವ್ಯವಸ್ಥೆ ಸಮರ್ಪಕವಾಗಿ ಅನುಷ್ಠಾನವಾಗಲಿ

**ಗದಗ:** ರಾಜ್ಯ ಸರ್ಕಾರದ ಮಹತ್ವದ ವಿಕೇಂದ್ರೀಕರಣ ಯೋಜನೆ ಅನುಷ್ಠಾನದ ಭಾಗವಾಗಿ ಕಿತ್ತೂರು ಕರ್ನಾಟಕದ ಎಲ್ಲ ಜಿಲ್ಲೆಗಳ 2026–27 ನೇ ಸಾಲಿನ ಅಭಿವೃದ್ಧಿ ಯೋಜನೆಗಳ ಕರಡು ಪ್ರತಿ ತಯಾರಿಕೆ ಪ್ರಗತಿ ಪರಿಶೀಲನೆ ಸಭೆ ಬುಧವಾರ ಗದಗ ನಗರದ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಮಚಾಯತ್ ರಾಜ್ ವಿವಿಯಲ್ಲಿ ಜರುಗಿತು.



ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಮುಂಬರುವ ಸಾಲಿನ ಅಭಿವೃದ್ಧಿ ಯೋಜನೆಗಳನ್ನು ವಾರ್ಡ ವಾರು, ಗ್ರಾಮ ವಾರು, ಗ್ರಾಪಂ, ತಾಲ್ಲೂಕು, ಜಿಪಂ ಹಂತದಲ್ಕಿ ಸಭೆ ನಡೆಸಿ ಕರಡು ಪ್ರತಿಗಳನ್ನು ತಯಾರಿಸಿ ಜಿಲ್ಲಾಡಳಿತ ಪಡೆದಿದೆ. ಇದೇ ವರದಿಗಳ ಪ್ರಗತಿ ಪರಿಶೀಲನೆ ಸಭೆ ನಡೆದು ಸಾದಕ ಬಾಧಕ ಕುರಿತು ಚರ್ಚೆ ಜರುಗಿತು.

ರಾಜ್ಯ ನೀತಿ ಮತ್ತು ಯೋಜನೆ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಾರ್ಚ ತಿಂಗಳಲ್ಲಿ ಬಜೆಟ್ ಮಂಡನೆ ಆಗುತ್ತದೆ. ಅದಕ್ಕೆ ಪೂರ್ವದಲ್ಲಿ ನವೆಂಬರ್ ಒಳಗಾಗಿ ಗ್ರಾಪಂ, ವಾರ್ಡ ಯೋಜನೆಗಳ ಕರಡು ಪ್ರತಿಗಳಿಗೆ ಅನುಮೋದನೆ ಪಡೆಯಬೇಕು ಎಂದು ಮುಖ್ಯಮಂತ್ರಿಗಳು ನಿರ್ದೇಶನ ನೀಡಿದ್ದರು. ಆದರೆ, ಇನ್ನೂ ವರೆಗೂ ಸಮರ್ಪಕವಾಗಿ ಅನುಷ್ಠಾನಗೊಂಡಿಲ್ಲ. ಇದಕ್ಕೆ ಸರ್ಕಾರಿ, ರಾಜಕಾರಣ, ಆಡಳಿತ ವ್ಯವಸ್ಥೆಯೇ ಕಾರಣವೆಂದರು.

ವಿಕೇಂದ್ರೀಕರಣ ವ್ಯವಸ್ಥೆಯೂ ಸಮರ್ಪಕವಾಗಿ ರಾಜ್ಯದಲ್ಲಿ ಅನುಷ್ಠಾನಗೊಂಡಿಲ್ಲ. ಕೇಂದ್ರೀಕರಣ ವ್ಯವಸ್ಥೆಯಿಂದ ಸರ್ವಾಧಿಕಾರತ್ವ ಅಧಿಕಗೊಳ್ಳುತ್ತದೆ. ಕೇಂದ್ರೀಕರಣ ವ್ಯವಸ್ಥೆಯಿಂದ ಗ್ರಾಮೀಣ ಮತ್ತು ನಗರದ ನಡುವೆ ಕಂದಕ ಸೃಷ್ಟಿ ಆಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಜಿಲ್ಲಾ ಯೋಜನಾ ಸಮಿತಿಯು ಅ.10 ರ ಒಳಗಾಗಿ ವಾರ್ಡವಾರು, ತಾಪಂ, ಜಿಪಂನಲ್ಲಿ ಸಭೆ ನಡೆಸಿ ಯೋಜನೆಗಳ ಕುರುಡು ಪ್ರತಿಗಳನ್ನು ವಿಕೇಂದ್ರೀಕರಣ ಸಮಿತಿಗೆ ಸಲ್ಲಿಕೆ ಮಾಡಬೇಕು ಎಂದು ಸಿಎಂ ಸಿದ್ದರಾಮಯ್ಯ ನಿರ್ದೇಶನ ನೀಡಿದ್ದರು. ಕೇವಲ ಇನ್ನೂ ಎರಡು ದಿನ ಬಾಕಿ ಇರುವುದರಿಂದ ಚಮತ್ಕಾರ ಮಾಡಲು ಸಾಧ್ಯವಿಲ್ಲ. ಇನ್ನೂ 15 ದಿನಗಳ ಒಳಗಾಗಿ ವಾರ್ಡವಾರು, ತಾಪಂ, ಜಿಪಂಗಳಿಂದ ಅಭಿವೃದ್ಧಿ ಯೋಜನೆ ಗಳ ಕುರಿತು ಕರಡು ಪ್ರತಿ ಪಡೆದು ಸಭೆ ನಡೆಸಿ ಜಿಲ್ಲಾಡಳಿತ ಮತ್ತು ಸರ್ಕಾರಕ್ಕೆ ಸಲ್ಲಿಡಬೇಕು. ಮುಂಬರುವ ಬಜೆಟ್ ನಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಅನುದಾನ ಮೀಸಲೀಡಲು ಸಾಧ್ಯವಾಗುತ್ತದೆ ಎಂದು ಉಪಾಧ್ಯಕ್ಷ ಬಿ.ಆರ್. ಪಾಟೀಲ ಹೇಳಿದರು.

ಪ್ರದೇಶವಾರು ಗ್ರಾಮೀಣ ಭಾಗದ ಸಮಸ್ಯೆಗಳು ಬೇರೆ ಬೇರೆ ಆಗಿರುತ್ತವೆ. ಜಿಪಂ ಸಿಇಓಗಳು ಗ್ರಾಮೀಣ ಭಾಗದ ಅಭಿವೃದ್ಧಿ, ನೀರು ಸಂರಕ್ಷಣೆ, ಸಮುದಾಯದ ಅಭಿವೃದ್ಧಿಗೆ ಕನ್ನಡಿ ಆಗಿರುತ್ತಾರೆ. ಹಾಗಾಗಿ ಮುಂಬರುವ 15 ದಿನಗಳ ಒಳಗಾಗಿ ತಮ್ಮ ವ್ಯಾಪ್ತಿಯ ಶಾಸಕರು, ಸಚಿವರನ್ನು ಸಂಪರ್ಕಿಸಿ ಯೋಜನೆ ಕರಡು ಪ್ರತಿಗಳನ್ನು ಸಿದ್ಧಪಡಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ರಾಜ್ಯ ವಿಕೇಂದ್ರೀಕರಣ ಮತ್ತು ಯೋಜನೆ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಮಾತನಾಡಿ, ಮೊದಲು ಮಂತ್ರಿಗಳು ಹೇಳಿದಂತೆ ಸರ್ಕಾರ ನಡೆಯುತ್ತಿತ್ತು. ರಾಮಕೃಷ್ಣ ಹೆಗಡೆ ಅವರ ಕಾಲದಲ್ಲಿ ಶಾಸಕರು ಹೇಳಿದಂತೆ ನಡೆಯುತ್ತಿತ್ತು. ಈಗ ಜನರಿಂದ ಸರ್ಕಾರ ನಡೆಯುವಂತೆ ಯೋಜನೆಗಳು ಸಿದ್ಧಗೊಳ್ಳಬೇಕು ಎಂದರು.

ಯುಪಿಎಸ್ಸಿ ಅಧಿಕಾರಿಗಳು ಭಾಗಶಃ ಗ್ರಾಮೀಣ ಭಾಗದಿಂದ ಬಂದವರಲ್ಲ. ಬೆರಳೆಣಿಕೆಯಷ್ಟು ಅಧಿಕಾರಿಗಳು ಗ್ರಾಮೀಣ ಭಾಗದಿಂದ ಬಂದವರು. ಆದರೆ ಗ್ರಾಮೀಣ ಭಾಗದ ಅಭಿವೃದ್ಧಿ ಯೋಜನೆ ರೂಪಿಸುವಲ್ಲಿ ಕಾರಣೀಕರ್ತರು ನೀವುಗಳೇ ಆಗಿರುತ್ತೀರಿ. ಅಭಿವೃದ್ಧಿ ವಿಚಾರದಲ್ಲಿ ನಿಮ್ಮ ಬುದ್ಧಿವಂತಿಕೆ ಕೆಲಸ ಮಾಡಲಿ ಎಂದು ಡಿ.ಆರ್. ಪಾಟೀಲ ಹೇಳಿದರು.

ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ ಚೌದರಿ ಪ್ರಾಸ್ತಾವಿಕ ಮಾತನಾಡಿ, ಪಂಚಾಯತ್ ರಾಜ್ ಇಲಾಖೆ ಕಾನೂನಿನ ಪ್ರಕಾರ ವಿಕೇಂದ್ರೀಕರಣ ಅನುಷ್ಠಾನ ಪರಿಣಾಮಕಾರಿ ಆಗಬೇಕಿದೆ ಎಂದರು.

ಮೊದಲು ಮೇಲಿನ ಹಂತದಿಂದ (ಜಿಲ್ಲಾಡಳಿತ) ಕರಡು ಯೋಜನೆ ಸಿದ್ದಗೊಂಡು ಕೆಳಗಿನ ಹಂತದಲ್ಲಿ(ಗ್ರಾಪಂ, ವಾರ್ಡ) ಯೋಜನೆ ಜಾರಿ ಆಗುತ್ತಿತ್ತು. ಆದರೆ ಈಗ, ಕೆಳಗಿನ ಹಂತದಿಂದ ಕರಡು ಯೋಜನೆ ಸಿದ್ದಗೊಂಡು ಮೇಲಿನ ಹಂತಕ್ಕೆ ಅನುಮೋದನೆಗಾಗಿ ಕಳುಹಿಸಲಾಗಿತ್ತಿದೆ. ಮುಂದಿನ ಆರ್ಥಿಕ ವರ್ಷದ ಅಭಿವೃದ್ಧಿ ಯೋಜನೆಗಳಿಗಾಗಿ ನಿಗಧಿತ ಅವಧಿ ಒಳಗಾಗಿ ಯೋಜನೆಗಳಿಗೆ ಅನುಮೋದನೆ ಸಿಗಬೇಕಿದೆ.

ಇದರಂತೆ ಐದು ವರ್ಷದ ಯೋಜನೆಗಳು ತಯಾರಿ ಅನುಮೋದನೆ ಪಡೆಯಬೇಕು. ರಾಜ್ಯ ಮತ್ತು ಜಿಲ್ಲಾ ಹಣಕಾಸು ಖಾತೆಗಳಲ್ಲಿ ಇರುವ ಆರ್ಥಿಕ ಸಂಪನ್ಮೂಲಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕಿದೆ. ಜತೆಗೆ ಕೋವಿಡ್ ನಂತರ ಸ್ಥಗಿತಗೊಂಡಿದ್ದ ಮಾನವ ಅಭಿವೃದ್ಧಿ ಸೂಚ್ಯಂಕ ಯೋಜನೆಯನ್ನು ಈಗ ಕೈಗೆತ್ತಿಕೊಳ್ಳಲಾಗಿದೆ ಎಂದರು.

ಹಿರಿಯ ನಿರ್ದೇಶಕ ಹಾಗೂ ಪದನಿಮಿತ್ಯ ಸರದಕಾರದ ಕಾರ್ಯದರ್ಶಿ ಬಸವರಾಜ ಎಸ್ ಅವರು ಯೋಜನೆ ರೂಪಿಸುವಲ್ಲಿ ವಹಿಸಬೇಕಾದ ಅಂಶಗಳ ಬಗ್ಗೆ ತಿಳಿಸಿದರು.ಕಾರ್ಯಕ್ರಮದಲ್ಲಿ ಗ್ರಾಪಂ, ತಾಪಂ, ವಾರ್ಡ ಕುರಿತು ಸಭೆ ನಡೆಸದ ಕುರಿತು ಚರ್ಚೆ ಜರುಗಿತು.

ಈ ವೇಳೆ ಜಿಪಂ ಬೆಳಗಾವಿ ಸಿಇಓ ರಾಹುಲ್ ಶಿಂದೆ, ವಿವಿ ಕುಲಪತಿ ಸುರೇಶ ನಾಡಗೌಡರ, ಬಾಗಲಕೋಟೆ ಸಿಇಓ ಶಶೀಧರ ಕುರೇರ, ಹಾವೇರಿ ಸಿಇಓ ರುಚಿ ಬಿಂದಾಲ, ಧಾರವಾಡ ಸಿಇಓ ಭುವನೇಶ ಪಾಟೀಲ, ವಿಜಯಪುರ ಸಿಇಓ ರಿಷಿ ಆನಂದ, ಉತ್ತರ ಕನ್ನಡ ಸಿಇಓ ದಿಲೀಪ್ ಶಶೀ, ಯೋಜನಾ ಇಲಾಖೆ ಜಂಟಿ ಕಾರ್ಯದರ್ಶಿ ಬಿ. ಜಾನಕಿರಾಂ, ಮಾಜಿ ಜಿಪಂ ಅಧ್ಯಕ್ಷ ವಾಸಣ್ಣ ಕುರಡಗಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಇತರರು ಇದ್ದರು.

**ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘ**

# ಅಧ್ಯಕ್ಷ ಉಪಾಧ್ಯಕ್ಷ ಅವಿರೋಧ ಆಯ್ಕೆ



**ಹುಕ್ಕೇರಿ:** ರಾಜ್ಯದಲ್ಲಿ ತೀವ್ರ ಕೂತಹಲ ಕೆರಳಿಸಿದ್ದ ಸಹಕಾರ ತತ್ವದಡಿ ಕಾರ್ಯನಿರ್ವಹಿಸುತ್ತಿರುವ ದೇಶದ ಏಕೈಕ್ ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದ ಆಡಳಿತ ಮಂಡಳಿಯ ಅಧ್ಯಕ್ಷರಾಗಿ ಮಹಾವೀರ ನಿಲಜಗಿ. ಉಪಾಧ್ಯಕ್ಷರಾಗಿ ಅಜೀತ ಮುನ್ನೋಳಿ ಅವಿರೋಧವಾಗಿ ಆಯ್ಕೆಯಾದರು.

ಬುಧವಾರ ಸಂಘದ ಸಭಾ ಭವನದಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಕ್ಕೆ ತಲಾ ಒಂದೊಂದು ನಾಮಪತ್ರ ಸಲ್ಲಿಕೆಯಾಗಿದ್ದರಿಂದ ಅವಿರೋಧ ಆಯ್ಕೆ ನಡೆಯಿತು.

ಚುನಾವಣಾಧಿಕಾರಿ ಹಾಗೂ ಚಿಕ್ಕೋಡಿ ಉಪವಿಭಾಗಧಿಕಾರಿ ಸುಬಾಷ ಸಂಪಗಾವಿ, ವ್ಯವಸ್ಥಾಪಕ ನಿರ್ದೇಶಕ ರವೀಂದ್ರ ಪಾಟೀಲ, ಸಹಾಯಕ ಚುನಾವಣಾಧಿಕಾರಿ ಗಿರೀಶ ಹುಲಕುಂದ, ರವಿ ಯಾವಗಲ್. ಕಂದಾಯ ನಿರೀಕ್ಷಕ ಎ.ಎಸ್, ಪಾಟೀಲ, ಮಲ್ಲಿಕಾರ್ಜುನ ಸಾರಾಪುರೆ, ಸಂತೋಷ ನಾಯಿಕ, ಸ್ಥಾನಿಕ ಅಭಿಯಂತರಾದ ನೇಮಿನಾಥ ಖೇಮಲಾಪುರೆ, ಉದಯ ಮಗದುಮ್ಮ ದುರದುಂಡಿ ನಾಯಿಕ, ಬಸವರಾಜ ವಾಜಂತ್ರಿ ಮತ್ತಿತರರು ಉಪಸ್ಥಿತರಿದ್ದರು.

# ರಾಮಾಯಣವು ಹಿಂದುಗಳ ಅತ್ಯಂತ ಪವಿತ್ರ ಗ್ರಂಥ

**ಗೋಕಾಕ:** ಮಹರ್ಷಿ ವಾಲ್ಮೀಕಿಯವರು ಬರೆದ ರಾಮಾಯಣವು ಹಿಂದುಗಳ ಅತ್ಯಂತ ಪವಿತ್ರ ಗ್ರಂಥವಾಗಿದೆ. ಮಹರ್ಷಿ ವಾಲ್ಮೀಕಿಯವರ ಜ್ಞಾನದ ಶಕ್ತಿ ಅಪಾರ. ವಾಲ್ಮೀಕಿ ಸಂಸ್ಕೃತ ಸಾಹಿತ್ಯ ಮೊದಲ ಹಾಗೂ ಆದಿ ಕವಿಯಾಗಿ ಪೂಜಿಸಲಾಗುತ್ತದೆ ಎಂದು ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ಅವರು, ನಗರದ ತಮ್ಮ ಕಚೇರಿಯಲ್ಲಿ ಮಂಗಳವಾರದಂದು ಬಿಜೆಪಿ ನಗರ ಹಾಗೂ ಗ್ರಾಮೀಣ ಮಂಡಲದಿಂದ ಹಮ್ಮಿಕೊಂಡ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಶ್ರೀ ರಾಮನ ಧ್ಯಾನದಲ್ಲಿ ಮಗ್ನನಾದ ವಾಲ್ಮೀಕಿ ಒಬ್ಬ ಶ್ರೇಷ್ಠ ಮಹರ್ಷಿಯಾಗಿ ವಿಶ್ವಕ್ಕೆ ಹೆಸರುವಾಸಿಯಾಗಿದ್ದಾರೆ. ಮಹರ್ಷಿ ವಾಲ್ಮೀಕಿ ಕೊಡುಗೆ ಅಪಾರವಾಗಿದ್ದು ಅಂತಹ ಮಹಾತ್ಮರ ತತ್ವ ಆದರ್ಶ ಮೌಲ್ಯಗಳನ್ನು ಅಳವಡಿಸಿಕೊಂಡಲ್ಲಿ ಬದುಕು ಸ್ವಾರ್ಥಕ ಎಂದರು. ಬಿಜೆಪಿ ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮಣ್ಣವರ, ಜಿಪಂ ಮಾಜಿ ಸದಸ್ಯರಾದ ಟಿ ಆರ್ ಕಾಗಲ, ಎಮ್ ಎಲ್ ತೋಳಿನವರ, ಮುಖಂಡರಾದ ಶಾಮಾನಂದ ಪೂಜೇರಿ, ಲಕ್ಷ್ಮಣ ತಪಶಿ, ಬಸವರಾಜ ಹಿರೇಮಠ, ಅಶೋಕ ಗೋಣಿ, ಯಲ್ಲಪ್ಪ ನಂದಿ, ಶಕೀಲ ಧಾರವಾಡಕರ, ರಾಜೇಶ್ವರಿ ಒಡೆಯರ, ಶ್ರೀರಂಗ ನಾಯ್ಕ, ಲಕ್ಕಪ್ಪ ತಹಶೀಲದಾರ, ಅಮೃತ ದಪ್ಪಿನವರ, ರವಿ ಮಡ್ಡೆಪ್ಪಗೋಳ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಇದ್ದರು.



# ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ



**ರಾಯಬಾಗ:** ಹುತ್ತ(ವಾಲ್ಮಿಕ) ದಿಂದ ಹೊರ ಬಂದು ಸಂಸ್ಕೃತ ಸಾಹಿತ್ಯದ ಮೂಲ ಕವಿಯಾದ ವಾಲ್ಮೀಕಿ ಮಹರ್ಷಿಗಳು ಕೇವಲ ಒಬ್ಬ ಕವಿಯಲ್ಲ ಸಮಸ್ತ ಸಮಾಜಕ್ಕೆ ಜೀವನದ ಮೌಲ್ಯಗಳನ್ನು ಕಲಿಸಿದ ಆದಿಕವಿ ಎಂದು ಪ.ಪಂ.ಅಧ್ಯಕ್ಷ ಅಶೋಕ ಅಂಗಡಿ ಹೇಳಿದರು.

ಪಟ್ಟಣದ ಅಭಾಜಿ ವೃತ್ತದಲ್ಲಿ ತಳವಾರ ಸಮಾಜದ ವತಿಯಿಂದ ಹಮ್ಮಿಕೊಂಡ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ ಹಿಂದುಳಿದ ವರ್ಗದವರಾದ ತಳವಾರ ಸಮಾಜದವರು ಆರ್ಥಿಕ, ಶೈಕ್ಷಣಿಕ, ಸಾಮಾಜಿಕವಾಗಿ ಪ್ರಗತಿ ಹೊಂದಲು ಸರಕಾರಸಿಂದ ಸಿಗುವ ಸೌಲಭ್ಯಗಳನ್ನು ಪಡೆದು ಮುಂದೆ ಬರಬೇಕೆಂದರು. ಉಪ ತಹಶೀಲ್ದಾರ ಪರಮಾನಂದ ಮಂಗಸೂಳಿ ವಾಲ್ಮೀಕಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿ ಒಂದು ಸಮಾಜ ಮುಂದೆ ಬರಬೇಕಾದರೆ ಯುವಕರ ಪಾತ್ರ ತುಂಬಾ ಮುಖ್ಯವಾಗಿದೆ. ಸಮಾಜ ಬಾಂದವರು ಒಗ್ಗಟ್ಟಾಗಿ ಸಮಾಜ ಕಟ್ಟುವ ಕೆಲಸ ಮಾಡಬೇಕಾಗಿದೆ ಎಂದರು. ಇದೇ ಸಂದರ್ಭದಲ್ಲಿ ತಳವಾರ ಸಂಘದ ವತಿಯಿಂದ 10 ಜನ ಹಿರಿಯರನ್ನು ಸನ್ಮಾನಿಸಲಾಯಿತು ಕಾರ್ಯಕ್ರಮದಲ್ಲಿ ತಳವಾರ ಸಂಘದ ಅಧ್ಯಕ್ಷ ಮಲ್ಲು ಕೋಳಿ, ಪ.ಪಂ. ಸದಸ್ಯ ರವಿ ತಳವಾರ, ಯಲ್ಲಪ್ಪ ತಳವಾರ, ಲಕ್ಷ್ಮಣ ತಳವಾರ, ಬಾಬು ಕೋಳಿ, ಶಿವಾನಂದ ಹಲಗಬಾಳಿ, ಸಿದ್ದಪ್ಪ ಪೂಜೇರಿ, ಶಿವು ತಳವಾರ, ವಿನಾಯಕ ತಳವಾರ ಸೇರಿದಂತೆ ತಳವಾರ ಸಮಾಜದ ಬಾಂಧವರು ಉಪಸ್ಥಿತರಿದ್ದರು.

**ಶ್ರೀಜಲಾಶಂಕರ ದೇವರ ಭಕ್ತಿಗೀತೆ ಚಿತ್ರೀಕರಣಕ್ಕೆ ಚಾಲನೆ**

# ಶ್ರೀಕ್ಷೇತ್ರದ ಸಂಸ್ಕೃತಿ-ಪರಂಪರೆಯ ಹೆಗ್ಗುರುತು ಅನಾವರಣ ಶ್ಲಾಘನೀಯ

**ಗದಗ:** ಯುವ ಜನಾಂಗಕ್ಕೆ ನಮ್ಮ ಸಂಸ್ಕೃತಿ, ಪರಂಪರೆಯನ್ನು ಉಳಿಸಿ, ಬೆಳೆಸುತ್ತಿರುವುದು ಸಮಾಜವನ್ನು ಸನ್ಮಾರ್ಗದತ್ತ ಕೊಂಡೊಯ್ಯಲು ಸಹಕಾರಿಯಾಗುತ್ತದೆ ಎಂದು ಶಿಕ್ಷಕರಾದ ಜಗದೇವಯ್ಯಸ್ವಾಮಿ ನರೇಗಲ್‌ಮಠ ಅವರು ಹೇಳಿದರು.



ತಾಲೂಕಿನ ನಾಗಾವಿ ಗ್ರಾಮದ ಸೋಮೇಶ್ ಹಿರೇಮಠ ಪ್ರತಿಷ್ಠಾನ ವತಿಯಿಂದ ನಮೋ ಸೋಮೇಶ್ವರ ಸಮುದಾಯ ಭವನ ನಿರ್ಮಾಣ ಹಂತದ ಕಟ್ಟಡದಲ್ಲಿ ಜರುಗಿದ ಮಹರ್ಷಿ ವಾಲ್ಮೀಕಿ ಜಯಂತಿ ಶ್ರೀವಾಲ್ಮೀಕಿ ಮಹರ್ಷಿ ಜಯಂತಿ ಹಾಗೂ ನಾಗಾವಿಯ ಜಲಾಶಂಕರ ದೇವರ ಭಕ್ತಿಗೀತೆಯನ್ನು ನಾಡಿಗೆ ಅರ್ಪಿಸಲು ಸಂಕಲ್ಪಿಸಿ, ಭಕ್ತಿಗೀತೆಯ ವಿಡಿಯೋ ಚಿತ್ರೀಕರಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಸವಣ್ಣೆಯ್ಯ ಹಿರೇಮಠ ಅವರ ಸಾರಥ್ಯದಲ್ಲಿ ಗದಗ ಜಿಲ್ಲೆಯಲ್ಲಿ ನಾಗಾವಿನಾನಾ ಎಂಬ ಯುಟ್ಯೂಬ್ ಚಾನಲ್ ಆರಂಭಿಸಿ, ತಮ್ಮ ಶಕ್ತಿಮೀರಿ ಸಮಾಜಮುಖಿ ಕಾರ್ಯಗಳನ್ನು ಮಾಡುವ ಮೂಲಕ, ಲಕ್ಷಾಂತರ ವೀಕ್ಷಕರ ಗಮನ ಸೆಳೆಯುತ್ತಿದ್ದಾರೆ ಎಂದು ಹೇಳಿದರು. ನಾಗಾವಿ ಮತ್ತು ಬೆಳದಡಿ ಗ್ರಾಮದ ಬಳಿಯ ಸುಕ್ಷೇತ್ರ ಜಲಾಶಂಕರ ದೇವಸ್ಥಾನ ಕುರಿತ ಹಾಡು ಹೊರತರುತ್ತಿರುವುದು ಶ್ಲಾಘನೀಯ. ಸಮಾಜಕ್ಕೆ ಸದುಪಯೋಗಿ ಭಕ್ತಿ ಹಾಗೂ ಸಂಗೀತದ ಮೂಲಕ ಜಲಾಶಂಕರನ ಸೇವೆ ಸಲ್ಲಿಸುತ್ತಿರುವುದನ್ನು ಅವರು ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿದ್ದ ಗದಗ ತಾಪಂ ಮಾಜಿ ಅಧ್ಯಕ್ಷರಾದ ಬಸವಣ್ಣೆಪ್ಪ ಚಿಂಚಲಿ ಅವರು ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು ಅರಣ್ಯದಲ್ಲಿ ಜನರನ್ನು ಸುಲಿಗೆ ಮಾಡುತ್ತಿದ್ದ ರತ್ನಾಕರನಾಗಿದ್ದರು. ನಮ್ಮ ಪಾಪ ಕರ್ಮಗಳನ್ನು ನಾವೇ ಅನುಭವಿಸಬೇಕಾಗುವುದು. ಆ ಕರ್ಮದ ಫಲವನ್ನು ನಮ್ಮ ಕುಟುಂಬದವರೇ ಹಂಚಿಕೊಳ್ಳುವುದಿಲ್ಲ ಎಂದು ನಾರದ ಮಹರ್ಷಿಗಳು ರತ್ನಾಕರನಿಗೆ ದರ್ಶನ ನೀಡಿ ಮನವರಿಕೆ ಮಾಡಿಕೊಟ್ಟ ಬಳಿಕ, ಬೇಡನಾಗಿದ್ದ ರತ್ನಾಕರನು ವಿಶ್ವ ಪ್ರಸಿದ್ಧ ರಾಮಾಯಣ ಗ್ರಂಥವನ್ನು ಬರೆಯುವಂತಾದನು ಎಂದು ಹೇಳಿದರು.

ಗ್ರಾಮ ಪಂಚಾಯತಿ ಸದಸ್ಯರಾದ ಅಲ್ಲಾಸಾಬ ಪೀರಖಾನವರ ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ನಾಗಾವಿ ಗಂಗಾಧರೇಶ್ವರ ಮಠದ ವೇಮೂ ಮೃತ್ಯುಂಜಯ ಸ್ವಾಮೀಜಿ ಹಿರೇಮಠ ಸಮ್ಮುಖ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಚನಬಸಪ್ಪ ಮಡಿವಾಳರ, ಚನ್ನಪ್ಪ ಅಕ್ಕಿ, ಉಳವಪ್ಪ ಮಡಿವಾಳರ, ಶರಣಪ್ಪ ಕಮಡೊಳ್ಳಿ, ಪ್ರಭುದೇವಗೌಡ ಪಾಟೀಲ, ಯಮನೂರಸಾಬ ನದಾಫ್, ಶಾರಮ್ಮ ಪಾಟೀಲ, ಶಂಕ್ರಮ್ಮ ಹಿರೇಮಠ, ವಿಶಾಲಾಕ್ಷಿ ಪಾಟೀಲ, ಕಾವ್ಯಾ ಪಾಟೀಲ, ನಿವೇದಿತಾ ಪಾಟೀಲ, ಅನಿತ ಬೆನಕನಾಳಮಠ ಮುಂತಾದವರು ಪಾಲ್ಗೊಂಡಿದ್ದರು.

# ಶೇಂಗಾ ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ

**ಗದಗ:** 2025–26 ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾ ಹುಟ್ಟುವಳಿಯನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.



ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಇತ್ತೀಚೆಗೆ 2025–26 ನೇ ಸಾಲಿನ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಶೇಂಗಾ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ ( ಮೂರು) 03 ಕ್ವಿಂಟಲ್‌ನಂತೆ ಗರಿಷ್ಟ 15 ( ಹದಿನೈದು) ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾ ಖರೀದಿಸಲು ಹಾಗೂ ಶೇಂಗಾ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಶೇಂಗಾ ಉತ್ಪನ್ನವನ್ನು ಖರೀದಿಸಿದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗವಾಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದರು.

ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಶೇಂಗಾ ಖರೀದಿ ಪ್ರಕ್ರಿಯೆಯಲ್ಲಿ ಎಫ್.ಎ.ಕ್ಯೂ ಗುಣಮಟ್ಟ ಪರಿಶೀಲನೆಗಾಗಿ ಲಭ್ಯವಿರುವ ಅಧಿಕಾರಿ / ಸಿಬ್ಬಂದಿಗಳನ್ನು ಬಳಸಿಕೊಳ್ಳುವುದು. ತರಬೇತಿ ಅವಶ್ಯವಿದ್ದಲ್ಲಿ ಅಂತಹ ಸಿಬ್ಬಂದಿಗಳಿಗೆ ಎಫ್.ಎ.ಕ್ಯೂ ಗ್ರೇಡಿಂಗ್ ತರಬೇತಿ ನೀಡಲು ಸಂಬಂಧಪಟ್ಟ ಖರೀದಿ ಸಂಸ್ಥೆಗಳು ಕ್ರಮ ವಹಿಸಬೇಕು. ಸರ್ಕಾರ ಬೆಂಬಲ ಬೆಲೆಯಲ್ಲಿ ಶೇಂಗಾ ಹುಟ್ಟುವಳಿಯ ಖರೀದಿ ಕುರಿತು ರೈತರು ಸದುಪಯೋಗ ಪಡೆದುಕೊಳ್ಳಲು ರೈತರಿಗೆ ತಿಳುವಳಿಕೆ ನೀಡಬೇಕು.ಹೆಚ್ಚಿನ ಸಂಖ್ಯೆಯಲ್ಲಿ ಗದಗ ಜಿಲ್ಲೆಯ ರೈತರು ಯೋಜನೆಯ ಲಾಭ ಪಡೆಯುಲು ಅನುಕೂಳವಾಗುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕಿ ಸುಧಾ ಬಂಡಿ ಮಾತನಾಡಿ ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾ ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ರೂ. 7263 ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸದರಿ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರಗೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸರ್ಕಾರದ ಆದೇಶದನುಸಾರ ನ್ಯಾಫೆಡ್ ಸಂಸ್ಥೆ ಹಾಗೂ ಎನ್.ಸಿ.ಸಿ.ಎಫ್. ಸಂಸ್ಥೆಯನ್ನು ಕೇಂದ್ರದ ಖರೀದಿ ಏಜೆನ್ಸಿಯಾಗಿ ಹಾಗೂ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ (ಕೆಓಎಫ್) ಬೆಂಗಳೂರು ಇವರನ್ನು ರಾಜ್ಯ ಮಟ್ಟದ ಖರೀದಿ ಏಜೆನ್ಸಿಯನ್ನಾಗಿ ನೇಮಿಸಿದೆ ಎಂದು ಸಭೆಗೆ ವಿವರಿಸಿದರು.

ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಶೇಂಗಾ ಖರೀದಿ ಕೇಂದ್ರಗಳ ಸ್ಥಳ

**ಎಣ್ಣೆಬೀಜ ಬೆಳೆಗಾರರ ಸಹಕಾರ ಸಂಘಗಳು:** ಗದಗ ತಾಲೂಕಿನ ಬಳಗಾನೂರ, ಹೊಂಬಳ, ಮುಳಗುಂದ; ಶಿರಹಟ್ಟಿ ತಾಲೂಕಿನ ರಣತೂರ, ಶಿಗ್ಲಿ, ರೋಣ ತಾಲೂಕಿನ ಅಬ್ಬಿಗೇರಿ, ಗಜೇಂದ್ರಗಡ, ನರಗುಂದ ತಾಲೂಕಿನ ಕಣಕಿಕೊಪ್ಪ, ಮುಂಡರಗಿ ತಾಲೂಕಿನ ಬರದೂರು, ಕಲಕೇರಿ.

# ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ಕೆ ಸಹಕಾರ ನೀಡಲು ಮನವಿ

**ಧಾರವಾಡ:** ಭಾರತ ಚುನಾವಣಾ ಆಯೋಗವು ಶೀಘ್ರದಲ್ಲಿ ಆರಂಭಿಸಲಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಕ್ಕೆ ಮತಗಟ್ಟೆ ಮಟ್ಟದ ಅಧಿಕಾರಿಗಳು ಚುನಾವಣಾ ಆಯೋಗದ ನಿರ್ದೇಶನ ಮತ್ತು ನಿಯಮಗಳ ಅನುಸಾರ ತೊಡಗಿಕೊಳ್ಳಲಿದ್ದು, ಈ ಕಾರ್ಯಕ್ಕೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಸಹಕಾರ ನೀಡಬೇಕೆಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು.



ಅವರು ಇಂದು (ಅ.08) ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯದ ಕುರಿತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ ಜರುಗಿಸಿ, ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಭಾರತ ಚುನಾವಣಾ ಆಯೋಗವು ಕಾಲಕಾಲಕ್ಕೆ ಮತದಾರರ ಪಟ್ಟಿಯ ಪರಿಷ್ಕರಣೆ, ವಿಶೇಷ ಪರಿಷ್ಕರಣೆ ಮತ್ತು ವಿಶೇಷ ತೀವ್ರ ಪರಿಷ್ಕರಣೆ ಕಾರ್ಯವನ್ನು ಜರುಗಿಸಿ, ಮತದಾರರ ಪಟ್ಟಿಯಲ್ಲಿನ ಅನರ್ಹರ ಹೆಸರುಗಳನ್ನು ತೆಗೆಯುವ ಮತ್ತು ಅರ್ಹ ಮತದಾರರ ಹೆಸರುಗಳನ್ನು ಸೇರ್ಪಡೆ ಮಾಡಲಾಗುತ್ತದೆ. ಅದರಂತೆ ರಾಷ್ಟ್ರೀಯ ಚುನಾವಣಾ ಆಯೋಗವು ಪ್ರಸ್ತುತದಲ್ಲಿರುವ ಮತದಾರರ ಪಟ್ಟಿಯನ್ನು ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಕ್ರಮದ ಮೂಲಕ ಹೊಸ ಮತದಾರರ ಪಟ್ಟಿಯನ್ನು ತಯಾರಿಸಲು ಕ್ರಮವಹಿಸುತ್ತಿದೆ ಎಂದು ಅವರು ಹೇಳಿದರು.

ರಾಜ್ಯ ಶಾಸಕಾಂಗ ಮತ್ತು ಸಂಸತ್ತಿಗೆ ನಿಯತಕಾಲಿಕವಾಗಿ ಚುನಾವಣೆಗಳನ್ನು ನಡೆಸಲು ಮತದಾರರ ಪಟ್ಟಿಯನ್ನು ಸಿದ್ಧಪಡಿಸಲಾಗುತ್ತದೆ. ಹೊಸ ಮತದಾರರ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸಿದಾಗಲೆಲ್ಲಾ, ಹಿಂದಿನ ಮತದಾರರ ಪಟ್ಟಿಗಳು ನಿಷ್ಕ್ರಿಯವಾಗುತ್ತವೆ ಮತ್ತು ಹೊಸದು ಮಾತ್ರ ಜಾರಿಯಲ್ಲಿರುತ್ತದೆ. ಹಿಂದಿನ ಮತದಾರರ ಪಟ್ಟಿಯನ್ನು ಉಲ್ಲೇಖಕ್ಕಾಗಿ ಮಾತ್ರ ಬಳಸಲಾಗುತ್ತದೆ ಎಂದು ಅವರು ತಿಳಿಸಿದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಕ್ರಮದಲ್ಲಿ ಪ್ರತಿ ಮತಗಟ್ಟೆ ವ್ಯಾಪ್ತಿಯ ಮತದಾರರ ಪಟ್ಟಿಯನ್ನು ಮನೆಮನೆ ಭೇಟಿ ಮೂಲಕ ಮತಗಟ್ಟೆ ಮಟ್ಟದ ಅಧಿಕಾರಿಗಳು ಪರಿಷ್ಕರಿಸಲಿದ್ದಾರೆ.

ಈ ಕಾರ್ಯಕ್ಕೆ ರಾಜಕೀಯ ಪಕ್ಷಗಳು ಮತಗಟ್ಟೆ ಮಟ್ಟದಲ್ಲಿ ನೇಮಿಸುವ ಬಿಎಲ್‌ಎ ಗಳು ಸಹಕಾರ ನೀಡಬೇಕು. ಇದರಿಂದ ಮತ್ತಷ್ಟು ಪಾರದರ್ಶಕವಾಗಿ ಕಾರ್ಯವಾಗುತ್ತದೆ ಎಂದು ಅವರು ಹೇಳಿದರು. ಸಭೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಭಾರತೀಯ ಜನತಾ ಪಕ್ಷದ ಸಿದ್ದು ಕಲ್ಯಾಣಶೆಟ್ಟಿ, ನಾಗಪ್ಪ ಸುತಗಟ್ಟಿ, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪ್ರಕಾಶ ಹಳಿಯಾಳ, ಜನತಾದಳ (ಜಾ) ಮಹಾನಗರ ಅಧ್ಯಕ್ಷ ಗುರುರಾಜ ಹುಣಸಿಮರದ, ದೇವರಾಜ ಕಂಬಳಿ ಸೇರಿದಂತೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ಸಹಾಯಕ ಮತದಾರರ ನೋಂದಣಿ ಅಧಿಕಾರಿಗಳು, ತಹಶೀಲ್ದಾರರು ಭಾಗವಹಿಸಿದ್ದರು.

# ಮಹರ್ಷಿ ವಾಲ್ಮೀಕಿ ಅವರಂತೆ ಸ್ವಾಭಿಮಾನಿ ಬದುಕು ನಮ್ಮದಾಗಬೇಕು



**ಧಾರವಾಡ:** ಈ ದೇಶದ ವಾಲ್ಮೀಕಿ ಸಮುದಾಯ ವೀರ, ದೀರರಾಗಿದ್ದು, ಅನೇಕ ಕೋಟೆ, ನಾಡನ್ನು ಆಳಿದ ರಾಜ ವಂಶಜರು. ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಅವರು ನಮಗೆಲ್ಲ ಆದರ್ಶಪ್ರಾಯರು. ಅವರಂತೆ ಸ್ವಾಭಿಮಾನಿ ಬದುಕು ನಮ್ಮದಾಗಬೇಕು ಎಂದು ವಿಧಾನ ಪರಿಷತ್ ನೂತನ ಸದಸ್ಯರಾದ ಎಫ್.ಎಚ್. ಜಕ್ಕಪ್ಪನವರ ಅವರು ಹೇಳಿದರು.

ಅವರು ಮಂಗಳವಾರ ಮಧ್ಯಾಹ್ನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಸಮಾಜ ಕಲ್ಯಾಣ ಇಲಾಖೆ ಸಂಯುಕ್ತವಾಗಿ ಆಯೋಜಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಅವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿಯವರನ್ನು ನಾವು ಭಾವನಾತ್ಮಕವಾಗಿ ಕಟ್ಟಿಕೊಳ್ಳಬೇಕು. ವಾಲ್ಮೀಕಿಯನ್ನು ಕಳ್ಳ, ದರೋಡೆಕೋರ ಅನ್ನುವುದು ತಪ್ಪು. ಅವರ ರಾಮಾಯಣ ಮಹಾಕಾವ್ಯದ ಸಾಧನೆ ಇಡೀ ಜನಾಂಗಕ್ಕೆ ಪ್ರೇರಣೆ ಆಗಬೇಕು ಎಂದು ಅವರು ಹೇಳಿದರು.

ಮಹರ್ಷಿ ವಾಲ್ಮೀಕಿ ಓರ್ವ ಪ್ರಕಾಂಡ ಪಂಡಿತ. ರಾಮಾಯಣದಲ್ಲಿನ ಶ್ಲೋಕಗಳು, ಖಂಡಗಳು ವಾಲ್ಮೀಕಿಯವರ ಪಾಂಡಿತ್ಯವನ್ನು ತೋರಿಸಿದ್ದು, ವಿಶ್ವಮಟ್ಟದಲ್ಲಿ ಭಾರತದ ಘನತೆ, ಗೌರವವನ್ನು ಹೆಚ್ಚಿಸಿದೆ ಎಂದು ಅವರು ಹೇಳಿದರು.

ದೇಶದಲ್ಲಿ ಸುಮಾರು 18 ಕೋಟಿ ವಾಲ್ಮೀಕಿ ಸಮುದಾಯ ಇದೆ. ವಾಲ್ಮೀಕಿ ಸಮುದಾಯ, ತಳ ಸಮುದಾಯಗಳು ಆರ್ಥಿಕವಾಗಿ, ಸಾಮಾಜಿಕವಾಗಿ, ರಾಜಕೀಯವಾಗಿ, ಶೈಕ್ಷಣಿಕವಾಗಿ ಬೆಳೆದು ಬರಬೇಕು. ಈ ನಿಟ್ಟಿನಲ್ಲಿ ನಾವೆಲ್ಲರೂ ಜಾಗೃತರಾಗಬೇಕು ಎಂದು ವಿಧಾನ ಪರಿಷತ್ತ ಸದಸ್ಯ ಎಫ್.ಎಚ್.ಜಕ್ಕಪ್ಪನವರ ತಿಳಿಸಿದರು.

ಇಂದು, ಪ್ರತಿ ವರ್ಷ ಅಂದಾಜು ಎರಡು ಲಕ್ಷ ವಿದ್ಯಾರ್ಥಿಗಳು ಓದಿ, ಉತ್ತೀರ್ಣರಾಗುತ್ತಿದ್ದಾರೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ವಿದ್ಯಾವಂತರಾಗಬೇಕು, ಬುದ್ದಿವಂತರಾಗಬೇಕು. ಅಂದಾಗ ಮಾತ್ರ ಸಮಾಜ ಅಭಿವೃದ್ಧಿ ಆಗುತ್ತದೆ ಎಂದು ಅವರು ಹೇಳಿದರು.

ಮುಖಂಡರಾದ ಚಂದ್ರಶೇಖರ ಜುಟ್ಟಲ ಅವರು ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರನ್ನು ನಾವೆಲ್ಲರೂ ಸ್ವಾಭಿಮಾನದ ಪ್ರತೀಕವಾಗಿ ಸ್ವೀಕರಿಸಬೇಕು. ಅನಕ್ಷರಸ್ಥ ವಾಲ್ಮೀಕಿ ಇಡೀ ವಿಶ್ವಕ್ಕೆ ರಾಮಾಯಣ ಮಹಾಕಾವ್ಯ ನೀಡಿ, ಸರ್ವಧರ್ಮಿಯರಿಗೂ ಪೂಜ್ಯರಾಗಿದ್ದಾರೆ. ಮಹರ್ಷಿ ವಾಲ್ಮೀಕಿ ಅವರ ಜೀವನದ ಪಾಠವು ನಮ್ಮ ಬದುಕಿನ ಬದಲಾವಣೆಗೆ ನಾಂದಿ ಆಗಬೇಕು. ವಾಲ್ಮೀಕಿ ಅವರು ನೀಡಿರುವ ರಾಮಾಯಣ ಮತ್ತು ಡಾ.ಬಿ.ಆರ್.ಅಂಬೇಡ್ಕರ ಅವರು ನೀಡಿರುವ ಸಂವಿಧಾನವನ್ನು ನೆನೆದು, ನೆನಪಿಸಿಕೊಂಡು, ನಮ್ಮವರ ಸಾಧನೆಗೆ ನಾವು ಹೆಮ್ಮೆ ಪಡಬೇಕು ಎಂದು ಅವರು ಹೇಳಿದರು.

ವಾಲ್ಮೀಕಿ ಸಮಾಜದ ಜಿಲ್ಲಾ ಅಧ್ಯಕ್ಷ ಮೋಹನ ಗುಡಿಸಲಮನಿ ಅವರು ಮಾತನಾಡಿ, ಸಮಾಜಕ್ಕೆ ವಾಲ್ಮೀಕಿ ಸಮುದಾಯದ ಕೊಡುಗೆ ಮತ್ತು ಸಮಾಜದ ಮುಂದಿರುವ ಸವಾಲುಗಳ ಕುರಿತು ವಿವರಿಸಿದರು. ವಿದ್ಯಾರ್ಥಿ ಎಚ್.ಶ್ರೀನಿವಾಸ ಅವರು, ಮಹರ್ಷಿ ವಾಲ್ಮೀಕಿಯವರ ರಾಮಾಯಾಣದ ಕುರಿತು ವಿವರಿಸಿದರು.

ಕೆಸಿಡಿ ಕಾಲೇಜಿನ ಕನ್ನಡ ಉಪನ್ಯಾಸಕ ಡಾ.ಶರಣು ಮುಷ್ಠಿಗೇರಿ ಅವರು ಮಹರ್ಷಿ ವಾಲ್ಮೀಕಿಯವರ ಜೀವನ ಮತ್ತು ಬದುಕು ಹಾಗೂ ವಾಲ್ಮೀಕಿ ರಾಮಾಯಣ, ವಾಲ್ಮೀಕಿ ಸಮುದಾಯದ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಭಾರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ ಸಿಇಓ ಭುವನೇಶ ಪಾಟೀಲ ಅವರು ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು ನಮ್ಮ ರಾಷ್ಟ್ರ ಕಂಡ ಮಹಾಪುರುಷ. ಭಾರತವು ಕಂಡ ಎಲ್ಲ ಮಾಹಾಪುರುಷರು ತಮ್ಮ ಜೀವನದ ಪಾಠಗಳಿಂದ, ಜೀವನ ಸಂದೇಶಗಳಿಂದ ಮಹಾತ್ಮರಾಗಿದ್ದಾರೆ ಎಂದು ಹೇಳಿದರು.

ವಾಲ್ಮೀಕಿ ಅವರ ರಾಮಾಯಣ ಮಹಾಕಾವ್ಯವು ಸತ್ಯದ ದಾರಿ ಆಗಿದೆ. ನಮ್ಮ ಜೀವನಕ್ಕೆ ಬದುಕುವ ಮಾರ್ಗವಾಗಿದೆ. ಅದನ್ನು ಅರಿತು ನಡೆಯಬೇಕು. ಭಾರತ ಕಂಡ ಎಲ್ಲ ಮಹಾತ್ಮರ, ಮಹಾಪುರುಷರ ಬದುಕು ನಮಗೆ ಜೀವನ ಸಂದೇಶವಾಗಿದೆ ಎಂದು ಭುವನೇಶ ಪಾಟೀಲ ಅವರು ಹೇಳಿದರು.

ವೇದಿಕೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಉಪ ಪೊಲೀಸ್ ಆಯುಕ್ತ ಮಾನಿಂಗ ನಂದಗಾವಿ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಮುಖಂಡರಾದ ಎಂ.ಅರವಿಂದ, ಪರಮೇಶ ಕಾಳೆ, ಸುಶೀಲಾ ಚಲವಾದಿ, ಪರಮೇಶ ಕಟ್ಟಿಮನಿ, ಜಿಲ್ಲಾ ಹಾಗೂ ಉಪವಿಭಾಗ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸದಸ್ಯರು, ಜಿಲ್ಲಾ ಮಟ್ಟದ ಸಫಾಯಿ ಕರ್ಮಚಾರಿಗಳ ಜಾಗೃತ ಸಮಿತಿ ಸದಸ್ಯರು ಮತ್ತು ವಿವಿಧ ಮುಖಂಡರು ವೇದಿಕೆಯಲ್ಲಿ ಇದ್ದರು.

ಕಾರ್ಯಕ್ರಮದಲ್ಲಿ ವಾಲ್ಮೀಕಿ ಸಮುದಾಯದ ಸಾಧಕರನ್ನು ಮತ್ತು ಕಳೆದ ಸಾಲಿನಲ್ಲಿ ಎಸ್.ಎಸ್.ಎಲ್.ಸಿ., ಪಿಯುಸಿ ಹಾಗೂ ಸ್ನಾತಕೋತ್ತರ ವಿಭಾಗದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ, ಕ್ರೀಡಾಪಟುಗಳಿಗೆ ಮತ್ತು ಮಾಜಿ ಸೈನಿಕರಿಗೆ ಸನ್ಮಾನಿಸಿ, ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು, ವಾಲ್ಮೀಕಿ ಸಮುದಾಯದ ಪ್ರಮುಖರು, ಸಂಘಸಂಸ್ಥೆಗಳ ಸದಸ್ಯರು, ಸಾರ್ವಜನಿಕರು ಭಾಗವಹಿಸಿದ್ದರು.



## ಶ್ರೀ ಮಹರ್ಷಿ ವಾಲ್ಮೀಕಿ ಭಾವಚಿತ್ರದ ಭವ್ಯ ಮೆರವಣಿಗೆ

ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಮಂಗಳವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರದ ಭವ್ಯ ಮೆರವಣಿಗೆಯು ಧಾರವಾಡ ನಗರದ ವಿವಿಧ ಭಾಗಗಳಲ್ಲಿ ಸಂಚರಿಸಿ, ಕಲಾಭವನ ಆವರಣದಲ್ಲಿ ಮುಕ್ತಾಯಗೊಂಡಿತು. ವಿಧಾನ ಪರಿಷತ್ ಸದಸ್ಯ ಎಫ್.ಎಚ್.ಜಕ್ಕಪ್ಪನವರ ಅವರು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ, ಮೆರವಣಿಗೆಗೆ ಚಾಲನೆ ನೀಡಿದರು. ಪ್ರಭಾರ ಜಿಲ್ಲಾಧಿಕಾರಿ ಹಾಗೂ ಸಿಇಓ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಸೇರಿದಂತೆ ವಿವಿಧ ಅಧಿಕಾರಿಗಳು, ವಾಲ್ಮೀಕಿ ಮತ್ತು ವಿವಿಧ ಸಮಾಜದ ಮುಖಂಡರು, ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗವಹಿಸಿದ್ದರು.ವಿವಿಧ ಜಾನಪದ ಕಲಾ ತಂಡಗಳು ಮೆರವಣಿಗೆಯುದ್ದಕ್ಕೂ ಸಂಚರಿಸಿ, ಭಾವಚಿತ್ರದ ಮೆರವಣಿಗೆಗೆ ಮೆರುಗು ತಂದವು.

---

**ರೋಣ ತಾಲೂಕಿನ 22 ಗ್ರಾಮಸ್ಥರು ಇ-ಕೆವೈಸಿ ಮಾಡಿಕೊಳ್ಳಲು ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಕಂದಕೂರ ಕರೆ**

# ನರೇಗಾ ಜಾಬ್‌ಕಾರ್ಡ್‌ಗಳಿಗೆ ಇ-ಕೆವೈಸಿ ಕಡ್ಡಾಯ



**ರೋಣ:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ) ಅಡಿಯಲ್ಲಿ ಕೆಲಸ ಮಾಡುತ್ತಿರುವ ರೋಣ ತಾಲೂಕಿನ ಕೂಲಿಕಾರರಿಗೆ ಇ-ಕೆವೈಸಿ (ಜಏಜಅ) ಪ್ರಕ್ರಿಯೆ ಕಡ್ಡಾಯಗೊಳಿಸಲಾಗಿದೆ. ತಾಲೂಕಿನ ಎಲ್ಲಾ 22 ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಜಾಬ್ ಕಾರ್ಡ್ ಹೊಂದಿರುವ ಕೂಲಿಕಾರರು ತಮ್ಮ ಇ-ಕೆವೈಸಿ ಪ್ರಕ್ರಿಯೆಯನ್ನು ತಕ್ಷಣ ಪೂರ್ಣಗೊಳಿಸಬೇಕೆಂದು ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ಕರೆ ನೀಡಿದ್ದಾರೆ.

ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಿಂದ ಬಂದ ಸೂಚನೆಯಂತೆ, ಸೆಪ್ಟೆಂಬರ್ 30, 2025ರೊಳಗೆ ಎನ್‌ಎಂಎಂಎಸ್ (ನ್ಯಾಷನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಮ್) ಇ-ಕೆವೈಸಿ ಪ್ರಕ್ರಿಯೆ ಕಡ್ಡಾಯವಾಗಿದೆ. ಆದರೆ, ರೋಣ ತಾಲೂಕಿನಲ್ಲಿ ಇನ್ನೂ ಹೆಚ್ಚಿನ ಕೂಲಿಕಾರರು ಈ ಪ್ರಕ್ರಿಯೆ ಪೂರ್ಣಗೊಳಿಸದಿರುವುದರಿಂದ, ತಾಲೂಕ ಪಂಚಾಯತಿಯ ಐಇಸಿ ಚಟುವಟಿಕೆಗಳ ಮೂಲಕ ವ್ಯಾಪಕ ಜಾಗೃತಿ ಕಾರ್ಯಕ್ರಮಗಳು ಹಮ್ಮಿಕೊಳ್ಳಲು ಸೂಚಿಸಲಾಗಿದೆ.

ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮತ್ತು ಐಇಸಿ ಚಟುವಟಿಕೆಗಳ ಮೂಲಕ ಗ್ರಾಮಸ್ಥರಿಗೆ ಇ-ಕೆವೈಸಿಯ ಮಹತ್ವ ತಿಳಿಸಲಾಗುತ್ತಿದೆ. ಕಾರ್ಮಿಕರು ತಮ್ಮ ಜಾಬ್ ಕಾರ್ಡ್ ಮತ್ತು ಆಧಾರ್ ಕಾರ್ಡ್ ಸಹಿತವಾಗಿ ಗ್ರಾಮ ಪಂಚಾಯತ್ ಕಚೇರಿಗೆ ಅಥವಾ ಆಧಾರ್ ಕೇಂದ್ರಗಳಿಗೆ ಭೇಟಿ ನೀಡಿ, ಇ-ಕೆವೈಸಿ ಪ್ರಕ್ರಿಯೆ ಪೂರ್ಣ ಗೊಳಿಸಬೇಕಾಗಿದೆ ಎಂದರು

"ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಿದರೆ ಕೂಲಿ ಪಾವತಿಯಲ್ಲಿ ವೇಗ ಮತ್ತು ಪಾರದರ್ಶಕತೆ ಹೆಚ್ಚುತ್ತದೆ. ಜೊತೆಗೆ, ಕಾರ್ಮಿಕರ ಹಾಜರಾತಿಯನ್ನು ಮುಖ ಆಧಾರಿತ **(Face Authentication)** ತಂತ್ರದ ಮೂಲಕ ಎನ್‌ಎಂಎಂಎಸ್ ಅಪ್ಲಿಕೇಶನ್‌ನಲ್ಲಿ ನಿಖರವಾಗಿ ದಾಖಲಿಸಬಹುದು. ಇದು ನರೇಗಾ ಯೋಜನೆಯ ವಿಶ್ವಾಸಾರ್ಹತೆ ಮತ್ತು ಪರಿಣಾಮಕಾರಿತೆಯನ್ನು ಹೆಚ್ಚಿಸುತ್ತದೆ." ಸದ್ಯದಲ್ಲೇ ಎನ್‌ಎಂಎಂಎಸ್ ಅಪ್ಲಿಕೇಶನ್‌ನಲ್ಲಿ ಕಾರ್ಮಿಕರ ಫೋಟೋ ಸೆರೆಹಿಡಿದು, ಆಧಾರ್ ಸಂಖ್ಯೆಯೊಂದಿಗೆ ಮುಖ ಹೊಂದಾಣಿಕೆ ಮೂಲಕ ಹಾಜರಾತಿ ದೃಢಪಡಿಸಲಾಗುತ್ತಿದೆ. ಇ-ಕೆವೈಸಿ ಪೂರ್ಣಗೊಳಿಸದ ಕಾರ್ಮಿಕರ ಹಾಜರಾತಿಯನ್ನು ಮುಂದಿನ ದಿನಗಳಲ್ಲಿ ಪರಿಗಣಿಸಲಾಗುವುದಿಲ್ಲ ಎಂದು ಕಾರ್ಯ ನಿರ್ವಾಹಕ ಅಧಿಕಾರಿಗಳು ತಿಳಿಸಿದರು

ರೋಣ ತಾಲೂಕಿನ ಒಟ್ಟು 22 ಗ್ರಾಮ ಪಂಚಾಯತಿಗಳಲ್ಲಿ 30054 ಕುಟುಂಬಗಳಿದ್ದು 73585 ನೊಂದಣಿ ಆದ ಕೂಲಿಕಾರರು ಇದ್ದು, ಅದರಲ್ಲಿ 50113 ಸಕ್ರಿಯ ಕೂಲಿಕಾರರು ಇರುತ್ತಾರೆ ಇವರೆಲ್ಲರೂ ಇ-ಕೆವೈಸಿ ಮಾಡಿಕೊಳ್ಳಲು ತಿಳಿಸಿರುತ್ತಾರೆ. ತಾಲೂಕಿನಲ್ಲಿ ಸಾಮೂಹಿಕ ಹಾಗೂ ವೈಯಕ್ತಿಕ ಕಾಮಗಾರಿಗಳ ಮೂಲಕ ಕೂಲಿಕಾರರಿಗೆ 100 ದಿನಗಳ ಕನಿಷ್ಠ ಉದ್ಯೋಗ ಒದಗಿಸಲಾಗುತ್ತಿದ್ದು, ಸರ್ಕಾರದ ಈ ಮಹತ್ವಾಕಾಂಕ್ಷಿ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ಎಲ್ಲ ಕಾರ್ಮಿಕರು ತಕ್ಷಣ ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಬೇಕೆಂದು ತಾಲೂಕ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳು ಮನವಿ ಮಾಡಿದ್ದಾರೆ

---

**ಗದಗ ಜಿಲ್ಲಾಡಳಿತದಲ್ಲಿ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ**

# ವಾಲ್ಮೀಕಿ ಶ್ರೀರಾಮನ ಚರಿತ್ರೆ ಜಗತ್ತಿಗೆ ತೋರಿಸಿದ ಮಹಾಕವಿ



**ಗದಗ:** ಶ್ರೀರಾಮನ ಚರಿತ್ರೆಯನ್ನು ಜಗತ್ತಿಗೆ ತೋರಿಸುವ ಪಣತೊಟ್ಟು ಕಾವ್ಯರೂಪದಲ್ಲಿ ರಾಮಾಯಣವನ್ನು ಪರಿಚಯಿಸಿದವರು ಶ್ರೀ ಮಹರ್ಷಿ ವಾಲ್ಮೀಕಿ ಅವರು ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಅವರು ಬಣ್ಣಿಸಿದರು.

ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಗದಗ-ಬೇಟಗೇರಿ ಇವರುಗಳ ಸಹಯೋಗದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ದಿನಾಚರಣೆ ಸಮಾರಂಭದ ಉದ್ಘಾಟಿಸಿ ಅವರು ಮಾತನಾಡಿದರು.

ಮಹರ್ಷಿ ವಾಲ್ಮೀಕಿ ಅವರು ರಾಮಾಯಣ ಕಾವ್ಯದಲ್ಲಿ ಶ್ರೀರಾಮನ ಪೂರ್ಣ ಜೀವನ ಚಿತ್ರವನ್ನು ನಮಗೆಲ್ಲ ಅರಿಯುವಂತೆ ಕಟ್ಟಿಕೊಟ್ಟಿದ್ದಾರೆ ಅಲ್ಲದೆ ಶ್ರೀರಾಮನ ಆದರ್ಶ ಜೀವನ ಹಾಗೂ ಯಶಸ್ವಿ ಕುರಿತು ತಿಳಿಸಿದ್ದಾರೆ. ಶ್ರೀರಾಮನ ಜೀವನದ ತತ್ವಾದರ್ಶನಗಳನ್ನು ಸುಂದರವಾಗಿ ರಚನೆ ಮಾಡುವುದು ಸುಲಭದ ಮಾತಲ್ಲ. ನಾವುಗಳೆಲ್ಲ ಆದರ್ಶದ ಬೆನ್ನತ್ತಬೇಕು ಅವುಗಳ ಪಾಲನೆಯಿಂದ ನಮ್ಮ ಜೀವನ ಸುಂದರವಾಗುತ್ತದೆ ಎಂದರು.

ಗದಗ ಬೆಟಗೇರಿ ನಗರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿಬಿ ಅಸೂಟಿ ಅವರು ಶ್ರೀ ಮಹರ್ಷಿ ವಾಲ್ಮೀಕಿ ಜಯಂತೋತ್ಸವದ ಶುಭಾಶಯಗಳನ್ನು ತಿಳಿಸಿದರು. ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್ ಕೆ ಪಾಟೀಲ ಅವರ ಅನುಪಸ್ಥಿತಿಯಲ್ಲಿ ಸಚಿವರ ವಾಲ್ಮೀಕಿ ಜಯಂತಿಯ ಸಂದೇಶವನ್ನು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್ ಎಸ್ ಬುರುಡಿ ಅವರು ವಾಚಿಸಿದರು. ಶಿಕ್ಷಕ ವಿರೇಶ ವಾಲ್ಮೀಕಿ ಉಪನ್ಯಾಸ ನೀಡುತ್ತಾ, ಸರ್ಕಾರ ಕಳೆದ 16 ವರ್ಷಗಳಿಂದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸುತ್ತಿರುವುದು ಸಂತಸದ ವಿಷಯ ಎಂದರು.

ಮನುಕುಲದ ಒಳಿತಿಗಾಗಿ ಹಲವು ಗ್ರಂಥ ಕಾವ್ಯಗಳು ಹೊರಬಂದಿವೆ ಅವುಗಳಲ್ಲಿ ವಿಶೇಷ ಸ್ಥಾನ ಪಡೆಯಲು ಮನುಷ್ಯನ ಜೀವನ ಉತ್ಸಾಹ ಅಧಿಕಗೊಳಿಸಲು ಸಹಕಾರಿಯಾಗಿದೆ. ಇವುಗಳಲ್ಲಿ ಮೇಲೆ ಸ್ತರದಲ್ಲಿ ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ನಿಂತಿದೆ ಎಂದು ಹೇಳಿದರು.

ರಾಮಾಯಣದಲ್ಲಿ ಏಳು ಮಹಾ ಕಂಡಗಳು ಹಾಗೂ 24,000 ಶ್ಲೋಕಗಳನ್ನು ಒಳಗೊಂಡ ಮಹಾಕಾವ್ಯವಾಗಿದೆ. ವಾಲ್ಮೀಕಿ ಅವರ ರಾಮಾಯಣವು ಐತಿಹಾಸಿಕ ಚಾರಿತ್ರಿಕ ಮಹಾಕಾವ್ಯವೆಂದು ಬಣ್ಣಿಸಿದರು.

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದ ಹಣಮರಟ್ಟಿ ಅವರು ಅತಿಥಿಗಳನ್ನು ಸ್ವಾಗತಿಸಿದರು. ಪ್ರೊ. ಬಾಹುಬಲಿ ಜೈನರ್ ಕಾರ್ಯಕ್ರಮ ನಿರ್ವಹಿಸಿದರು. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಮಹನೀಯರಿಗೆ ಸನ್ಮಾನಿಸಲಾಯಿತು. ಹಾಗೂ ನಿವೃತ್ತ ಪ್ರಾಧ್ಯಾಪಕಿ ಶಕುಂತಲಾ ಸಿಂದೂರ ಅವರು ವಾಲ್ಮೀಕಿ ಅವರ ಕುರಿತು ಸಂಗ್ರಹಿಸಿ ರಚಿಸಿದ ಗ್ರಂಥವನ್ನು ಅತಿಥಿಗಳು ಬಿಡುಗಡೆ ಗೊಳಿಸಿದರು.

ಸಮಾರಂಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಅಪರ ಜಿಲ್ಲಾಧಿಕಾರಿ ಡಾಕ್ಟರ್ ದುರ್ಗೇಶ್ ಕೆ ಆರ್ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸಿಆರ್ ಮುಂಡರಗಿ ಉಪ ವಿಭಾಗಾಧಿಕಾರಿ ಗಂಗಪ್ಪ ಸರ್ಕಾರಿ ನೌಕರರ ಜಿಲ್ಲಾಧ್ಯಕ್ಷ ಡಾಕ್ಟರ್ ಬಸವರಾಜ್ ಬಳ್ಳಾರಿ ಸೇರಿದಂತೆ ನಗರಸಭೆಯ ಸದಸ್ಯರು ಸಮಾಜದ ಮುಖಂಡರು ಅಧಿಕಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

---

## ನರೇಗಾ ಜಾಬ್ ಕಾರ್ಡ್‌ಗೆ ಇ-ಕೆವೈಸಿ ಕಡ್ಡಾಯ

**ಕಾರವಾರ:** ಮಹಾತ್ಮಾ ವಗಾಂಧಿ ನರೇಗಾ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ಸಕ್ರಿಯ ಕಾರ್ಮಿಕರಿಗೆ ಪ್ರಸ್ತುತ ಎನ್.ಎಮ್.ಎಮ್.ಎಸ್ ಇ-ಕೆವೈಸಿ ಕಡ್ಡಾಯವಾಗಿದ್ದು, ಜಿಲ್ಲೆಯ ಎಲ್ಲಾ ತಾಲೂಕು ಮತ್ತು ಗ್ರಾಮ ಪಂಚಾಯತ ವ್ಯಾಪ್ತಿಯ ನರೇಗಾ ಕಾರ್ಮಿಕರು, ತಮ್ಮ ನರೇಗಾ ಜಾಬ್ ಕಾರ್ಡ್‌ಗೆ ಇಕೆವೈಸಿ ಯನ್ನು ಅ.30 ರೊಳಗಾಗಿ ಮಾಡಿಸಿಕೊಳ್ಳುವ ಮೂಲಕ ಈ ಯೋಜನೆ ಇನ್ನಷ್ಟು ಪಾರದರ್ಶಕವಾಗಿ ಮತ್ತು ಪರಿಣಾಮಕಾರಿಯಾಗಿ ಮುಂದುವರಿಯಲು ಸಹಕರಿಸುವಂತೆ ಜಿಲ್ಲಾ ಪಂಚಾಯತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ದಿಲೀಷ್ ಶಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

ಕರ್ನಾಟಕ ಸರ್ಕಾರ

**ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯ ಬೈಲಹೊಂಗಲ.**

ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದ ಎದುರಿಗೆ, ಧಾರವಾಡ ಬೈ ಪಾಸ್ ರಸ್ತೆ ಬೈಲಹೊಂಗಲ-591102, ತಾ:ಬೈಲಹೊಂಗಲ ಜಿ:ಬೆಳಗಾವಿ

Phone No:08288-233553, Email:-bcmextblhgmail.com

ಸಂ:ತಾಹಿಂವಕಇಜ್ಯ/ಬಾಕಓಕು/ಸಿಆರ್-I /2025-26 ದಿನಾಂಕ:-03-10-2025

**ಪತ್ರಿಕಾ ಪ್ರಕಟಣೆ**

**ವಿಷಯ - ಮೆ ಹೂ ಬಾಲಕರ ವಿದ್ಯಾರ್ಥಿ ನಿಲಯ ಬೈಲಹೊಂಗಲ (ಡಿಟಿ) (BCWD-88)ಗೆ ಕಟ್ಟಡ ಬಾಡಿಗೆಯನ್ನು ಪಡೆಯಲು ಪತ್ರಿಕಾ ಪ್ರಕಟಣೆಯನ್ನು ಸಲ್ಲಿಸುತ್ತಿರುವ ಕುರಿತು.**

**ಉಲ್ಲೇಖ -1)ಮಾನ್ಯ ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರುರವರ ಪತ್ರ ಸಂಖ್ಯೆ:CWD-12018/117/2025-HOSTEL 0:03/10/2025.**

**2) ಸುತ್ತೋಲೆ ಸಂಖ್ಯೆ: ಹಿಂವಕಇ/ವನಿಶಾ-3/ಸಿಆರ್1/2019-20 ದಿನಾಂಕ :04.07.2019 ಮತ್ತು 18.09.2019**

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1) ರಲ್ಲಿ ಮಾನ್ಯ ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರುರವರು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬೈಲಹೊಂಗಲ (ಡಿಟಿ) (BCWD-88) ವಿದ್ಯಾರ್ಥಿ ನಿಲಯವನ್ನು ಸೂಕ್ತ ಬಾಡಿಗೆ ಕಟ್ಟಡಕ್ಕೆ ಸ್ಥಳಾಂತರಿಸಲು ಅನುಮತಿ ನೀಡಿರುತ್ತಾರೆ. ಉಲ್ಲೇಖ (2) ರಲ್ಲಿನ ಸುತ್ತೋಲೆಯನ್ವಯ ಕಟ್ಟಡವು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸುರಕ್ಷತೆಯಿಂದ ಕೂಡಿರುವ ಬಗ್ಗೆ ಖಾತರಿಪಡಿಸಿಕೊಂಡು, ಲೋಕೋಪಯೋಗಿ ಇಲಾಖೆಯಿಂದ ನಿಗದಿಪಡಿಸಿರುವ ಅಥವಾ ಸ್ಥಳೀಯ ಮಾರುಕಟ್ಟೆ ದರ ಯಾವುದು ಕಡಿಮೆ ಇರುತ್ತದೆಯೋ ಆ ದರಕ್ಕೆ ಮಾಲೀಕರೊಂದಿಗೆ ದರ ಸಂಧಾನ ನಡೆಸಿ ಬಾಡಿಗೆ ನಿಗದಿಪಡಿಸುವ ಷರತ್ತಿಗೆ ಒಳಪಟ್ಟು 60 ಸಂಖ್ಯಾಬಲವುಳ್ಳ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬೈಲಹೊಂಗಲ (ಡಿಟಿ) (BCWD- 88)ಕ್ಕೆ ಬಾಡಿಗೆ ಕಟ್ಟಡವನ್ನು ಒದಗಿಸಲು ಇಚ್ಚಿಸುವ ಕಟ್ಟಡಗಳ ಮಾಲೀಕರು ಕಟ್ಟಡವು ಮೂಲಭೂತ ಸೌಕರ್ಯಗಳನ್ನು ಒಳಗೊಂಡ ಬಗೆಗೆ ಛಾಯಾಚಿತ್ರಗಳೊಂದಿಗೆ ಮನವಿಯನ 07 ದಿನಗಳ ಒಳಗಾಗಿ ತಾಲೂಕಾ ಕಛೇರಿಗೆ ಸಲ್ಲಿಸಲು ಈ ಪ್ರಕಟಣೆ ಮೂಲಕ ಕೋರಲಾಗಿದೆ.

ಸಹಿ/-

**ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಬೈಲಹೊಂಗಲ**

---

# ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ

**ಉಗರಗೋಳ:** ಸತತ ಮಳೆಯಿಂದ ಹಾನಿಗೀಡಾದ ಗ್ರಾಮೀಣ ಭಾಗದ ರಸ್ತೆಗಳನ್ನು ರಸ್ತೆಗಳನ್ನು ಹಂತ, ಹಂತವಾಗಿ ಅಭಿವೃದ್ಧಿಪಡಿಸಿ, ಸಂಚಾರಕ್ಕಾಗಿ ಸವಾರರಿಗೆ ಅನುಕೂಲ ಕಲ್ಪಿಸಲಾಗುತ್ತಿದೆ ಎಂದು ಶಾಸಕ ವಿಶ್ವಾಸ ವೈದ್ಯ ಹೇಳಿದರು.

ಸವದತ್ತಿ ತಾಲೂಕಿನ ಉಗರಗೋಳ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ 1.50 ಕೋಟಿ ರೂಪಾಯಿ ವೆಚ್ಚದಲ್ಲಿ ಹೂಲಿ-ಹರ್ಲಾಪುರ-ಉಗರಗೋಳ ಮಾರ್ಗದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಬುಧವಾರ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ರಸ್ತೆ ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳಬೇಕು ಎಂದು ಗುತ್ತಿಗೆದಾರರಿಗೆ ಸೂಚಿಸಿದ ಅವರು, ಉಗರಗಗೋಳದಲ್ಲಿ ಗ್ರಾಮಸ್ಥರಿಗೆ ಮೂಲಸೌಕರ್ಯ ಕಲ್ಪಿಸಲು ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಗ್ರಾಮಗಳ ಅಭಿವೃದ್ಧಿಯೇ ನನ್ನ ಧ್ಯೇಯ ಎಂದರು. ಉಗರಗೋಳ ನಿರ್ವಾಣೇಶ್ವರಮಠದ ಪೂಜ್ಯ ಗುರು ಮಹಾಂತ ಶ್ರೀಗಳು, ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಶಿದ್ಧನಗೌಡ ಗೂಡ್ರಾಶಿ, ಯಲ್ಲಮ್ಮ ದೇವಸ್ಥಾನ ವೈವಸ್ಥಾಪನಾ ಸಮಿತಿ ಮಾಜಿ ಅಧ್ಯಕ್ಷ ರಾಮನಗೌಡ ತಿಪರಾಶಿ, ಮಲ್ಲು ಜಕಾತಿ, ನಿಂಗನಗೌಡ ಹರಳಕಟ್ಟಿ, ಹನಮಂತ ಶಿದ್ದಕ್ಕನವರ, ನಾಗರಾಜ ಬಡೆಪ್ಪನವರ, ನೀಲಪ್ಪ ಶಿದ್ದಕ್ಕನವರ, ಪರಸಪ್ಪ ಇಂಮ್ರಾಪೂರ, ರಾಜೇಶ ಅಂಗಡಿ, ಮಾರುತಿ ಶಿಂಧೆ, ಪ್ರಕಾಶ ಲಮಾಣಿ, ವಿಠಲ ಶಿದ್ದಕ್ಕನವರ, ಸಂತೋಷ ಕಲಾಲ, ಶರೀಫ ಬಾರಿಗಿಡದ, ಅಭಿಷಕ ತಿಪರಾಶಿ, ಮಹೇಶ ಹನಶಿ, ಮಂಜು ಗುಡೆನ್ನವರ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.



---

**ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದ ಶಾಸಕ ಮಹೇಂದ್ರ ತಮ್ಮಣ್ಣವರ**

# ಹಾರೂಗೇರಿಯಲ್ಲಿ ಸರ್ಕಾರಿ ಕಚೇರಿಗಳ ಪ್ರಾರಂಭಕ್ಕೆ ಮನವಿ



**ರಾಯಬಾಗ:** ಹಾರೂಗೇರಿ ಪಟ್ಟಣದ ಅಭಿವೃದ್ಧಿಗೆ ಅಗತ್ಯವಿರುವ ಮಹತ್ವದ ಸರ್ಕಾರಿ ಸೇವಾ ಘಟಕಗಳು, ಸಬ್ ಟ್ರೆಸರಿ, ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ, ಸಬ್ ರಜಿಸ್ಟರ್ ಮತ್ತು ಸಿಡಿಪಿಓ ಕಚೇರಿಗಳು ಹಾರೂಗೇರಿ ಪಟ್ಟಣದಲ್ಲಿ ಕಾರ್ಯಾರಂಭಿಸಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ತಾಲ್ಲೂಕು ಘಟಕದ ವತಿಯಿಂದ ಕುಡಚಿ ಶಾಸಕ ಮಹೇಂದ್ರ ತಮ್ಮಣ್ಣವರ ಅವರಿಗೆ ಮಂಗಳವಾರ ಮನವಿ ಪತ್ರ ಸಲ್ಲಿಸಿದರು.

ಕುಡಚಿ ಪಟ್ಟಣದಲ್ಲಿರುವ ನಾಗರಿಕ ಸೇವಾ ಸೌಲಭ್ಯಕ್ಕಾಗಿ ಮೀಸಲಿಟ್ಟ ನಿವೇಶನಗಳು ಪುರಸಭೆಯ ವ್ಯಾಪ್ತಿಯಲ್ಲಿವೆ. ಅವು ಈಗ ಖಾಲಿ ಇರುವುದರಿಂದ ಅಕ್ಕಪಕ್ಕದವರು ಅತಿಕ್ರಮಣ ಮಾಡುತ್ತಿದ್ದಾರೆ.

ಆದ್ದರಿಂದ ಕುಡಚಿ ಮತಕ್ಷೇತ್ರದ ಜನರ ಅನುಕೂಲಕ್ಕಾಗಿ ಹಾಗೂ ಸರ್ಕಾರಕ್ಕೆ ಆದಾಯ ತರುವ ಕಚೇರಿಗಳನ್ನು ಹಾರೂಗೇರಿ ಪಟ್ಟಣದಲ್ಲಿ ಕಚೇರಿಗಳನ್ನು ಪ್ರಾರಂಭಿಸುವಂತೆ ಸಂಘದ ಅಧ್ಯಕ್ಷ ಉಮೇಶ ಪೋಳ ಹೇಳಿದರು.

ಮನವಿ ಪತ್ರ ಸ್ವೀಕರಿಸಿದ ಬಳಿಕ ಶಾಸಕ ಮಹೇಂದ್ರ ತಮ್ಮಣ್ಣವರ ಮಾತನಾಡಿ,"ಹಾರೂಗೇರಿ ಪಟ್ಟಣವು ತಾಲೂಕಿನ ಪ್ರಮುಖ ಕೇಂದ್ರವಾಗಿ ಬೆಳೆಯುತ್ತಿದೆ. ಇಲ್ಲಿನ ಜನತೆಗೆ ಸರ್ಕಾರಿ ಕೆಲಸಕ್ಕಾಗಿ ರಾಯಬಾಗ ಪಟ್ಟಣಕ್ಕೆ ತೆರಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಜನರಿಗೆ ಸ್ಥಳೀಯ ಮಟ್ಟದಲ್ಲಿ ಸೇವೆಗಳು ದೊರೆಯುವಂತೆ ಮಾಡಲು ನಾನು ರಾಜ್ಯ ಸರ್ಕಾರದ ಗಮನಕ್ಕೆ ವಿಷಯ ತಂದು ಕಚೇರಿಗಳ ಸ್ಥಾಪನೆಗೆ ಅಗತ್ಯ ಕ್ರಮ ಕೈಗೊಳ್ಳುತ್ತೇನೆ," ಎಂದು ಭರವಸೆ ನೀಡಿದರು.

ಸಂಘದ ಕಾರ್ಯದರ್ಶಿ ವಿನೋದ ಚವ್ಹಾಣ, ಸಿದ್ಲಿಂಗ ನರಗಟ್ಟಿ, ಭರಮು ನಾಗನೂರ, ಮಲ್ಲು ಗುಳೇದಾರ,ರಾಮಚಂದ್ರ ದಾಸರ, ದೇವರಾಜ ವೈದ್ಯ, ಕಲ್ಲಪ್ಪ ಬಡಿಗೇರ ಇದ್ದರು.

---

# ಸಮೀಕ್ಷೆಯಲ್ಲಿ ಗದಗ ಜಿಲ್ಲೆಯ ಶ್ರೇಷ್ಠ ಸಾಧನೆಗೆ ಮೆಚ್ಚುಗೆ



**ಗದಗ:** ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯಾದ್ಯಂತ ನಡೆಯುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯದಲ್ಲಿ ಗದಗ ಜಿಲ್ಲೆ 93 ಶೇಕಡಾ ಸಾಧನೆ ದಾಖಲಿಸಿ ರಾಜ್ಯದಲ್ಲಿ ಅತ್ಯುತ್ತಮ ಸ್ಥಾನ ಗಳಿಸಿದೆ. ಈ ಸಾಧನೆಗೆ ಹಿಂದುಳಿದ ವರ್ಗಗಳ ಆಯೋಗದ ಸದಸ್ಯ ಸಿ.ಎನ್. ಕುಂದಗೋಳ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಆಯೋಗ ನಿಗದಿಪಡಿಸಿದ ಅವಧಿಯೊಳಗೆ ಗದಗ ಜಿಲ್ಲೆಯಲ್ಲಿ ಸಮೀಕ್ಷೆ ಕಾರ್ಯ ಅತ್ಯಂತ ಶ್ರದ್ಧೆಯಿಂದ ಹಾಗೂ ಯೋಜಿತವಾಗಿ ನಡೆಯುತ್ತಿದೆ. ಜಿಲ್ಲೆಯಲ್ಲಿ 6,000 ಕ್ಕೂ ಹೆಚ್ಚು ಎನ್‌ಎಸ್‌ಎಸ್ ವಿದ್ಯಾರ್ಥಿಗಳನ್ನು ಸಮೀಕ್ಷಾ ಕಾರ್ಯದಲ್ಲಿ ಬಳಸಿರುವುದು ಅತ್ಯಂತ ಶ್ಲಾಘನೀಯ. ಅವರು ಮನೆಮನೆಗೆ ತೆರಳಿ ಜನರ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸ್ಥಿತಿಯ ಕುರಿತು ಮಾಹಿತಿಯನ್ನು ಸಂಗ್ರಹಿಸಲು ಸಮೀಕ್ಷಾದಾರರು ಆಗಮಿಸುತ್ತಾರೆ. ಅವರಿಗೆ ಸರಿಯಾದ ಮಾಹಿತಿ ನೀಡುವಂತೆ ಮೊದಲೆ ಜಾಗೃತಿ ಮೂಡಿಸಿದ್ದು ಪ್ರಗತಿ ಸಾಧಿಸಲು ಸಹಕಾರಿಯಾಗಿದೆ. ಈ ರೀತಿಯ ಸಂಘಟಿತ ಮತ್ತು ಸಮನ್ವಯಿತ ಪ್ರಯತ್ನದಿಂದಲೇ ಗದಗ ಜಿಲ್ಲೆ ರಾಜ್ಯದ ಶ್ರೇಷ್ಠ ಜಿಲ್ಲೆಗಳ ಪೈಕಿ ಒಂದಾಗಿದೆ," ಎಂದು ಹೇಳಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಸಭೆಯಲ್ಲಿ ಮಾತನಾಡಿ, ಸಮೀಕ್ಷೆಯ ಯಶಸ್ಸಿಗೆ ಎಲ್ಲಾ ಇಲಾಖೆಗಳ ಸಂಯೋಜನೆ ಮುಖ್ಯ ಪಾತ್ರ ವಹಿಸಿದೆ. ನಗರಸಭೆಯ ವಾಹನಗಳಲ್ಲಿ ಜಿಂಗಲ್‌ಗಳ ಮೂಲಕ ಜನಜಾಗೃತಿ ಮೂಡಿಸಲಾಯಿತು. ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಹಾಗೂ ಆಶಾ ಕಾರ್ಯಕರ್ತೆಯರು ಸಮೀಕ್ಷಾ ಕಾರ್ಯಕ್ಕೆ ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದಾರೆ. ಸಮೀಕ್ಷೆಯಲ್ಲಿ ಒಟ್ಟು 65 ಪ್ರಶ್ನೆಗಳಿದ್ದು, ಅವುಗಳನ್ನು ಜನರಿಗೆ ಸರಳವಾಗಿ ಅರ್ಥವಾಗುವಂತೆ ತಿಳಿಸಿ ಮಾಹಿತಿ ಸಂಗ್ರಹಿಸಲಾಗಿದೆ.

ಇದುವರೆಗೆ 93 ಶೇಕಡಾ ಕಾರ್ಯ ಪೂರ್ಣಗೊಂಡಿದ್ದು, ಹೊಸ 4 ಮತ್ತು 5ನೇ ಆಪ್ ವರ್ಶನ್‌ಗಳ ಮೂಲಕ ಡೇಟಾ ಸಂಗ್ರಹ ಕಾರ್ಯ ಸರಳವಾಗಿ ಹಾಗೂ ನಿಖರವಾಗಿ ನಡೆಯುತ್ತಿದೆ. ಇನ್ನೆರಡು ದಿನಗಳಲ್ಲಿ ಸಂಪೂರ್ಣ ಸಮೀಕ್ಷೆ ಮುಕ್ತಾಯಗೊಳ್ಳಲಿದೆ," ಎಂದು ವಿವರಿಸಿದರು.

ಅವರು ಹೆಸ್ಕಾಂ ನೌಕರರ ಸಹಕಾರವನ್ನೂ ಶ್ಲಾಘಿಸಿದರು. ಸಭೆಯಲ್ಲಿ ಸಮೀಕ್ಷೆಯ ಜಿಲ್ಲಾ ನೋಡಲ್ ಅಧಿಕಾರಿ ಸೈದಾ ಬಳ್ಳಾರಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಸಹಾಯಕ ಆಯುಕ್ತ ಗಂಗಪ್ಪ ಎಂ., ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಬಿಸಿಎಂ ಜಿಲ್ಲಾ ಅಧಿಕಾರಿ ಎಂ.ಎಂ. ತುಂಬರಮಟ್ಟಿ, ಸೇರಿದಂತೆ ಆರ್.ಎಸ್. ಬುರಡಿ, ಅಮಿತ್ ಬಿದರಿ, ಶ್ರೀಶೈಲ್ ಸೋಮನಕಟ್ಟಿ, ಕೆ. ಮಲ್ಲಯ್ಯ, ಡಾ. ನಂದಾ ಹಣಬರಟ್ಟಿ, ಡಾ. ಬಸವರಾಜ ಬಳ್ಳಾರಿ, ರಾಜಾರಾಮ ಪವಾರ್, ವಸಂತ ಮಡ್ಲೂರ, ತಹಶಿಲ್ದಾರರು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಬಿಇಓಗಳು ಮತ್ತು ಇತರ ಅಧಿಕಾರಿಗಳು ಉಪಸ್ಥಿತರಿದ್ದರು

ಜಲಾವೃತಗೊಂಡ ರಸ್ತೆಯಲ್ಲಿ ಸಿಲುಕಿದ ಶಾಲಾವಾಹನ: ಎಚ್ಚೆತ್ತುಗೊಳ್ಳದ ಇಲಾಖೆ ಅಧಿಕಾರಿಗಳು

# ಗುಡುಗು ವಿಂಚಿನೊಂದಿಗೆ ಅಬ್ಬರಿಸಿದ ಮಳೆರಾಯ

**ವರದಿ: ಮಲ್ಲೇಶ ರಾ. ಆಳಗಿ**

**ಜಮಖಂಡಿ:** ಕಳೆದ ಮೂರು ದಿನದಿಂದ ರಣಬಿಸಿಲುನಿಂದ ತಾಪಮಾನ ಹೆಚ್ಚಾಗುವ ಮೂಲಕ ಬೇಸಿಗೆಕಾಲದ ವಾತಾವರಣ ನಿರ್ಮಾಣಗೊಂಡಿತ್ತು. ಸಂತೆ ದಿನವಾದ ಗುರುವಾರ ಮುಂಜಾನೆ ತುಂತುರು ಮಳೆ ಆರಂಭ ಗೊಂಡರು ಬಹಳ ಹೊತ್ತು ಮಳೆಯಾಗದೇ ನಿರಾಶೆ ಮೂಡಿಸಿತು.

ಆದರೇ ಬಿಸಿಲು ಹೆಚ್ಚಾದಂತೆ ಮಳೆಯಾಗುವದಿಲ್ಲ ಎಂದುಕೊಂಡಿದ್ದ ಜನರಿಗೆ ಮಧ್ಯಾಹ್ನ 3 ಗಂಟೆಗೆ ಮಳೆರಾಯನ ಘರ್ಜನೆಯೊಂದಿಗೆ ಆರಂಭಗೊಂಡ ಮಳೆಗೆ ತಾಲೂಕಿನ ಜನತೆಯಲ್ಲಿ ಭಯದ ವಾತಾವರಣ ಮೂಡಿಸಿತು. ಸತತ ಎರಡು ಗಂಟೆವರೆಗೆ ಸುರಿದ ಭಯಂಕರ ಮಳೆಯಿಂದ ರಸ್ತೆಗಳಲ್ಲಿ ನೀರು ತುಂಬಿಕೊಂಡು ರಸ್ತೆಗಳಲ್ಲಿ ಸಂಚಾರವೇ ಸ್ಥಗಿತಗೊಂಡಿತು. ಸತತವಾಗಿ 6 ರಿಂದ 8 ಸಲ ಘರ್ಜಿಸಿದ ಸಿಡಿಲುಗಳು ನಮ್ಮ ಮೇಲೆ ನಮ್ಮ ಮನೆಯ ಮೇಲೆ ಬೀಳುತ್ತಿವೆ ಎಂಬ ಭಾವನೆಗಳು ಜನರಲ್ಲಿ ಮೂಡುವ ಮೂಲಕ ಆತಂಕ ಕ್ಷಣಗಳನ್ನು ಎದುರಿಸಿದರು. ಮನೆಯಲ್ಲಿದ್ದ ಮಕ್ಕಳು ಸುರಕ್ಷಿತವಾಗಿದ್ದರೆ, ಪಾಲಕರಿಗೆ ಶಾಲೆಗೆ ಹೋಗಿದ್ದ ಮಕ್ಕಳ ಚಿಂತೆ ಹೆಚ್ಚಾಗಿತ್ತು.

**ಆತಂಕದಲ್ಲಿ ಶಾಲಾಮಕ್ಕಳು...**

ದಿನನಿತ್ಯ ಶಾಲೆಗಳು ಬೆಳಿಗ್ಗೆ ಆರಂಭಗೊಂಡು




## ತಗ್ಗು-ಗುಂಡಿಗಳು ಭರ್ತಿ

ಗುರುವಾರ ಧಾರಕಾರವಾಗಿ ಸುರಿದ ಮಳೆಯಿಂದ ನಗರದ ಬಹುತೇಕ ಬಡಾವಣೆಗಳಲ್ಲಿ ತಗ್ಗು-ಗುಂಡಿಗಳು ಭರ್ತಿ ಆಗಿದ್ದು, ರಸ್ತೆಗಳಲ್ಲಿ ನೀರು ಸಂಗ್ರಹವಾಗಿದೆ. ಜಲಾವೃತಗೊಂಡ ರಸ್ತೆಗಳಲ್ಲಿ ವಾಹನ ರಸ್ತೆ ಸಂಚಾರ, ಜನಜೀವನ ಅಸ್ತವ್ಯಸ್ಥವಾಗಿದೆ. ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ನೀರು ಸಂಗ್ರಹವಾಗಿದೆ.

ಮಧ್ಯಾಹ್ನ 3-30 ಗಂಟೆಗೆ ಸ್ಥಗಿತಗೊಳ್ಳುವ ಶಾಲಾ ಸಮಯದಲ್ಲಿ ಆರ್ಭಟಿಸುತ್ತಿದ್ದ ಬಂದ ಮಳೆರಾಯ ಒಂದು ಕ್ಷಣ ನಿಲ್ಲದೆ ಧಾರಕಾರವಾಗಿ ಸುರಿಯುವ ಮೂಲಕ ಪಾಲಕರಲ್ಲಿ ಮತ್ತು ಮಕ್ಕಳಲ್ಲಿ ಆತಂಕದ ಕ್ಷಣಗಳು ಸೃಷ್ಠಗೊಂಡಿತ್ತು. ಪಾಲಕರಿಗೆ, ಪೋಷಕರಿಗೆ ಶಾಲೆಯಲ್ಲಿದ್ದ ಮಕ್ಕಳ ಚಿಂತೆಯಾಗಿತು. ಕೆಲವೊಂದು ಶಾಲೆಗಳ ಶಿಕ್ಷಕರ ಮತ್ತು ಸೆಕ್ಯೂರಿಟಿ ಗಾರ್ಡಗಳು ತಮ್ಮ ಮೊಬೈಲ್ ಮೂಲಕ ಪಾಲಕರಿಗೆ ತಮ್ಮ ಮಕ್ಕಳೊಂದಿಗೆ ಮಾತನಾಡಿಸುವ ಮೂಲಕ ಭಯದ ಅಂತರ ಕಡಿಮೆಗೊಳಿಸುವ ಸನ್ನವೇಷಗಳು ನಡೆದವು.

**ನೀರಿನಲ್ಲಿ ಸಿಲುಕಿದ ಶಾಲಾ ವಾಹನ.....**

ನಗರದ ದಿ.ಸಿದ್ದು ನ್ಯಾಮಗೌಡ ಬೈಪಾಸ್ ರಸ್ತೆಯಲ್ಲಿನ ಸರಕಾರಿ ನೂತನ ವಿದ್ಯಾಲಯ ಶಾಲೆ ಹತ್ತಿರ ಅವೈಜ್ಞಾನಿಕ ರೀತಿಯಲ್ಲಿ ನಿರ್ಮಿಸಿರುವ ರಸ್ತೆ ಜಲಾವೃತಗೊಂಡಿದೆ. ಜಲಾವೃತಗೊಂಡು ರಸ್ತೆ ಸಂಚಾರ ಸ್ಥಗಿತಗೊಂಡ ರಸ್ತೆಯಲ್ಲಿ ನಗರದ ಖಾಸಗಿ ಶಾಲೆ ಬಸ್ ಸಿಲುಕಿಕೊಂಡಿದೆ ಶಾಲೆಯಿಂದ ಮಕ್ಕಳನ್ನು ಮನೆಗೆ ತಲುಪಿಸುವ ಬಸ್ ಎರಡು ಫೂಟ್ ನೀರಿನಲ್ಲಿ ಕಟ್ಟು ನಿಂತಿದೆ. ಬಸ್ಸಿನಲ್ಲಿ ವಿದ್ಯಾರ್ಥಿಗಳು ಸಿಲುಕಿಕೊಂಡಿದ್ದು ರಕ್ಷಣೆ ಆಗಬೇಕಾಗಿದೆ. ಘಟನಾ ಸ್ಥಳಕ್ಕೆ ಶಹರಠಾಣೆ ಪಿಎಸ್.ಐ ಅನೀಲ ಕುಂಬಾರ ಸಹಿತ ವಿವಿಧ ಇಲಾಖೆಗಳ ಅಧಿಕಾರಿಗಳು ಆಗಮಿಸುತ್ತಿದ್ದಾರೆ. ಈ ರಸ್ತೆ ಕುರಿತು ವಿಶೇವ ವರದಿಗಳು ಪತ್ರಿಕೆಯಲ್ಲಿ ಪ್ರಕಟಗೊಂಡರು ಸಂಬಂಧಿಸಿದ ಅಧಿಕಾರಿಗಳು ಇನ್ನೂವರೆಗೆ ಎಚ್ಚತ್ತುಗೊಂಡಿಲ್ಲ.

# ದಲಿತ ಸಂಘರ್ಷ ಸಮೀತಿಗೆ ರಾಜ್ಯ ಸಂಚಾಲಕರಾಗಿ ಆಯ್ಕೆ

**ಜಮಖಂಡಿ:** ಬೆಂಗಳೂರಿನಲ್ಲಿ ಜೈಭೀಮ್ ಭವನದಲ್ಲಿ ನಡೆದ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ರಾಜ್ಯಸಭೆಯಲ್ಲಿ ಬಾಗಲಕೋಟೆ ಜಿಲ್ಲೆಯ ಜಮಖಂಡಿ ನಗರದ ಶಾಮರಾವ ಘಾಟಗೆ ಅವರನ್ನು ನೂತನ ರಾಜ್ಯ ಸಂಚಾಲಕರಾಗಿ ಒಮ್ಮತದಿಂದ ಆಯ್ಕೆ ಮಾಡಲಾಗಿದೆ.

ದಿ.ಲಕ್ಷ್ಮೀನಾರಾಯಣ ನಾಗ್ವಾರ ಅವರ ನಿಧನದಿಂದ ತೆರವಾಗಿದ್ದ ಸ್ಥಾನಕ್ಕೆ ಅನುಭವಿ ಹಿರಿಯ ಹೋರಾಟಗಾರ ಶಾಮರಾವ ಘಾಟಗೆ ಅವರನ್ನು ನೇಮಕ ಮಾಡಲು ಸರ್ವ ಸದಸ್ಯರು ಒಪ್ಪಿಗೆ ಸೂಚಿಸಿದ್ದಾರೆ.

ಅಗಲಿದ ಧೀಮಂತ ನಾಯಕ ಲಕ್ಷ್ಮೀನಾರಾಯಣ ನಾಗವಾರ ಹಾಗೂ ದಲಿತ ಮುಖಂಡ ದೇವೇಂದ್ರ ಹೆಗಡೆ ನಿಧನಕ್ಕಾಗಿ ಒಂದು ನಿಮಿಷ ಮೌನ ಆಚರಿಸಿದ ನಂತರ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಭಾವಚಿತ್ರಕ್ಕೆ ನಮನ ಸಲ್ಲಿ ಮಾತಾಡಿದ ನೂತನ ರಾಜ್ಯ ಸಂಚಾಲಕ ಶಾಮರಾವ ಘಾಟಗೆ ರಾಜ್ಯದಲ್ಲಿ ದಲಿತರು ಹಾಗೂ ದಲಿತ ಮಹಿಳೆಯರ ಮೇಲೆ ದೌರ್ಜನ್ಯ ಹೆಚ್ಚಾಗುತ್ತಿದ್ದು ಅದರ ವಿರುದ್ಧ ಸೂಕ್ತವಾದ ಪ್ರತಿಭಟನೆಯನ್ನು ಜಿಲ್ಲಾ ಕೇಂದ್ರಗಳಲ್ಲಿ ಹಮ್ಮಿಕೊಳ್ಳಲಾಗುವುದು.

ದಲಿತ ವಿದ್ಯಾರ್ಥಿಗಳ ಹಾಸ್ಟೆಲ್ ಅವ್ಯವಸ್ಥೆ ಬಗ್ಗೆ ಪ್ರತಿಭಟನೆ ಮುಖಾಂತರ ಸರ್ಕಾರದ ಗಮನ ಸೆಳೆಯಲಾಗುವುದು. ಮುಂಬರುವ ದಿನಗಳಲ್ಲಿ ವಿಚಾರ ಸಂಕಿರಣ ಮತ್ತು ಅಧ್ಯಯನ ಶಿಬಿರ ಮುಖಾಂತರ ದಲಿತ ಯುವಕರಲ್ಲಿ ಜಾಗೃತಿ ಮೂಡಿಸಲಾಗುವುದು. ರಾಜ್ಯದ ಎಲ್ಲ ಜಿಲ್ಲೆಗಳಿಗೆ ಭೇಟಿ ನೀಡಿ ಸಂಘಟನೆ ಬಲಿಷ್ಠ ಗೊಳಿಸಲು ರಾಜ್ಯದ ಎಲ್ಲ ಪದಾಧಿಕಾರಿಗಳೊಂದಿಗೆ ಚರ್ಚೆ ಮಾಡುತ್ತೇನೆ ಎಂದರು.




ಹಿರಿಯ ದಲಿತ ನಾಯಕ ಬಿ.ಬಸವರಾಜ್ ಮತ್ತು ವಿಚಾರವಾದಿಗಳಾದ ಎಂ.ರಾಮಯ್ಯ, ರಾಜ್ಯ ಸಂಘಟನಾ ಸಂಚಾಲಕ ಕೆಂಪಣ್ಣ ಸಾಗ್ಯ, ವೆಂಕಟೇಶಮೂರ್ತಿ ಆನೇಕಲ್, ರಾಜ್ಯ ಮಹಿಳಾ ಒಕ್ಕೂಟದ ಅಧ್ಯಕ್ಷ ಶೋಭಾ ಕಟ್ಟಿಮನಿ, ಮಹಿಳಾ ಒಕ್ಕೂಟದ ರಾಜ್ಯ ಸಂಘಟನಾ ಸಂಚಾಲಕಿ ಗೌರಮ್ಮ ದೊಡಮನಿ, ವೈ.ಕೆ.ಗುಡ್ಡಮ್ಮನವರ, ಬಸಮ್ಮ ಕಾಳೆ, ಪ್ರಮೀಳಾ ಕೊಡಗು, ಜಯಶ್ರೀ ಕಾಂಬಳೆ,ಶೋಭಾ ಮಂಡ್ಯಾ, ರಾಹುಲ ತಳಕೇರಿ ಅವರನ್ನು ದಲಿತ ಕಲಾ ಮಂಡಳಿಗೆ ಸಂಚಾಲಕರನ್ನಾಗಿ ನೇಮಕ ಮಾಡಲಾಯಿತು. ರಾಜ್ಯ ಸಂಘಟನಾ ಸಂಚಾಲಕರಾಗಿ ಕೆಂಪಣ್ಣ ಸಾಗ್ಯ, ಚಂದ್ರು ಚಕ್ರವರ್ತಿ, ವೆಂಕಟೇಶಮೂರ್ತಿ, ಆನೇಕಲ ಪ್ರಕಾಶ, ಕೆಲ್ಲೂರ ಪ್ರಭು ಮೇಗಳಮನಿ ಹಾಗೂ ರಾಜ್ಯ ಖಜಾಂಚಿ ರಾಮಸ್ವಾಮಿ ಗುಟ್ಟೆ, ಕಾರ್ಯಕಾರಿ ಸಮಿತಿ ಸದಸ್ಯರು ಬಿ.ಬಸವರಾಜ, ಯು.ರಾಮಯ್ಯ ತುಮಕೂರು. ಮೈಸೂರು ವಿಭಾಗೀ ಸಂಚಾಲಕ ಆನಂದ ಬಳ್ಳಾರಿ, ಸಂಘಟನಾ ಸಂಚಾಲಕ ವೀರೇಂದ್ರ ಕೊಡಗು, ರಮಾನಂದ ತಳಕೇರಿ ಮತ್ತು ಬೆಳಗಾವಿ ವಿಭಾಗೀಸಂಚಾಲಕ ರಮೇಶ ಸಣ್ಣಕ್ಕಿ, ಸಂಘಟನಾ ಸಂಚಾಲಕ ದೇವೇಂದ್ರ ಹಾದಿಮನಿ, ಹನಮಂತ ಚಿಮ್ಮಲಗಿ ಮತ್ತು ತೌಶಿಫ್ ಅಹಮದ ದೇಸಾಯಿ ಅಲ್ಪಸಂಖ್ಯಾತ ವಿಭಾಗ ಸಹಿತ ವಿವಿಧ ವಿಭಾಗಕ್ಕೆ ನೂತನ ರಾಜ್ಯ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು ವೇದಿಕೆಯಲ್ಲಿ ವಿಜಯಪುರ ಜಿಲ್ಲಾ ಸಂಚಾಲಕ ಚಂದ್ರಕಾಂತ ಸಿಂಗೆ, ಕಲ್ಬುರ್ಗಿ ವಿಭಾಗೀಯ ಸಂಚಾಲಕ ಚಂದ್ರು ಚಕ್ರವರ್ತಿ, ಪ್ರಭು ಮೇಗಳಮನಿ, ರಾವುತ ತಳಕೇರಿ, ದೇವೇಂದ್ರ ಹಾದಿಮನಿ, ರಾಜ್ಯದ ಎಲ್ಲ ಜಿಲ್ಲಾ ಸಂಚಾಲಕರು, ಜಿಲ್ಲಾ ಪದಾಧಿಕಾರಿಗಳು, ಮಹಿಳಾ ಪದಾಧಿಕಾರಿಗಳು ಮತ್ತು ದಲಿತ ವಿದ್ಯಾರ್ಥಿಗಳು ಇದ್ದರು.

# ರೈತ ಕ್ಷೇತ್ರ ಪಾಠಶಾಲೆ ಕಾರ್ಯಕ್ರಮ



**ಹಳ್ಳೂರ:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ ಸಿ ಟ್ರಸ್ಟ್ ( ರಿ ) ಮೂಡಲಗಿ ಇವರ ಆಶ್ರಯದಲ್ಲಿ ರಾಜಾಪುರ ವಲಯದ ಗಣೇಶವಾಡಿ ಕಾರ್ಯಕ್ಷೇತ್ರದಲ್ಲಿ ನರ್ಸರಿ ರಚನೆ ರೈತ ಕ್ಷೇತ್ರ ಪಾಠಶಾಲೆ ಕಾರ್ಯಕ್ರಮವು ಹಮ್ಮಿಕೊಳ್ಳಲಾಯಿತು. ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಬರ್ಡ್ಸ್ ಕೃಷಿ ವಿಜ್ಞಾನ ಕೇಂದ್ರದ ಡಾ ಪರಶುರಾಮ್ ಪಾಟೀಲ. ತೋಟಗಾರಿಕೆ ವಿಜ್ಞಾನಿ ಇವರು ನರ್ಸರಿ ರಚನೆ ಬಗ್ಗೆ ಪಾಲಿ ಹೌಸ್ ಮಾಹಿತಿ ಹಸಿರು ಮನೆ ರಚನೆ ಬಗ್ಗೆ, ಕಬ್ಬಿನಲ್ಲಿ ಅಂತರ ಬೆಳೆಯಾಗಿ ತರಕಾರಿ ಬೆಳೆಯುವ ಬಗ್ಗೆ ಎರೆಹುಳ ಗೊಬ್ಬರ ಪೂರ್ಣ ಮಾಹಿತಿ ನೀಡಿದರು.

ಕೃಷಿ ಮೇಲ್ವಿಚಾರಕರಾದ ಮೈಲಾರೆಪ್ಪ ಪೈಲಿ ಇವರು ಪ್ರಸ್ತಾವಿಕವಾಗಿ ಮಾತನಾಡಿ ಯೋಜನೆ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಸ್ವ ಸಹಾಯ, ಸಂಘ ದ ಸದಸ್ಯರು.ರೈತರಾದ ಮಾರುತಿ ಜಾಧವ. ದುಂಡಪ್ಪ ಮುಲಿಮನಿ .ಸೇರಿದಂತೆ ಅನೇಕರು ಭಾಗವಹಿಸಿದ್ದರು. ಸೇವಾ ಪ್ರತಿನಿಧಿಯಾದ ಮಹಾದೇವಿ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಮೈಲಾರಪ್ಪ ಪೈಲಿ ಸ್ವಾಗತಿಸಿದರು. ಆನಂದ್ ಮಂಟೂರ್ ವಂದಿಸಿದರು.

# ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಆರ್ಥಿಕ ಸಾಕ್ಷಾರತೆ ಜಾಗೃತಿ

**ಬೆಳಗಾವಿ:** ದೇಶದ ಅಭಿವೃದ್ಧಿ ಜೊತೆಗೆ ಹಣಕಾಸಿನ ವ್ಯವಹಾರದ ಸಾಕಷ್ಟು ಬದಲಾವಣೆಯಾಗಿದೆ. ಹೀಗಾಗಿ ಪ್ರತಿಯೊಬ್ಬರಿಗೂ ಆರ್ಥಿಕ ಜಾಗೃತಿ ಅವಶ್ಯವಾಗಿದೆ. ಇದರಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ಸಹಕಾರಿಯಾಗಲಿದೆ ಎಂದು ಪ್ರೊ. ಎಸ್. ಬಿ ಆಕಾಶ್ ಹೇಳಿದರು.

ವಾಣಿಜ್ಯಶಾಸ್ತ್ರ ಅಧ್ಯಯನ ವಿಭಾಗ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ ಬೆಳಗಾವಿ ಇವರು ಪಿಎಂ ಉಷಾ ಅಡಿಯಲ್ಲಿ ಡಿ.ಎಂ. ಎಸ್ ಮಂಡಲ್ ಬಾಬುರಾವ್ ಕಾಕತ್ಕರ್ ಕಾಲೇಜಿನಲ್ಲಿ ಪದವಿಪೂರ್ವ ವಿದ್ಯಾರ್ಥಿಗಳಿಗಾಗಿ ಒಂದು ದಿನದ ಸಾಕ್ಷರತಾ ಜಾಗೃತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮವನ್ನು ಪ್ರೊ. ಎಸ್. ಬಿ ಆಕಾಶ್ ವಾಣಿಜ್ಯ ನಿಕಾಯದ ಡೀನರು ಉದ್ಘಾಟಿಸಿದರು

ದೇಶದಲ್ಲಿ ಹಣಕಾಸು ಹಾಗೂ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಅದ್ಭುತವಾದ ಬದಲಾವಣೆ ಕಂಡು ಬರುತ್ತಿದ್ದು, ಬದಲಾವಣೆಗೆ ನಾವು ಹೊಂದಿಕೊಂಡು ಆರ್ಥಿಕ ಸಾಕ್ಷ ರತೆಯನ್ನು ಪಡೆಯಬೇಕೆಂದು. ಹಣಕಾಸಿನ ಸಾಕ್ಷರತೆಯು ಒಬ್ಬ ವ್ಯಕ್ತಿಯ ದೈನಂದಿನ ಜೀವನದಲ್ಲಿ ಮತ್ತು ದೇಶದ ಆರ್ಥಿಕ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅಭಿಪ್ರಾಯಪಟ್ಟರು. ಹಣಕಾಸಿನ ಹಾಗೂ ಬ್ಯಾಂಕಿಂಗ್ ಪರಿಕಲ್ಪನೆಯ ಬಗ್ಗೆ ವಿವರವಾಗಿ ತಿಳಿಸಿ ಕಾಲಕ್ಕೆ ತಕ್ಕಂತೆ ತಮ್ಮ ಜ್ಞಾನ ಹೆಚ್ಚಿಸಿಕೊಳ್ಳುವ ಅಗತ್ಯತೆ ಇದೆ ಎಂದರು. ಪಿಎಂ ಉಷಾ ನೋಡಲ್ ಅಧಿಕಾರಿಯಾದ ಡಾ. ನಂದಿನಿ ದೇವರಮನಿ ಮಾತನಾಡಿ, ಪಿಎಂ ಉಷಾ ಮೇರು ಕುರಿತು ಮಾಹಿತಿ ನೀಡಿದರು. ಪ್ರೊ. ಎ. ಎಸ್ ಶಿರಾಳಶೇಟ್ಟಿ ಮಾತನಾಡಿ, ಆರ್ಥಿಕ ಸಾಕ್ಷರತೆ ಮತ್ತು ಹೂಡಿಕೆಯ ಕುರಿತು ವಿಸ್ತಾರವಾದ ಉಪನ್ಯಾಸ ನೀಡಿದರು ಹಾಗೂ ವಿದ್ಯಾರ್ಥಿಗಳಿಗೆ ವಿವಿಧ ಯೊಗ್ಯವಾದ ಹೂಡಿಕೆ ಬಗ್ಗೆ ಮಾಹಿತಿ ಕೊಟ್ಟರು.ಒಂದು ದಿನದ ಸಾಕ್ಷರತಾ ಜಾಗೃತಿ ಕಾರ್ಯಕ್ರಮದಲ್ಲಿ 300 ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕ, ಬೋಧಕೇತರ ಸಿಬ್ಬಂದಿಗಳು ಇದ್ದರು.



ಈ ಸಂದರ್ಭದಲ್ಲಿ ಡಾ.ನಂದಿನಿ ದೇವರಮನಿ, ಡಾ. ಎಮ್. ಎಮ್. ಮುನಶಿ, ಪ್ರೊ. ಎಮ್. ವಿ. ಶಿಂದೆ, ಪ್ರೊ. ಆನಂದ ಪಾಟೀಲ, ಡಾ. ಎಮ್. ಎಸ್. ಪಾಟೀಲ, ಸಂಶೋಧನಾ ವಿದ್ಯಾರ್ಥಿ ಅಶ್ವತ. ಆರ್ ಸ್ವಾಗತಿಸಿದರು. ವಿದ್ಯಾರ್ಥಿನಿ ಚಿನ್ನಾ ಬಡಿಗೇರ ನಿರೂಪಿಸಿದರು. ಕ್ಷಿತೀಜಾ ಕಣಗಲಿ ವಂದಿಸಿದರು.

# ನಾಳೆ ಸಂಗೀತ ಸಂಜೆ ಕಾರ್ಯಕ್ರಮ

**ಯರಗಟ್ಟಿ:** ಸಮೀಪದ ಯರಝರ್ವಿ ಗ್ರಾಮದಲ್ಲಿ ಅ. 11 ರಂದು ಸವದತ್ತಿ ಯಲ್ಲಮ್ಮ ಮತಕ್ಷೇತ್ರದ ಶಾಸಕ ವಿಶ್ವಾಸ ವೈದ್ಯ ಅವರ 44ನೇ ಹುಟ್ಟು ಹಬ್ಬವನ್ನು ಆಯೋಜಿಸಲಾಗಿದೆ ಎಂದು ಯರಗಟ್ಟಿ ಎಪಿಎಂಸಿ ಅಧ್ಯಕ್ಷ ನೀಲಕಂಠ ಶೀದಬಸನ್ನವರ ಹೇಳಿದರು.

ಯರಝರ್ವಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು ಅ. 11 ರಂದು ವಿಶ್ವಾಸಣ್ಣಾ ಅಭಿಮಾನಿ ಬಳಗದಿಂದ ಶಾಸಕರ ಹುಟ್ಟುಹಬ್ಬದ ನಿಮಿತ್ಯ ಸಂಗೀತ ಸಂಜೆ, ಸಾಧಕರಿಗೆ ಸನ್ಮಾನ ವಿವಿಧ ಕಾರ್ಯಕ್ಗರಮಗಳನ್ನು ಹಮ್ಮಿಕೊಳ್ಳಲಾಗಿದೆ ಸುತ್ತಮುತ್ತಲಿನ ನಾಗರಿಕರು, ವಿವಿಧ ಸಂಘಟನೆಗಳ ಹಾ ಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಮಹಿಳಾ ಸಂಘ ಸಂಸ್ಥೆಗಳ, ಗ್ರಾ. ಪಂ. ಆನಪ್ರತಿನಿಧಿಗಳು, ಪಕ್ಷದ ಕಾರ್ಯಕರ್ತರು ಈ ಕಾರ್ಯಕ್ರಮದಲ್ಲಿ ಬಾಗವಹಿಸಬೇಕು ಎಂದು ಹೇಳಿದರು. ಈ ವೇಳೆ ಕಾಂಗ್ರೆಸ್ ಮುಖಂಡ ಪ್ರಕಾಶ ವಾಲಿ, ಜಿಲ್ಲಾ ಬೇಮುಲ ನಿರ್ದೇಶಕ ಶಂಕರ ಇಟ್ನಾಳ, ಪ. ಪಂ. ಸದಸ್ಯ ನಿಖಿಲ ಪಾಟೀಲ, ಸವದತ್ತಿ ಎಪಿಎಂಸಿ ಅಧ್ಯಕ್ಷ ಚಂದ್ರು ಜಂಬ್ರಿ, ಅಶೋಕ ಗಡಮ್ಮನ್ನವರ, ಸತ್ಯೆಪ್ಪ ತಲ್ಲೂರ ಸದೇರಿದಂತೆ ಇತರರಿದ್ದರು.



# 13ಕ್ಷೇತ್ರಗಳಲ್ಲಿ ಗೆಲುವ ವಿಶ್ವಾಸ: ಬಾಲಚಂದ್ರ ಜಾರಕಿಹೊಳಿ

**ಬೆಳಗಾವಿ.** ಇಂದು ನಮ್ಮ ಬಣದ 7 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು ಉಳಿದ 6 ಜನ ಬರುವ ಅ. 11 ರಂದು ನಾಮಪತ್ರ ಸಲಿಕೆ ಮಾಡುತ್ತಾರೆ. ಹುಕ್ಕೇರಿ ತಾಲೂಕಿನಲ್ಲಿ ಗೆಲ್ಲುವ ಪ್ರಯತ್ನ ಮಾಡುತ್ತಿದ್ದೇವೆ. ಹುಕ್ಕೇರಿ ವಿದ್ಯುತ್ ಸಹಕಾರಿ ಸಂಘದ ಚುನಾವಣೆ ಗೆಲುವು ಬೆಳಗಾವಿ ಡಿ ಸಿ ಸಿ ಬ್ಯಾಂಕ ಚುನಾವಣೆ ಮೇಲೆ ಪ್ರಭಾವ ಬೀರದು ಮತ್ತು ಅದು ಒಂದು ತಾಲೂಕ ಮಟ್ಟದ ಚುನಾವಣೆ ಇದು ಜಿಲ್ಲಾ ಮಟ್ಟದ ಚುನಾವಣೆ ಆಗಿರುವದರಿಂದ ನಮ್ಮ ಬೆಂಬಲಿತ 13 ಜನರ ಆಯ್ಕೆ ಖಚಿತ ಎಂದರು.

ರಮೇಶ ಕತ್ತಿ ನಮ್ಮ ಕುಟುಂಬದ ಬಗ್ಗೆ ಅವಹೇಳನವಾಗಿ ಮಾತನಾಡಿದ್ದಾರೆ ಅದಕ್ಕೆ ಕಾನೂನು ಮುಖಾಂತರ ಕ್ರಮ ತೆಗೆದುಕೊಳ್ಳುತ್ತೇವೆ. ಈ ಒಂದು ಬ್ಯಾಂಕ ಯಾರ ಅಪ್ಪನ ಅಸ್ತಿ ಅಲ್ಲ ಎಂಬ ರಮೇಶ ಕತ್ತಿ ಮಾತಿಗೆ ಹೌದು ಅದು ಯಾರ ಅಪ್ಪನ ಬ್ಯಾಂಕು ಅಲ್ಲ ಇದು ರೈತರ ಬ್ಯಾಂಕಾಗಿದೆ ಎಂದರು. ಎಲ್ಲ ಕ್ಷೇತ್ರಗಳಲ್ಲಿ ಸ್ಪರ್ದಿಸುವ ಸ್ವಾತಂತ್ರ್ಯ ಎಲ್ಲರಿಗೂ ಇದೆ ಬಂದರೆ ಸ್ವಾಗತ ಮತ್ತು ಅವರಿಗೆ ಒಳ್ಳೇದು ಆಗಲಿ ಎಂದು ಶಾಸಕ ಹಾಗೂ ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಹೇಳಿದರು.



ಅವರು ಗುರುವಾರದಂದು ಡಿಸಿಸಿ ಬ್ಯಾಂಕ ಮುಖ್ಯ ಶಾಖೆಯಲ್ಲಿ ಅವರ ಬಣದ ಸದಸ್ಯರಾದ ಅಣ್ಣಾಸಾಹೇಬ ಜೊಲ್ಲೆ,(ನಿಪ್ಪಾಣಿ ತಾಲೂಕ) ಮಹಾಂತೇಶ ದೊಡ್ಡಗೌಡರ (ಬೈಲಹೊಂಗಲ ತಾಲೂಕ), ಅರವಿಂದ ಪಾಟೀಲ (ಖಾನಾಪುರ ತಾಲೂಕ) ವಿಶ್ವಾಸ ವೈದ್ಯ (ಯರಗಟ್ಟಿ ತಾಲೂಕ)ವಿಕ್ರಂ ಇನಾಮದಾರ (ಚ. ಕಿತ್ತೂರು ತಾಲೂಕ)ವೀರೂಪಾಕ್ಷ ಮಾಮನಿ ( ಸವದತ್ತಿ ತಾಲೂಕ )ಅಪ್ಪಸಾಹೇಬ ಕುಲಗುಡೆ (ರಾಯಭಾಗ ತಾಲೂಕ) ಇವರುಗಳು ಚುನಾವಣೆ ಅಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದ ಬಳಿಕ ಮಾತನಾಡಿ ಎಲ್ಲ 52 ಸಹಕಾರ ಪ್ರತಿನಿದಿಗಳನ್ನು ಕರೆತಂದು ನಾಮಪತ್ರ ಸಲ್ಲಿಸಿದ್ದಾರೆ. ನಾವು ಪ್ರತಿರೋಧ ಒಡ್ಡುಟ್ಟಿದ್ದು ಗೆಲುತ್ತೇವೆ ಎಂದರು.

ಮಾಜಿ ಸಂಸದ ಅಣ್ಣಾಸಾಹೇಬ ಜೊಲ್ಲೆ ಮಾತನಾಡಿ ಕೆಟ್ಟ ಜನ ಜೊತೆ ಸಹವಾಸ ಮಾಡಬೇಡಿರಿ ಎಂದಿದ್ದಾರೆ ನಮ್ಮಗೂ ಗೊತ್ತು ಯಾರು ಕೆಟ್ಟವರು, ಯಾರು ಒಳ್ಳೆಯವರು ನಾವು ಸಹಕಾರಿ ರಂಘ ಬೆಳೆಸಿ ಮುಂದೆ ಬಂದಿದ್ದೇವೆ ಇವರಿಂದ ಪಾಠ ಕಲಿಯುವ ಅವಶ್ಯಕತೆ ಇಲ್ಲ. ಮತ್ತು ನಮ್ಮ ವಿರುದ್ಧ ಉತ್ತಮ ಪಾಟೀಲ ಸ್ಪರ್ಧೆ ಮಾಡುತ್ತಿದ್ದು ಅದ್ದರಿಂದ ಎಲ್ಲರಿಗೂ ಸ್ಪರ್ಧೆ ಮಾಡುವ ಅವಕಾಶ ಇದೆ ಎಂದರು.

ಈ ಸಂದರ್ಭದಲ್ಲಿ ಎಲ್ಲ ನಾಮಪತ್ರ ಸಲ್ಲಿಸಿದ 7 ಜನ ಅಭ್ಯರ್ಥಿಗಳು ಮತ್ತು ಅವರ ಅಭಿಮಾನಿಗಳು ಪಾಲ್ಗೊಂಡಿದ್ದರು.

# ಬೆಳಗಾವಿ-ಮೀರಜ್ ರೈಲನ್ನು ಪ್ಯಾಸೆಂಜರ್ ರೈಲಾಗಿ ಬದಲಾವಣೆ

**ಬೆಳಗಾವಿ:** ಜಿಲ್ಲೆಯ ಜನರ ಬಹುದಿನಗಳ ಬೇಡಿಕೆಯಾಗಿದ್ದ ಬೆಳಗಾವಿ-ಮೀರಜ್ ನಡುವೆ ಪ್ರತಿದಿನ ಸಂಚರಿಸುತ್ತಿದ ವಿಶೇಷ ಏಕ್ಸ್‌ಪ್ರಸ್ ಪ್ಯಾಸೆಂಜರ್ ರೈಲನ್ನು ಪ್ಯಾಸೆಂಜರ್ ರೈಲಾಗಿ ಬದಲಾವಣೆ ಮಾಡಿ ಕೇಂದ್ರ ರೈಲ್ವೆ ಮಂಡಳಿ ಆದೇಶಿಸಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ತಿಳಿಸಿದ್ದಾರೆ.



ಗುರುವಾರದಂದು ಪತ್ರಿಕಾ ಹೇಳಿಕೆ ನೀಡಿದ ಸಂಸದ ಈರಣ್ಣ ಕಡಾಡಿ ಅವರು ಕರೋನಾ ಸಂದರ್ಭದಲ್ಲಿ ಬೆಳಗಾವಿ ಮಿರಜ್ ಪ್ಯಾಸೆಂಜರ್ ರೈಲು ಸಂಚಾರವನ್ನು ನಿಲ್ಲಿಸಲಾಗಿತ್ತು. ಸತತ ನನ್ನ ಪ್ರಯತ್ನ ಫಲವಾಗಿ ಕಳೆದ ಎರಡು ವರ್ಷದಿಂದ ವಿಶೇಷ ಏಕ್ಸ್‌ಪ್ರಸ್ ಪ್ಯಾಸೆಂಜರ್ ರೈಲು ಸಂಚರಿಸುತ್ತಿದೆ. ಈಗ ಪ್ರತಿದಿನ ಪ್ಯಾಸೆಂಜರ್ ರೈಲಾಗಿ ಸಂಚರಿಸಲಿದೆ ಇದರಿಂದ ಟಿಕೆಟ್ ಬೆಲೆ ಕಡಿತಗೊಂಡು, ಉದ್ಯೋಗಿಗಳು, ಕಾರ್ಮಿಕರು, ವಿದ್ಯಾರ್ಥಿಗಳು, ವೈದ್ಯಕೀಯ ಚಿಕಿತ್ಸೆಗಾಗಿ ಬರುವವರಿಗೆ ಅನುಕೂಲಕರವಾಗಲಿದೆ ಎಂದರು. ರೈಲಿನ ಸಮಯ ಮುಂಜಾನೆ 05.45 ಕ್ಕೆ ಬೆಳಗಾವಿಯಿಂದ ಹೊರಟು ಮುಂಜಾನೆ 09.00 ಗಂಟೆಗೆ ಮಿರಜ್ ತಲುಪಲಿದೆ. ಮಿರಜ್ ನಿಂದ ಮು 09.55 ಕ್ಕೆ ಹೊರಟು ಮಧ್ಯಾಹ್ನ 01.00 ಗಂಟೆಗೆ ಬೆಳಗಾವಿಗೆ ತಲುಪಲಿದೆ ಮತ್ತು ಮಧ್ಯಾಹ್ನ 01.30 ಕ್ಕೆ ಬೆಳಗಾವಿಯಿಂದ ಹೊರಟು ಸಂಜೆ 04.30 ಗಂಟೆಗೆ ಮಿರಜ್ ತಲುಪಲಿದೆ. ಮಿರಜ್ ನಿಂದ ರಾತ್ರಿ 07.10 ಕ್ಕೆ ಹೊರಟು ರಾತ್ರಿ 10.25 ಗಂಟೆಗೆ ಬೆಳಗಾವಿಗೆ ತಲುಪಲಿದೆ. ಪ್ರತಿಧಿನ ಎರಡು ಟ್ರಿಪ್ ಸಂಚರಿಸಲಿದೆ ಎಂದರು. ನನ್ನ ಮನವಿಗೆ ಸ್ಪಂದಿಸಿ, ಬೆಳಗಾವಿ-ಮೀರಜ್ ಪ್ಯಾಸೆಂಜರ್ ರೈಲಾಗಿ ಆದೇಶ ನೀಡಿದ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ, ರಾಜ್ಯ ರೈಲ್ವೆ ಸಚಿವ ವಿ. ಸೋಮಣ್ಣ ಅಧಿಕಾರಿಗಳಿಗೆ ಈ ಭಾಗದ ಜನತೆಯ ಪರವಾಗಿ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸಲಾಗುವುದು ಎಂದರು.

# ರಾಷ್ಟ್ರೀಯ ಮಟ್ಟದ ಪ್ಯಾರಾ ಬ್ಯಾಡ್ಮಿಂಟನ್‌ನಲ್ಲಿ ಸಾಧನೆ



**ಬೈಲಹೊಂಗಲ:** ಉತ್ತರ ಪ್ರದೇಶದ ಲಕ್ನೋದಲ್ಲಿ ಈಚೆಗೆ ನಡೆದ ರಾಷ್ಟ್ರೀಯ ಮಟ್ಟದ ಪ್ಯಾರಾ ಬ್ಯಾಡ್ಮಿಂಟನ್‌ದಲ್ಲಿ ಕರ್ನಾಟಕ ರಾಜ್ಯದಿಂದ ಪ್ರತಿನಿಧಿಸಿ ಕಂಚಿನ ಪದಕ ಪಡೆದ ಬೈಲಹೊಂಗಲದ ಹೊಸೂರ ರಸ್ತೆಯಲ್ಲಿನ ಕಿತ್ತೂರು ರಾಣಿ ಚನ್ನಮ್ಮ ಶಿಕ್ಷಣ ಸಂಸ್ಥೆಯ ಎಂ.ವಿ.ಉಪ್ಪಿನ & ಎನ್. ಎನ್.ಹಣಮಂತಗಡ ಸೆಕೆಂಡರಿ ಇಂಗ್ಲಿಷ ಮಿಡಿಯಂ ಸ್ಕೂಲದ ಹತ್ತನೇ ವರ್ಗದ ವಿದ್ಯಾರ್ಥಿ ಪ್ರಜ್ವಲ ಅಂಬಡಗಟ್ಟಿ ಇವನ ಸಾಧನೆ ಮನಗಂಡು ಶಾಸಕ ಮಹಾಂತೇಶ ಕೌಜಲಗಿ ಅವರು ಗೃಹ ಕಚೇರಿಯಲ್ಲಿ ಬುಧವಾರ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ಜನ್ಮಟ್ಟಿ, ಸರಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮೀತಿಯ ತಾಲೂಕಾಧ್ಯಕ್ಷ ಡಾ.ಮಹಾಂತೇಶ ಕಳ್ಳಿಬಡ್ಡಿ, ಪಂಚಾಯತ ರಾಜ್ಯ ಇಲಾಖೆಯ ಅಭಿಯಂತರ ಮಹೇಶ ಹೂಲಿ, ತಾಲೂಕಾ ಕಜಾಪ ಮಾಧ್ಯಮ ಪ್ರತಿನಿಧಿ ಮಹಾಂತೇಶ ರಾಜಗೋಳಿ, ನಿರ್ಮಲಾ ರಾಜಗೋಳಿ, ಶಿವಾನಂದ ಸಂಬೋಜಿ ಮುಂತಾದವರು ಉಪಸ್ಥಿತರಿದ್ದರು.

# ಕಬ್ಬು ಬೆಳೆಗಾರರ ಪ್ರಮುಖ ಸಮಸ್ಯೆಗಳಿಗೆ ಪರಿಹಾರ ಒದಗಿಸಿದ ಜಿಲ್ಲಾಡಳಿತ

**ಕಾರವಾರ:** ಜಿಲ್ಲೆಯ ಕಬ್ಬು ಬೆಳೆಗಾರರ ಪ್ರಮುಖ ಎಲ್ಲಾ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಅವರಿಗೆ ಜಿಲ್ಲಾಡಳಿತದಿಂದ ಎಲ್ಲಾ ರೀತಿಯ ಬೆಂಬಲ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಭರವಸೆ ನೀಡಿದರು.

ಅವರು ಬುಧವಾರ ಹಳಿಯಾಳ ತಹಶೀಲ್ದಾರ್ ಕಚೇರಿ ಸಭಾಭವನದಲ್ಲಿ, 2025-26 ನೇ ಸಾಲಿನ ಕಬ್ಬು ಅರೆಯುವ ಹಂಗಾಮನ್ನು ಪ್ರಾರಂಭ ಮಾಡುವ ಬಗ್ಗೆ ಹಾಗೂ ಕಬ್ಬಿಗೆ ಸಂಬಂಧಿಸಿದ ಮತ್ತಿತರ ವಿಷಯಗಳ ಬಗ್ಗೆ ನಡೆದ ಸಭೆಯ ಅಧ್ಯಕತೆ ವಹಿಸಿ ಮಾತನಾಡಿದರು.

ಜಿಲ್ಲೆಯ ಕಬ್ಬು ಬೆಳೆಗಾರರ ಬಹುಕಾಲದ ಬೇಡಿಕೆಯಾದ ಕಬ್ಬು ಕಾರ್ಖಾನೆಯ ಮುಂಭಾಗದಲ್ಲಿ ಕಬ್ಬು ತೂಕ ಅಳತೆ ಮಾಡುವ ಯಂತ್ರ ಅಳವಡಿಕೆ ಬೇಡಿಕೆ ಕುರಿತಂತೆ ಕಾರ್ಖಾನೆಯ ಅಧಿಕಾರಿಗಳಿಗೆ ಇಂದೇ ಈ ಬಗ್ಗೆ ಸ್ಪಷ್ಟ ನಿರ್ಧಾರ ತಿಳಿಸುವಂತೆ ಸೂಚಿಸಿದ ಜಿಲ್ಲಾಧಿಕಾರಿ ಅವರ ಸೂಚನೆಯಂತೆ, ಈ ಬಾರಿಯ ಕಬ್ಬು ನುರಿಯುವ ಹಂಗಾಮು ಪ್ರಾರಂಭವಾಗುವ ಒಳಗೆ ಕಾರ್ಖಾನೆ ಮುಂಭಾಗದಲ್ಲೇ ತೂಕ ಮಾಡುವ ಯಂತ್ರವನ್ನು ಅಳವಡಿಸುವುದಾಗಿ ಕಾರ್ಖಾನೆ ಅಧಿಕಾರಿಗಳು ಸಭೆಯಲ್ಲಿ ಸ್ಪಷ್ಟ ಪಡಿಸಿದರು.

ಕಬ್ಬು ಕಟಾವಣೆ ಮಾಡಲಾದ 2023-24 ನೇ ಸಾಲಿನಲ್ಲಿ ರೈತರಿಂದ ಹೆಚ್ಚುವರಿ ಆಕರಣೆ ಮಾಡಲಾದ ಹೆಚ್ ಅಂಡ್ ಟಿ ದರ ರೂ. 256 ನ್ನು ರೈತರಿಗೆ ಮರುಪಾವತಿ ಮಾಡುವಂತೆ ಕಬ್ಬು ಆಯುಕ್ತರು ಆದೇಶ ಮಾಡಿದ್ದರು ಕೂಡಾ ಇದುವರೆಗೂ ಕಾರ್ಖಾನೇ ಅವರು ಪಾವತಿ ಮಾಡದೇ ಇರುವ ಬಗ್ಗೆ ರೈತ ಮುಖಂಡರು ದೂರಿದರು.



ಈ ದೂರಿನ ಕುರಿತಂತೆ, 2023-24 ರಲ್ಲಿನ ಹೆಚ್ಚುವರಿ ಮೊತ್ತ 256 ರೂ ಗಳಂತೆ ಒಟ್ಟು 26 ಕೋಟಿ ಮೊತ್ತವನ್ನು ಕಾರ್ಖಾನೆಯವರು ರೈತರಿಗೆ ನೀಡುವಂತೆ ಕಬ್ಬು ಆಯುಕ್ತರಿಂದ ನೀಡಿದ್ದ ಆದೇಶವನ್ನು ಪಾಲನೆ ಮಾಡಿಲ್ಲವೆಂದು ಪ್ಯಾಕ್ಟರಿಯವರಿಗೆ ಕಬ್ಬು ಆಯುಕ್ತರು ನೋಟಿಸ್ ನೀಡಿದ್ದು, ಕಾರ್ಖಾನೆಯವರು ಇದರ ವಿರುದ್ಧ ಹೈಕೋರ್ಟ್ ಮೊರೆ ಹೋಗಿದ್ದಾರೆ. ಅಲ್ಲಿ ಕೂಡ ಎರಡು ವಾರಗಳ ತಡೆಯಜ್ಞೆ ನೀಡಲಾಗಿದೆ. ಅದನ್ನು ಧಾರವಾಡದ ನ್ಯಾಯಾಲಯಕ್ಕೆ ತರಲು ಪ್ರಯತ್ನಿಸಲಾಗುತ್ತಿದೆ ಹಾಗೂ ಕಾರ್ಖಾನೆಯವರು ರೈತರಿಗೆ ಹೆಚ್ಚುವರಿ ಮೊತ್ತವನ್ನು ನೀಡಲು ಆದೇಶ ಹೊರಡಿಸುವಂತೆ ಕಬ್ಬು ಆಯುಕ್ತರಿಗೆ ಪತ್ರ ಬರೆಯಲಾಗಿದೆ ಎಂದರು.

ಕಳೆದ ವರ್ಷದಂತೆ ಈ ವರ್ಷ ಕೂಡ ಕಬ್ಬು ಕಟಾವನೆ ಕುರಿತು ಆದ್ಯತಾ ಪಟ್ಟಿ ಪ್ರಕಟ ಮಾಡಬೇಕು ಅದನ್ನು ಕಟ್ಟುನಿಟ್ಟಾಗಿ ಅನುಸರಿಸುವಂತೆ ಕಾರ್ಖಾನೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಅವರು ಇದನ್ನು ಉಲ್ಲಂಘನೆ ಮಾಡುವುದು ಕಂಡು ಬಂದಲ್ಲಿ ರೈತರು, ಪೊಲೀಸರಿಗೆ ಅಥವಾ ತಹಶೀಲ್ದಾರರಿಗೆ ಮಾಹಿತಿ ನೀಡಬಹುದು ಹಾಗೂ ಅಂತಹವರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ಜಿಲ್ಲೆಯಲ್ಲಿ ಪ್ರತಿ ವರ್ಷ ಮಳೆಗಾಲ ಸಮಯದಲ್ಲಿ ಹೆಚ್ಚಾಗಿ ರಸ್ತೆಗಳು ಹಾಳಗುವುದು ಸಾಮಾನ್ಯವಾಗಿದ್ದು, ಕಳೆದ ವರ್ಷ ಮಾಡಲಾದ ರಸ್ತೆಗಳು ಹಾಳಾಗಿರುವ ನಿರ್ದಿಷ್ಟ ರಸ್ತೆಗಳನ್ನು ಗುರಿತಿಸಲಾಗಿದ್ದು, ಅದನ್ನು ಗುತ್ತಿಗೆದಾರರೆ ನಿರ್ವಹಣೆ ಮಾಡಬೇಕು. ಸರ್ಕಾರದಿಂದ ಯಾವುದೇ ಹೆಚ್ಚುವರಿ ಅನುದಾನ ನೀಡುವುದಿಲ್ಲ ಒಂದು ವೇಳೆ ನಿರ್ವಹಣೆ ಮಾಡದೇ ಇದ್ದಲ್ಲಿ ಗುತ್ತಿಗೆದಾರರ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಲೋಕೋಪಯೋಗಿ ಇಲಾಖೆ ಹಾಗೂ ಪಂಚಾಯತ್ ರಾಜ್ ಇಂಜಿನೀಯರ್ ಇಲಾಖೆಯವರಿಗೆ ಸೂಚನೆ ನೀಡಿದ ಅವರು, ರೈತರಿಗೆ ಅನುಕೂಲವಾಗುವಂತೆ ಕಾರ್ಖಾನೆಗಳು ಆರಂಭವಾಗುವ ಮುಂಚಿತವಾಗಿ ಈ ಭಾಗದ ರಸ್ತೆಗಳನ್ನು ಸರಿಪಡಿಸಲು ತಹಶೀಲ್ದಾರರಿಗೆ ಹಾಗೂ ತಾಲೂಕು ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜವಾಬ್ದಾರಿ ನೀಡಲಾಗುವುದು ಎಂದರು.

ಜಿಲ್ಲೆಯ ರೈತರ ಹಿತರಕ್ಷಣೆ ಗೆ ಪೂರಕವಾಗಿ ಜಿಲ್ಲಾಡಳಿತ ಕ್ರಮಗಳನ್ನು ಕೈಗೊಳ್ಳುತ್ತಿದ್ದು, ರೈತರು ಕೂಡಾ ಅಗತ್ಯ ಸಹಕಾರ ನೀಡುವಂತೆ ಜಿಲ್ಲಾಧಿಕಾರಿ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್, ಉಪ ವಿಭಾಗಾಧಿಕಾರಿ ಶ್ರವಣ ಕುಮಾರ್, ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ, ಧಾರವಾಡ ದ ಉಪ ವಿಭಾಗಾಧಿಕಾರಿ ಸಲೀಂ ಹುಸೇನ್, ಜಥಿರಿ ಶಿವಾನಂದ ಮದುರಕಂಡಿ ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಕ್ಕರೆ ಕಾರ್ಖಾನೆಯ ಅಧಿಕಾರಿಗಳು, ರೈತ ಮುಖಂಡರು ಹಾಗೂ ಕಬ್ಬು ಬೆಳೆಗಾರರು ಇದ್ದರು.

## 15ರಂದು ನಗರಸಭೆಯ ಸಾಮಾನ್ಯ ಸಭೆ

**ಕಾರವಾರ:** ಕಾರವಾರ ನಗರ ಸಭೆಯ ಸಾಮಾನ್ಯ ಸಭೆಯು ಅ.15 ರಂದು ಬೆಳಗ್ಗೆ 11 ಗಂಟೆಗೆ ನಗರಸಭೆ ಆವರಣದಲ್ಲಿರುವ ಸಭಾಂಗಣದಲ್ಲಿ ನಡೆಯಲಿದೆ ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಕರ್ನಾಟಕ ಸರ್ಕಾರ
ಪಟ್ಟಣ ಪಂಚಾಯತ ಚಿಂಚಲಿ ಜಿಲ್ಲೆ:ಬೆಳಗಾವಿ ರಾಜ್ಯ:ಕರ್ನಾಟಕ
Office Phone No:(08331)237531 E-mail:itstaff_ulb_chinchali@yahoo.co.in
Website: www.chinchalitown.gov.in

ಪ.ಸಂ.:ಪಪಂಚಿ:ತಾಂತ್ರಿಕ ವಿಭಾಗ:25-26 ದಿನಾಂಕ:10/08/2025

ಅಲ್ಪಾವಧಿ ಟೆಂಡರ ಪ್ರಕಟಣೆ

ಚಿಂಚಲಿ ಪಟ್ಟಣ ಪಂಚಾಯತಿಯ ವಿವಿಧ ಯೋಜನೆಯ ಅನುದಾನದ ಕೆ.ಡಬ್ಲೂ-1ರ ಪ್ರಕಾರ ಟೆಂಡರಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳನ್ನು ದಲ್ಲಿ ನೋಡಬಹುದು. ಟೆಂಡರಗಳನ್ನು ಸಲ್ಲಿಸಲು ಕೊನೆಯ ದಿನಾಂಕ:16/10/2025ರಂದು ಮುಂಜಾನೆ 11:30 ಗಂಟೆಯವರೆಗೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಚಿಂಚಲಿ ಪಟ್ಟಣ ಪಂಚಾಯತಿಯ ತಾಂತ್ರಿಕ ಶಾಖೆಯಲ್ಲಿ ಸಂಪರ್ಕಿಸಬಹುದು.

| ಅ.ನಂ. | ಕಾಮಗಾರಿ ಇಂಡೆಂಟ ನಂಬರ | ವರ್ಗ |
|---|---|---|
| 01 | DMA/2025-26/RD/WORK_INDENT 49552/ CALL-2 | OTHERS |

ಸಹಿ/-ಮುಖ್ಯಾಧಿಕಾರಿ ಪಟ್ಟಣ ಪಂಚಾಯತ ಚಿಂಚಲಿ
ಸಹಿ/-ಅಧ್ಯಕ್ಷರು ಪಟ್ಟಣ ಪಂಚಾಯತ ಚಿಂಚಲಿ
DIPR/BGM/RO-NO-1153/KSMCA/2025-26


BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :209, Postal Reg No. PMG/KA/NK/BM/135/25-27 / POST AT Vantamury Colony Post Office